23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 241 | ನವದೆಹಲಿ | ಬೆಲೆ ₹ 10 | ಮಾರ್ಚ್ 4, 2026, ಬುಧವಾರ

Proudly Hosted By KIIT UNIVERSITY Bhubaneswar, Odisha

# Kalinga Institute of Industrial Technology

## KIIT first Indian University to Host FIVB World Beach Volleyball Pro Tour




**The championship promises high-octane action with participation from 164 elite athletes forming 82 international teams. Apart from players, international referees and senior FIVB officials will be in attendance, further elevating the global stature of the event. The matches will also be broadcast live worldwide through Volleyball World TV, offering global audiences a glimpse of Odisha's growing prominence on the international sporting map.**

The city is set to witness a landmark sporting event as the FIVB Volleyball World Beach Pro Tour (Men & Women) makes its Odisha debut at KIIT University from March 4 to 8, 2026. The prestigious international championship, being organised for the first time at a university campus in India, will bring together 82 teams from 52 countries, comprising 306 accredited players and officials, including Olympic gold medallists.

The tournament will be hosted at the Dutee Chand Athletic Stadium on the KIIT campus, which has been transformed into an international-standard beach volleyball arena. Elaborate arrangements have been made to ensure seamless conduct of the event. Preparations are being overseen under the direct supervision of KIIT and KISS Founder Dr. Achyuta Samanta, who has personally reviewed measures concerning player safety, accommodation, training facilities and hospitality.

The announcement of the championship in Bhubaneswar was made by FIVB President Fabio Azevedo during his visit to KIIT and KISS for the Volleyball Grand Prix last December. Impressed by the world-class sports infrastructure at KIIT and the conducive sporting environment of Odisha, Azevedo declared that the FIVB Beach Volleyball event would be organised in the state for three consecutive years — 2026, 2027 and 2028 — in collaboration with KIIT and KISS.

Speaking about the tournament, Dr. Samanta said KIIT and KISS have consistently worked towards the promotion of sports and the nurturing of sportspersons. "Volleyball is both a rural sport and an Olympic discipline. For the past eight years, we have taken continuous steps for its development, encouraging grassroots participation alongside international exposure," he said.

The championship promises high-octane action with participation from 164 elite athletes forming 82 international teams. Apart from players, international referees and senior FIVB officials will be in attendance, further elevating the global stature of the event. The matches will also be broadcast live worldwide through Volleyball World TV, offering global audiences a glimpse of Odisha's growing prominence on the international sporting map.

The competition will unfold in multiple stages, beginning with a qualification tournament, followed by the Main Draw featuring pool play. The top teams will advance to the Round of 16, Quarter Finals and Semi Finals. The tournament will culminate on March 8, 2026, with the Bronze Medal matches, Gold Medal finals and the award ceremony. ■

## ನಿತ್ಯ ಪಂಚಾಂಗ 4.03.2026 ಬುಧವಾರ

ಶ್ರೀ ಕ್ರೋಧಿ ನಾಮ ಸಂವತ್ಸರ, ದಕ್ಷಿಣಾಯನ–ಶರದ್ ಋತು, ಚಾಂದ್ರಮಾನ, ಕಾರ್ತಿಕ ಶುದ್ಧ

ಪುಷ್ಯ ಬಹುಳ ಚತುರ್ದಶಿ, ಉತ್ತರಾಷಾಢ ನಕ್ಷತ್ರ, ತ್ರೈಅವರಾತ್ರಿ ಅಮಾವಾಸ್ಯೆ, ಪುರಂದರದಾಸ ಪುಣ್ಯದಿನ ಗರುಡ ಜ., ನರಹರಿ ಸದಾಶಿವ ಪ್ರತಿಷ್ಠಾ ವರ್ಧಂತಿ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಫೋನ್ ಕದ್ದಾಲಿಕೆ, ಗೂಢಚಾರಿಕೆ ಯಾವುದೂ ನಡೆಯುತ್ತಿಲ್ಲ: ಪರಮೇಶ್ವರ್ ಸ್ಪಷ್ಟನೆ

**ಬೆಂಗಳೂರು, ಮಾ.3:** ರಾಜಕೀಯ ಗೂಢಚಾರಿಕೆ ಎಂಬ ಪ್ರತ್ಯೇಕ ವಿಭಾಗವೇ ಇದೆ. ಅದರ ಮೂಲಕ ಸಿಎಂಗೆ ಮಾಹಿತಿ ಸಹಜವಾಗಿ ನಿತ್ಯ ಹೋಗುತ್ತದೆ ಎಂದು ಗೃಹ ಸಚಿವ ಜಿ. ಪರಮೇಶ್ವರ್ ಹೇಳಿದ್ದಾರೆ.

ಡಿಕೆಶಿ ಬಣದ ಶಾಸಕರ ಮೇಲೆ ಸಿಎಂ ಗೂಢಚಾರಿಕೆ, ದೂರವಾಣಿ ಕದ್ದಾಲಿಕೆ ಆರೋಪ ವಿಚಾರವಾಗಿ ಸದಾಶಿವನಗರ ನಿವಾಸದಲ್ಲಿ ಮಾತನಾಡಿದ ಅವರು, ಸರ್ಕಾರ ನಡೆಸೋದು ನಾವು, ನಮಗೆ ಹೆಚ್ಚಿನ ಮಾಹಿತಿ ಇರುತ್ತದೆ. ಪ್ರತಿಪಕ್ಷದವರಿಗೆ ಯಾರು ಹೇಳಿದ್ದು ಗೂಢಚಾರಿಕೆ, ಫೋನ್ ಟ್ಯಾಪಿಂಗ್ ಮಾಡ್ತಿದ್ದಾರೆ ಅಂತ. ಅಂತಹ ಬೆಳವಣಿಗೆ ಯಾವುದೂ ನಡೆಯುತ್ತಿಲ್ಲ. ನಮ್ಮ ಗಮನಕ್ಕೆ ಅಧಿಕೃತವಾಗಿ ಆ ರೀತಿಯದ್ದು ಯಾವುದೂ ಇಲ್ಲ ಎಂದು ಸ್ಪಷ್ಟಪಡಿಸಿದರು.

ಸಿಎಂ ಗಮನಕ್ಕೂ ಅಂತಹ ವಿಚಾರ ಯಾವುದೂ ಇಲ್ಲ. ಫೋನ್ ಟ್ಯಾಪಿಂಗ್ ಮಾಡಿ ಯಾರ್‍ಯಾರು ಎಲ್ಲೆಲ್ಲಿ ಹೋದ್ರು, ಏನು ಮಾಡಿದ್ರು ಅನ್ನೋದೆಲ್ಲ ನಡೆಯುತ್ತಿಲ್ಲ. ರಾಜಕೀಯ ಗೂಢಚಾರಿಕೆ ಮೂಲಕ ಹಿಂದಿನಿಂದಲೂ ಎಲ್ಲ ಮುಖ್ಯಮಂತ್ರಿಗಳಿಗೂ ಮಾಹಿತಿ ಹೋಗುತ್ತದೆ. ನಿರ್ದಿಷ್ಟವಾಗಿ ಯಾವ ಮಾಹಿತಿ ಬೇಕು ಅನ್ನೋದು ಸಿಎಂ ವಿವೇಚನೆಗೆ ಬಿಟ್ಟಿದ್ದು ಎಂದು ಸ್ಪಷ್ಟಪಡಿಸಿದರು.

ಕೊಲ್ಲಿ ದೇಶಗಳಲ್ಲಿ ಕನ್ನಡಿಗರು ಸಿಲುಕಿರುವ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ಈಗಾಗಲೇ ಸಿಎಂ



ಹಾಗೂ ಸಿಎಸ್ ಪತ್ರ ಬರೆದಿದ್ದಾರೆ. ಅಲ್ಲಿ ಸಿಲುಕಿರುವ ಕನ್ನಡಿಗರನ್ನು ಕರೆಸಿ ಅಂತ ಪತ್ರ ಬರೆದಿದ್ದಾರೆ. ಸುಮಾರು ಜನ ಅಲ್ಲಿ ಸಿಲುಕಿದ್ದಾರೆ. ಅವರೆಲ್ಲ ಯಾವ ಸ್ಥಿತಿಯಲ್ಲಿದ್ದಾರೆ ಅಂತ ಗೊತ್ತಿಲ್ಲ. ನಾನು ಭೋಜೇಗೌಡ ಅವರಿಗೆ ಕರೆ ಮಾಡಿ ಮಾಹಿತಿ ಪಡೆದಿದ್ದೇನೆ. ದುಬೈನಲ್ಲಿರುವ ಕೆಲವರು ಸಹಾಯ ಮಾಡ್ತಿದ್ದಾರೆ. ಭೋಜೇಗೌಡ ಅವರ ಕುಟುಂಬ ಅಲ್ಲಿ ಸಿಕ್ಕಿಕೊಂಡಿದೆ. ಬಂಕರ್ ನಲ್ಲಿಟ್ಟಿದ್ರು ಅಂತ ಭೋಜೇಗೌಡ ಹೇಳಿದ್ರು. ಇನ್ನೂ ಬಹಳ ಜನ ಇದ್ದಾರೆ, ನಮ್ಮ ಕೆಲವು ಶಾಸಕರು ಸಹ ಇದ್ದಾರೆ ಎಂದು ಹೇಳಿದರು.

### ಯಾರೇ ಆದರೂ ನಿಯಮಾನುಸಾರ ಪ್ರತಿಭಟಿಸಬೇಕು

ಖಮೇನಿ ಪರ ಪ್ರತಿಭಟನೆ ನಡೆಸಿದವರ ವಿರುದ್ಧ ಕ್ರಮ ಕೈಗೊಳ್ಳುವ ವಿಚಾರವಾಗಿ ಮಾತನಾಡಿ, ಅವರು ಅಲ್ಲಿ ಪ್ರತಿಭಟನೆ ಮಾಡಿದ್ದು ನಿಯಮ ಬಾಹಿರ. ಕೋರ್ಟ್ ಹೇಳಿರೋದು ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ಮಾಡಿ ಅಂತ. ಮೊನ್ನೆ ಪ್ರತಿಭಟನೆ ಮಾಡಿದವರ ವಿರುದ್ಧ ಕ್ರಮದ ಬಗ್ಗೆ ಚರ್ಚೆ ಮಾಡ್ತೇನೆ. ಹ್ಯಾರೀಸ್ ಇರಲಿ, ಯಾರೇ ಇರಲಿ ನಿಯಮಾನುಸಾರ ಪ್ರತಿಭಟನೆ ಮಾಡಬೇಕು. ತಪ್ಪಾಗಿದ್ರೆ ಪರಿಶೀಲಿಸಿ ಕ್ರಮ ತಗೋತೇವೆ ಎಂದರು. ಖಮೇನಿ ಹತ್ಯೆ ಹಿನ್ನೆಲೆಯಲ್ಲಿ ನಿಗಾ ಇಡಲು ಕೇಂದ್ರ ಗೃಹ ಇಲಾಖೆಯಿದ ರಾಜ್ಯಗಳಿಗೆ ಸೂಚನಾ ಪತ್ರ ಕಳಿಸಿರುವ ವಿಚಾರವಾಗಿ ಪ್ರತಿಕ್ರಿಯಿಸಿ, ಆ ರೀತಿಯ ಪತ್ರದ ಬಗ್ಗೆ ನನ್ನ ಗಮನಕ್ಕೆ ಬಂದಿಲ್ಲ. ನಮ್ಮ ಡಿಜಿ ಅವರು ನನಗೆ ಏನೂ ಹೇಳಿಲ್ಲ. ನಾನೂ ಅಂತಹ ಪತ್ರ ಬಂದಿದೆ ಅಂತ ಮಾಧ್ಯಮಗಳಲ್ಲೇ ನೋಡಿದ್ದು, ಸಂಭಾವ್ಯ ಅಹಿತಕರ ಘಟನೆಗಳು ಆಗುತ್ತವೆ ಅಂತ ನನಗೆ ಅನಿಸಿಲ್ಲ. ಏನೇ ಇದ್ರೂ ನಾವು ಎಚ್ಚರಿಕೆ ವಹಿಸ್ತೇವೆ ಎಂದು ಪರಮೇಶ್ವರ್ ತಿಳಿಸಿದ್ದಾರೆ.



ಪದ್ಮನಾಭ ನಗರ ವಿಧಾನಸಭಾ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ಕಾಯಂ ನೇಮಕಾತಿ ಆದೇಶದ ಪ್ರತಿಗಳನ್ನು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಅವರು ವಿತರಣೆ ಮಾಡಿದರು. ಈ ಸಂದರ್ಭದಲ್ಲಿ ಮಂಡಲ ಅಧ್ಯಕ್ಷ ಲಕ್ಷ್ಮೀಕಾಂತ, ರಾಜ್ಯ ಓಬಿಸಿ ಕೋಶಾಧ್ಯಕ್ಷ.ಎ.ಎಚ್.ಬಸವರಾಜ್, ಬಿಜೆಪಿ ಮುಖಂಡ ಕಬ್ಬಾಳ್ ಉಮೇಶ್, ವೆಂಕಟಸ್ವಾಮಿ ನಾಯ್ಡು, ವೆಂಕಟೇಶ್, ಜಿ.ಬಿ.ಎ ಅಧಿಕಾರಿಗಳು ಉಪಸ್ಥಿತರಿದ್ದರು.

# ಕನ್ನಡಿಗರ ರಕ್ಷಣೆಗೆ ಕೇಂದ್ರದ ಜೊತೆ ಮಾತುಕತೆ: ಬಿ.ವೈ.ವಿಜಯೇಂದ್ರ

**ಬೆಂಗಳೂರು, ಮಾ.2:** ಅಮೆರಿಕ, ಇಸ್ರೇಲ್ – ಇರಾನ್ ಯುದ್ಧ ನಡೆಯುತ್ತಿರುವ ಸಂದರ್ಭದಲ್ಲಿ ದುಬೈಯಲ್ಲಿ ಸಿಲುಕಿ ಆತಂಕದಲ್ಲಿ ಸಿಲುಕಿರುವ ಕನ್ನಡಿಗರ ಜೊತೆ ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ. ವೈ.ವಿಜಯೇಂದ್ರ ಅವರು ಮಂಗಳವಾರ ಮಾತನಾಡಿ ಅವರಿಗೆ ಧೈರ್ಯ ತುಂಬಿದರು.

ಸಂಕಷ್ಟದಲ್ಲಿ ಸಿಲುಕಿದ ಕನ್ನಡಿಗರನ್ನು ತಕ್ಷಣ ಕರ್ನಾಟಕಕ್ಕೆ ಕರೆದುಕೊಂಡು ಬರಲು ಕೇಂದ್ರ ಸರಕಾರದ ಜೊತೆ ಮಾತನಾಡುತ್ತೇನೆಂದು ಅವರು ಭರವಸೆ ನೀಡಿದರು. ಪ್ರಶಸ್ತಿ ಪಡೆಯಲೆಂದು ಒಟ್ಟು 61 ಜನರ ತಂಡವು ತೆರಳಿದ್ದು, ದುಬೈಯಲ್ಲಿ ವಾಸ್ತವ್ಯ ಇರುವುದಾಗಿ ತಂಡದವರು ನುಡಿದರು. ಅರಸೀಕೆರೆಯ ಐವರೂ ಇವರ ಜೊತೆಗೆ ಇರುವುದಾಗಿ ಹಾಗೂ ಹೋಟೆಲ್ ಒಂದರಲ್ಲಿ ತಂಗಿರುವುದಾಗಿ ಅವರು ಆತಂಕವನ್ನು ಹಂಚಿಕೊಂಡರು.

ಇದೀಗ 7ನೇ ದಿನ ತಲುಪಿದೆ. ಇವತ್ತು ರಾತ್ರಿ ಇದ್ದ ವಿಮಾನವೂ ರದ್ದಾಗಿದೆ ಎಂದು ವಿವರಿಸಿದರು. ಪ್ರಧಾನಿ ನರೇಂದ್ರ ಮೋದಿ ಅವರು ಇದರ ಸಂಬಂಧ ಆದ್ಯ ಗಮನ ಕೊಟ್ಟಿದ್ದಾರೆ. ಹಿಂದೆ ಉಕ್ರೇನ್‌ನಲ್ಲಿ ಇಂಥ ಸಮಸ್ಯೆ ಆದಾಗ ಕೇಂದ್ರ ಸರಕಾರವು ಅದನ್ನು



ಬಗೆಹರಿಸಿತ್ತು. ಅಲ್ಲಿ ಸಿಲುಕಿದ್ದವರನ್ನು ಕರೆದುಕೊಂಡು ಬರುವ ವ್ಯವಸ್ಥೆ ಮಾಡಲಾಗಿತ್ತು. ಈ ಯುದ್ಧ ಅಚಾನಕ್ ಆಗಿ ಆರಂಭವಾಗಿದೆ.

ದೆಹಲಿಯ ಸಂಬಂಧಿತರ ಜೊತೆ ನಾನು ಕೂಡ ಮಾತನಾಡುವೆ ಎಂದು ವಿಜಯೇಂದ್ರ ಅವರು ಧೈರ್ಯ ತುಂಬಿದರು. ತಂಡವು ಸುರಕ್ಷಿತವಾಗಿ ವಾಪಸ್ ಬರಲು ಕ್ರಮ ಕೈಗೊಳ್ಳುವಂತೆ ಕೋರುವುದಾಗಿ ತಿಳಿಸಿದರು. ಆತಂಕಗೊಳ್ಳದಿರಿ; ನೀವೆಲ್ಲರೂ ಸುರಕ್ಷಿತವಾಗಿ ವಾಪಸ್ ಬರಲು ಕ್ರಮ ಕೈಗೊಳ್ಳಲು ಕೋರಲಿದ್ದೇನೆ ಎಂದು ಧೈರ್ಯ ಹೇಳಿದರು.

**ಫೋನ್ ಕದ್ದಾಲಿಕೆ: ಆಧಾರರಹಿತ ಆರೋಪ, ಗೊಂದಲ ಸೃಷ್ಟಿಸಬೇಡಿ**

# ಸಾಕ್ಷಿ ಕೊಟ್ಟರೆ ಪ್ರಕರಣ ದಾಖಲು ಎಚ್‌ಡಿಕೆಗೆ ಪೊನ್ನಣ್ಣ ತಿರುಗೇಟು



**ಬೆಂಗಳೂರು, ಮಾ.3:** ಸರ್ಕಾರದ ವಿರುದ್ಧ ಫೋನ್ ಕದ್ದಾಲಿಕೆ ಆರೋಪ ಮಾಡಿದ ಕೇಂದ್ರ ಸಚಿವ ಕುಮಾರಸ್ವಾಮಿ ಅವರಿಗೆ ಕಾನೂನು ಸಲಹೆಗಾರ ಪೊನ್ನಣ್ಣ ತಿರುಗೇಟು ನೀಡಿದ್ದಾರೆ. ವಿಧಾನಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಫೋನ್ ಟ್ಯಾಪಿಂಗ್ ಬಹಳ ಗಂಭೀರವಾದ ವಿಚಾರ. ಹಿಂದೆ ರಾಮಕೃಷ್ಣ ಹೆಗಡೆ ರಾಜೀನಾಮೆ ಕೊಡಬೇಕಾಯ್ತು. ಫೋನ್ ಟ್ಯಾಪಿಂಗ್ ಆರೋಪಕ್ಕೆ ಸಾಕ್ಷಿ ಕೊಡಬೇಕು. ಆಧಾರರಹಿತ ಆರೋಪ ಮಾಡಿ ಗೊಂದಲ ಸೃಷ್ಟಿಸಬಾರದು ಅಂತ ಕಿಡಿಕಾರಿದರು. ಫೋನ್ ಟ್ಯಾಪಿಂಗ್ ಮಾಡಲು ಸಾಕಷ್ಟು ಕ್ರಮ ಇದೆ. ರಾಜಕೀಯ ಆರೋಪಗಳಿಗೆ ಪ್ರತಿಕ್ರಿಯಿಸುವ ಅಗತ್ಯವಿಲ್ಲ. ಆಧಾರ ಕೊಟ್ಟರೆ ಅಪರಾಧ ಆಗುತ್ತೆ. ಕೇಸ್ ಆಗುತ್ತೆ ತನಿಖೆ ಮಾಡುತ್ತಾರೆ. ರಾಜಕೀಯವಾಗಿ ಇಂಟೆಲಿಜೆನ್ಸ್ ಕೆಲಸ ಮಾಡಲು ಆಗಲ್ಲ. ಫೋನ್ ಟ್ಯಾಪಿಂಗ್ ವಿಚಾರವನ್ನ ಸುಪ್ರಿಂ ಕೋರ್ಟ್ ಕೂಡ ಗಂಭೀರವಾಗಿ ಪರಿಗಣಿಸುತ್ತೆ. ಮಾಧ್ಯಮಗಳ ಮುಂದೆ ಬರುವ ಮುನ್ನ ತನಿಖಾ ಸಂಸ್ಥೆಗಳಿಗೆ ಆಧಾರಗಳನ್ನ ನೀಡಬೇಕು. ಅದು ಪ್ರತಿಯೊಬ್ಬ ನಾಗರಿಕರ ಕರ್ತವ್ಯ ಅಂತ ಕುಮಾರಸ್ವಾಮಿ ಆರೋಪಕ್ಕೆ ಪೊನ್ನಣ್ಣ ತಿರುಗೇಟು ಕೊಟ್ಟರು.

# ಫೋನ್ ಕದ್ದಾಲಿಕೆ ವೈಯಕ್ತಿಕ ಆರೋಪವಲ್ಲ: ಅಶೋಕ್

**ಬೆಂಗಳೂರು, ಮಾ.3:** ಗುಪ್ತಚರ ಇಲಾಖೆಯ ದುರ್ಬಳಕೆ ಆಗುತ್ತಿದೆ ಎನ್ನುವುದು ವೈಯಕ್ತಿಕ ಆರೋಪವಲ್ಲ. ಈ ವರದಿಯನ್ನು ಪ್ರತಿಷ್ಠಿತ ಮಾಧ್ಯಮ ಸಂಸ್ಥೆಯೊಂದು ತನ್ನ ಮೂಲಗಳಿಂದ ಸಂಗ್ರಹಿಸಿದ ಮಾಹಿತಿಯ ಆಧಾರದ ಮೇಲೆ ಪ್ರಕಟಿಸಿದೆ. ತಮಗೆ ಈ ವರದಿಯ ಬಗ್ಗೆ ಆಕ್ಷೇಪವಿದ್ದರೆ, ವರದಿ ಪ್ರಕಟಿಸಿದ ಸಂಸ್ಥೆಯ ವಿರುದ್ಧ ಕ್ರಮ ಕೈಗೊಳ್ಳಬೇಕೇ ಹೊರತು, ಆ ವರದಿಗೆ ಪ್ರತಿಕ್ರಿಯಿಸಿದ ವಿರೋಧ ಪಕ್ಷದ ವಿರುದ್ಧವಲ್ಲ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ್ದಾರೆ.

ವರದಿಯಲ್ಲಿರುವ ಗಂಭೀರ ಅಂಶಗಳಿಗೆ ನೇರವಾಗಿ ಉತ್ತರಿಸುವ ಬದಲು, ತಾವು ಕ್ಷುಲ್ಲಕ, ಅಸಂಬದ್ಧ ರಾಜಕೀಯ ವಾಗ್ದಾಳಿ ನಡೆಸಲು ಮುಂದಾಗಿದ್ದೀರಿ. ನಿಮ್ಮ ಈ ಪ್ರತಿಕ್ರಿಯೆಯೇ ಹಲವು ಅನುಮಾನಗಳಿಗೆ ಎಡೆಮಾಡಿಕೊಡುತ್ತಿದೆ. ಒಂದು ವೇಳೆ ವರದಿ ಸುಳ್ಳಾಗಿದ್ದರೆ, ಅದನ್ನು ಸ್ಪಷ್ಟವಾಗಿ ನಿರಾಕರಿಸಿ ಪತ್ರಿಕೆಯಿಂದ ಸ್ಪಷ್ಟೀಕರಣ ಕೇಳಿ. ಅದನ್ನು ಬಿಟ್ಟು, ವಿಷಯಕ್ಕೆ ಸಂಬಂಧವೇ ಇಲ್ಲದಂತೆ ವಿರೋಧ ಪಕ್ಷದ ಮೇಲೆ ಹರಿಹಾಯುವುದು ಸಂಶಯವನ್ನು ಇನ್ನಷ್ಟು ಹೆಚ್ಚಿಸುತ್ತದೆ ಎಂದಿದ್ದಾರೆ. ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಶಾಸಕರ ಚಟುವಟಿಕೆಗಳ ಬಗ್ಗೆ ನಿರಂತರ ಮಾಹಿತಿ ನೀಡುವಂತೆ ರಾಜ್ಯ ಗುಪ್ತಚರ ಇಲಾಖೆಗೆ ಸೂಚಿಸಲಾಗಿದೆ ಎಂದು ಆ ವರದಿಯಲ್ಲಿ ಸ್ಪಷ್ಟವಾಗಿ ಉಲ್ಲೇಖಿಸಲಾಗಿದೆ. ಈ ಪದಗಳು ಸೃಷ್ಟಿಯಲ್ಲ, ಇವು ಸಾರ್ವಜನಿಕ ವಲಯದಲ್ಲಿರುವ ಮಾಧ್ಯಮ ವರದಿಯ ಭಾಗವಾಗಿದೆ. ಇಂತಹ ಗಂಭೀರ ವಿಷಯಗಳು ಮುನ್ನೆಲೆಗೆ ಬಂದಾಗ, ವಿರೋಧ ಪಕ್ಷದ ನಾಯಕನಾಗಿ ಸ್ಪಷ್ಟತೆ ಕೇಳುವುದು ನನ್ನ ಸಾಂವಿಧಾನಿಕ ಜವಾಬ್ದಾರಿಯಾಗಿದೆ. ಜನರ ಮುಂದೆ ಸತ್ಯಾಂಶಗಳನ್ನು ಇಡುವ ಬದಲು, ತಾವು ಯಾವುದೋ ಹಳೆಯ ಇತಿಹಾಸವನ್ನು ಕೆದಕಿ, ಸಂಬಂಧವಿಲ್ಲದ ರಾಷ್ಟ್ರೀಯ ನಾಯಕರನ್ನು ಎಳೆದು ತರುವ ಮೂಲಕ ವಿಷಯಾಂತರ ಮಾಡಲು ಯತ್ನಿಸುತ್ತಿರುವುದು ತಾವು ವರದಿಯಿಂದ ಗಲಿಬಿಲಿಗೊಂಡಿರುವುದನ್ನ ಸ್ಪಷ್ಟವಾಗಿ ತೋರಿಸುತ್ತದೆ ಎಂದಿದ್ದಾರೆ ನನ್ನ ಪ್ರಶ್ನೆ ಅತ್ಯಂತ ನೇರ ಮತ್ತು ಸರಳವಾಗಿದೆ. ರಾಜ್ಯ ಗುಪ್ತಚರ ಇಲಾಖೆಯನ್ನು ಕೇವಲ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ಬಳಸಲಾಗುತ್ತಿದೆಯೇ ಅಥವಾ ಕಾಂಗ್ರೆಸ್ ಪಕ್ಷದ ಆಂತರಿಕ ಬಣ ರಾಜಕೀಯವನ್ನು ನಿಭಾಯಿಸಲು ಬಳಸಿಕೊಳ್ಳಲಾಗುತ್ತಿದೆಯೇ ಕರ್ನಾಟಕದ ಜನತೆಗೆ ಇದಕ್ಕೆ ನೇರ ಮತ್ತು ಪ್ರಾಮಾಣಿಕ ಉತ್ತರ ಬೇಕಿದೆ ಎಂದು ಅಶೋಕ್ ತಿಳಿಸಿದ್ದಾರೆ.

### ವಿದೇಶಾಂಗ ನೀತಿ ದೇಶೀಯ ಮತಬ್ಯಾಂಕ್ ಚುನಾವಣಾ ಲೆಕ್ಕಾಚಾರದ ಮೇಲೆ ರೂಪುಗೊಳ್ಳಲ್ಲ

ರಾಜ್ಯ ತನ್ನ ಮುಖ್ಯಮಂತ್ರಿಯಿಂದ ಪ್ರಬುದ್ಧತೆಯನ್ನು ನಿರೀಕ್ಷಿಸುತ್ತದೆ, ಸೂಕ್ಷ್ಮ ಅಂತಾರಾಷ್ಟ್ರೀಯ ವಿಷಯಗಳ ಬಗ್ಗೆ ಹಠಾತ್ ಹೇಳಿಕೆಯಲ್ಲ ಎಂದು ಪ್ರತಿಪಕ್ಷ ನಾಯಕ ಆರ್ ಅಶೋಕ್ ಹೇಳಿದ್ದಾರೆ. ಈ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಹೇಳಿಕೆ ಹಾಕಿರುವ ಅವರು, ಭಾರತದ ವಿದೇಶಾಂಗ ನೀತಿಯು ನವದೆಹಲಿಯಲ್ಲಿ ಕಾರ್ಯತಂತ್ರದ ಆಳ ಮತ್ತು ರಾಷ್ಟ್ರೀಯ ಹಿತಾಸಕ್ತಿಯನ್ನು ಮಾರ್ಗದರ್ಶಿ ತತ್ವವಾಗಿಟ್ಟುಕೊಂಡು ನಿರ್ಧರಿಸಲಾಗುತ್ತದೆ. ಇದು ದೇಶೀಯ ಮತ–ಬ್ಯಾಂಕ್ ಒತ್ತಾಯಗಳು ಅಥವಾ ಚುನಾವಣಾ ಲೆಕ್ಕಾಚಾರಗಳಿಂದ ರೂಪುಗೊಳ್ಳುವುದಿಲ್ಲ ಎಂದಿದ್ದಾರೆ. ಜಾಗತಿಕ ಉದ್ವಿಗ್ನತೆಗಳು ಹೆಚ್ಚುತ್ತಿರುವ ಸಮಯದಲ್ಲಿ, ಜವಾಬ್ದಾರಿಯುತ ನಾಯಕರು ಸಂಯಮವನ್ನು ಅನುಸರಿಸುತ್ತಾರೆ. ದುರದೃಷ್ಟವಶಾತ್, ಆಪರೇಷನ್ ಸಿಂಧೂರ ಸಮಯದಲ್ಲಿ, ನಿಮ್ಮ ಹೇಳಿಕೆಗಳು ರಾಜ್ಯಕ್ಕೆ ಅನಗತ್ಯ ವಿವಾದ ಮತ್ತು ಮುಜುಗರವನ್ನುಂಟು ಮಾಡಿದ್ದವು, ಈಗ, ಮತ್ತೊಮ್ಮೆ, ರಾಜನೀತಿಯ ಬದಲಿಗೆ, ನಾವು ಸಮಾಧಾನಗೊಳಿಸುವ ರಾಜಕೀಯದಲ್ಲಿ ಬೇರೂರಿರುವ ಹೋಲಿಕೆ ರಾಜಕಾರಣವನ್ನ ಪ್ರತಿಬಿಂಬಿಸುತ್ತಿದೆ ಹಾಗಾಗಿ ನಾವು ಇದನ್ನು ಸ್ಪಷ್ಟವಾಗಿ ಅರ್ಥಮಾಡಿಕೊಳ್ಳೋಣ: ವಿದೇಶಾಂಗ ನೀತಿಯು ಸೈದ್ಧಾಂತಿಕ ನಿಲುವುಗಳಿಗೆ ಒಂದು ವೇದಿಕೆಯಲ್ಲ. ಇದು ಭಾರತದ ಸಾರ್ವಭೌಮತ್ವವನ್ನು ಕಾಪಾಡುವುದು, ಕಾರ್ಯತಂತ್ರದ ಸಮತೋಲನವನ್ನು ಕಾಪಾಡಿಕೊಳ್ಳುವುದು ಮತ್ತು ನಮ್ಮ ಜಾಗತಿಕ ನಿಲುವನ್ನು ಬಲಪಡಿಸುವ ನಿಲುವು ಅವಶ್ಯ ಎಂದಿದ್ದಾರೆ. ಮುಖ್ಯಮಂತ್ರಿಯಾಗಿ ನಿಮ್ಮ ಮಾತುಗಳು ತೂಕದಿಂದ ಕೂಡಿರುತ್ತವೆ. ಪಕ್ಷಪಾತದ ಲೆಕ್ಕಾಚಾರಗಳನ್ನು ಮೀರಿ ನಿಮ್ಮ ಹುದ್ದೆಯ ಘನತೆಯನ್ನು ಎತ್ತಿಹಿಡಿಯಿರಿ. ಎಂದು ಅಶೋಕ್ ಸಲಹೆ ಮಾಡಿದ್ದಾರೆ.

# ಜಿಬಿಎ ಅಭ್ಯರ್ಥಿಗಳ ಗುರುತಿಸಲು ಜೆಡಿಎಸ್ ವಾರದ ಗಡುವು

**ಬೆಂಗಳೂರು ಮಾ.3:** ಗ್ರೇಟರ್ ಬೆಂಗಳೂರು ಪ್ರಾಧಿಕಾರದ 369 ವಾರ್ಡುಗಳಿಗೆ ಜೆಡಿಎಸ್ ಪಕ್ಷದ ಅಭ್ಯರ್ಥಿಗಳನ್ನು ಗುರುತಿಸಲು ಒಂದು ವಾರದ ಗಡುವು ನಿಗದಿ ಮಾಡಿರುವ ಅಧ್ಯಕ್ಷ ಎಚ್.ಎಂ. ರಮೇಶ್ ಗೌಡರು; ಅಂತಿಮ ಪಟ್ಟಿಯನ್ನು ರಾಜ್ಯಾಧ್ಯಕ್ಷರಾದ ಹೆಚ್.ಡಿ. ಕುಮಾರಸ್ವಾಮಿ ಅಂತಿಮ ಪರಿಶೀಲನೆ ನಡೆಸಲಿದ್ದಾರೆ ಎಂದು ಹೇಳಿದರು.

ಪಕ್ಷದ ರಾಜ್ಯ ಕಚೇರಿ ಜೆ.ಪಿ. ಭವನದಲ್ಲಿ ಜಿಬಿಎ ಐದು ವಿಭಾಗಗಳ ಅಧ್ಯಕ್ಷರು ಹಾಗೂ ಎಲ್ಲಾ ವಿಧಾನಸಭೆ ಕ್ಷೇತ್ರಗಳ ಅಧ್ಯಕ್ಷರ ಸಭೆಯಲ್ಲಿ ಮಾತನಾಡಿದ ಅವರು; ರಾಷ್ಟ್ರೀಯ ಮತ್ತು ರಾಜ್ಯಾಧ್ಯಕ್ಷರ ನಿರ್ದೇಶನದ ಮೇರೆಗೆ ಎಲ್ಲಾ ವಾರ್ಡುಗಳಲ್ಲಿ ಅಭ್ಯರ್ಥಿಗಳನ್ನು ಅದಷ್ಟು ಬೇಗ ಗುರುತಿಸಬೇಕು. ಸಂಘಟನಾ ಶಕ್ತಿ ಹಾಗೂ ಗೆಲುವಿನ ಮಾನದಂಡ ಮುಖ್ಯ ಆಗಿರುತ್ತದೆ. ಈ ಬಗ್ಗೆ ವರಿಷ್ಠರು ಸ್ಪಷ್ಟ ಸೂಚನೆ ನೀಡಿದ್ದಾರೆ ಎಂದು ಹೇಳಿದರು.

ಜೆಡಿಎಸ್ ಮತ್ತು ಬಿಜೆಪಿ ಪಕ್ಷಗಳ ಎನ್ಡಿಎ ಮೈತ್ರಿಕೂಟ ಅಧಿಕಾರಕ್ಕೆ ಬರಬೇಕು. ಅದುವೇ ದೇವೇಗೌಡರು ಹಾಗೂ ಕುಮಾರಸ್ವಾಮಿ ಅವರ ಸಂಕಲ್ಪ ಆಗಿದೆ. ಮೈತ್ರಿಯನ್ನು ಗಮನದಲ್ಲಿಟ್ಟುಕೊಂಡು, ಅದಕ್ಕೆ ಯಾವುದೇ ಚ್ಯುತಿ ಬರದಂತೆ ಎಲ್ಲರೂ ಅವರವರ ವಾರ್ಡುಗಳಲ್ಲಿ ಕೆಲಸ ಮಾಡಬೇಕು ಎಂದು ಅವರು ಸೂಚಿಸಿದರು.

ಅಲ್ಲದೆ, ಮತ್ತಗಟ್ಟೆ ಹಾಗೂ ವಾರ್ಡು ಮಟ್ಟದಲ್ಲಿ ಸದಸ್ಯತ್ವ ನೋಂದಣಿ



- ರಾಜ್ಯಾಧ್ಯಕ್ಷರು ಪಟ್ಟಿ ಪರಿಶೀಲನೆ ನಂತರ ಅಂತಿಮ ಎಚ್.ಎಂ.ರಮೇಶ್ ಗೌಡ
- ನಗರದ ಐದು ವಿಭಾಗ, ವಿಧಾನಸಭೆ ಕ್ಷೇತ್ರಗಳ ಅಧ್ಯಕ್ಷರ ಸಭೆಯಲ್ಲಿ ಮತನಾಡಿದ ಜಿಬಿಎ ಅಧ್ಯಕ್ಷರು

ಅಭಿಯಾನವನ್ನು ಚುರುಕು ಮಾಡಬೇಕು. ಸಕ್ರಿಯ ಕಾರ್ಯಕರ್ತರನ್ನು ಮುನ್ನೆಲೆಗೆ ತರಬೇಕು. ಶೀಘ್ರದಲ್ಲಿ ಬೆಂಗಳೂರು ನಗರದಲ್ಲಿ ಬೃಹತ್ ಸಮಾವೇಶ ಮಾಡುವ ಚಿಂತನೆ ವರಿಷ್ಠರು ಹೊಂದಿದ್ದು, ಆ ಸಮಾವೇಶವನ್ನು ಯಶಸ್ವಿಗೊಳಿಸಲು ಪರಿಯೊಬ್ಬರು ಶ್ರಮಿಸಬೇಕು ಎಂದು ಅವರು ಕೋರಿದರು.

ಜಿಬಿಎ ಐದು ವಿಭಾಗಗಳ ಅಧ್ಯಕ್ಷರು ಹಾಗೂ ಎಲ್ಲಾ ವಿಧಾನಸಭೆ ಕ್ಷೇತ್ರಗಳ ಅಧ್ಯಕ್ಷರು ಪರಸ್ಪರ ಅನ್ವಯತೆಯಿಂದ ಕೆಲಸ ಮಾಡಬೇಕು ಎಂದು ಸೋಮವಾರ ನಡೆದ ಸಭೆಯಲ್ಲಿ ರಾಜ್ಯಾಧ್ಯಕರು ತಾಕೀತು ಮಾಡಿದ್ದಾರೆ.

ಒಮ್ಮತ, ಒಗ್ಗಟಿನಲ್ಲಿ ಬಲವಿದೆ ಎನ್ನುವುದನ್ನು ಮರೆಯಬಾರದು. ಬೆಂಗಳೂರು ನಗರದ ಅಭಿವೃದ್ಧಿಗೆ ದೇವೇಗೌಡರು, ಕುಮಾರಸ್ವಾಮಿ ಅವರ ಕೊಡುಗೆ ಬಹಳಷ್ಟಿದೆ. ಜನತೆಗೆ ಈ ಎಲ್ಲಾ ಮಾಹಿತಿ ಕೊಡಬೇಕು. ಪಕ್ಷದ ಸಾಧನೆಗಳನ್ನು ವಿನಮ್ರವಾಗಿ ಜನತೆಯ ಗಮನಕ್ಕೆ ತನ್ನಿ ಎಂದು ಅವರು ಹೇಳಿದರು.

ಸಭೆಯಲ್ಲಿ ಬೆಂಗಳೂರು ಉತ್ತರ ನಗರ ಜಿಲ್ಲೆಯ ಅಧ್ಯಕ್ಷರು ಹಾಗೂ ಮಾಜಿ ಶಾಸಕ ಇ. ಕೃಷ್ಣಪ್ಪ, ಮಾಜಿ ಶಾಸಕರಾದ ಕೆ.ಎ. ತಿಪ್ಪೇಸ್ವಾಮಿ, ಪೂರ್ವ ನಗರ ಜಿಲ್ಲೆಯ ಅಧ್ಯಕ್ಷ ನಟರಾಜ್ ಗಂಗಾಧರ್, ಗ್ರೇಟರ್ ಬೆಂಗಳೂರು ಮಹಿಳಾ ಅಧ್ಯಕ್ಷೆ ಶೈಲಾ ಸಂತೋಜಿ ರಾವ್ ಸೇರಿ ಅನೇಕ ಪ್ರಮುಖರು ಸಭೆಯಲ್ಲಿ ಹಾಜರಿದ್ದರು.

### ಮೈತ್ರಿ ಬಗ್ಗೆ ಬಹಿರಂಗವಾಗಿ ಮಾತನಾಡಬೇಡಿ: ಎಚ್ಡಿಕೆ

ಜನರು ಕೂಡ ಬಿಜೆಪಿ–ಜೆಡಿಎಸ್ ಮೈತ್ರಿಯನ್ನು ಇಷ್ಟಪಟ್ಟಿದ್ದಾರೆ. ಯಾರೂ ಕೂಡ ಮೈತ್ರಿ ವಿಚಾರದಲ್ಲಿ ಬಹಿರಂಗವಾಗಿ ಮಾತನಾಡಬಾರದು. ಪಕ್ಷ ಸಂಘಟನೆಗೆ ಹೆಚ್ಚು ಒತ್ತು ನೀಡಿ ಸ್ಥಳೀಯ ಕಾರ್ಯಕರ್ತರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಹೋಗಬೇಕು ಎಂದು ಜೆಡಿಎಸ್ ಮುಖಂಡ ಹಾಗೂ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಪಕ್ಷದ ಕಾರ್ಯಕರ್ತರು, ಮುಖಂಡರಿಗೆ ಸಲಹೆ ಮಾಡಿದ್ದಾರೆ.

# ಮುಖ್ಯಮಂತ್ರಿ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್‌ಗೆ ಗಾಂಧಿ ಪುರಸ್ಕಾರ ಪ್ರದಾನ



**ಬೆಂಗಳೂರು,ಮಾ.3:** ಕರ್ನಾಟಕ ರಾಜ್ಯ ಪತ್ರಿಕಾ ವಿತರಕರ ಒಕ್ಕೂಟ, ಯೋಗಕ್ಷೇಮ ಮೀಡಿಯಾ ಪ್ರೈವೇಟ್ ಲಿಮಿಟೆಡ್, ವಿಶ್ವಂ ಟಿವಿ ವತಿಯಿಂದ ನೀಡಿದ ಗಾಂಧಿ ಪುರಸ್ಕಾರವನ್ನು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ ಪ್ರಭಾಕರ್ ಅವರಿಗೆ ಶಕ್ತಿ ಭವನದಲ್ಲಿ ಪ್ರದಾನ. ನಸುಕಿನ ನೊಗ ನಾಟಕ ಪ್ರದರ್ಶನಕ್ಕೆ ಕಾರಣಾಂತರದಿಂದ ಕೆವಿಪಿ ಅವರು ಬರಲು ಸಾಧ್ಯವಾಗದ ಹಿನ್ನೆಲೆಯಲ್ಲಿ ಇಂದು ಪ್ರಶಸ್ತಿಯನ್ನು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು, ಕರ್ನಾಟಕ ರಾಜ್ಯ ಪತ್ರಿಕಾ ವಿತರಕರ ಒಕ್ಕೂಟದ ರಾಜ್ಯಾಧ್ಯಕ್ಷರಾದ ಶಂಭುಲಿಂಗ, ಯೋಗಕ್ಷೇಮ ಮೀಡಿಯಾ ಪ್ರೈವೇಟ್ ಲಿಮಿಟೆಡ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಎಸ್ ಎಲ್ ಎನ್ ಸ್ವಾಮಿ ಅವರು ಪ್ರದಾನ ಮಾಡಿದರು.

ಈ ಸಂದರ್ಭದಲ್ಲಿ ಮಂಡ್ಯ ರವಿ, ಶ್ರೀವತ್ಸ ಕೆ ಎಸ್ ಹಾಗೂ ಪ್ರತಿನಿಧಿ ಪತ್ರಿಕೆ ಸಂಪಾದಕ ಸಿ.ಕೆ ಮಹೇಂದ್ರ, ಧರ್ಮಪುರ ನಾರಾಯಣ, ಜಗದೀಶ್ ಉಪಸ್ಥಿತರಿದ್ದರು.



ವಿಧಾನ ಪರಿಷತ್ ಸದಸ್ಯೆ ಡಾ.ಆರತಿ ಕೃಷ್ಣ ನೇತೃತ್ವದ ನಿಯೋಗವು ಮಂಗಳವಾರ ನವದೆಹಲಿಯ ಕರ್ನಾಟಕ ಭವನದಲ್ಲಿ ಪ್ರವಾಸೋದ್ಯಮ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್ ಕೆ ಪಾಟೀಲ್ ಅವರನ್ನು ಭೇಟಿ ಮಾಡಿ ಕರ್ನಾಟಕದ ಪ್ರವಾಸೋದ್ಯಮ ಕ್ಷೇತ್ರದಲ್ಲಿ ಹೂಡಿಕೆ ಕುರಿತು ಚರ್ಚಿಸಿದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಮಾರ್ಚ್ 4, 2025, ಬುಧವಾರ

### ಕಚೇರಿಗೆ ಬಿಡುವು

ನಮ್ಮ ಸಮಸ್ತ ಓದುಗರು, ಜಾಹೀರಾತುದಾರರಿಗೆ ದಿ.4.3.2026ರಂದು ಬಣ್ಣಗಳ ಹಬ್ಬ ಹೋಳಿ ಶುಭಾಶಯಗಳು ಹಬ್ಬದ ಅಂಗವಾಗಿ ಬುಧವಾರ ನಮ್ಮ ಕಚೇರಿಗೆ ರಜೆ. ಹೀಗಾಗಿ ಗುರುವಾರದ ಸಂಚಿಕೆ ಪ್ರಕಟವಾಗುವುದಿಲ್ಲ.

-ಸಂಪಾದಕ

### ಒಳಪುಟಗಳಲ್ಲಿ

ಎರಡು ವಾರಗಳಲ್ಲಿ ಭಾರತದಲ್ಲಿ ಇಂಧನ ಅಭಾವ ನಿರೀಕ್ಷೆ?- ಪು.4

ಖಮೇನಿ ಹತ್ಯೆಗೆ ಭಾರತ ಮೌನ: ಕೇಂದ್ರ ಸರ್ಕಾರದ ನಡೆಗೆ ಸೋನಿಯಾ ಗಾಂಧಿ ಖಂಡನೆ ಪು.4

# ಮಾತುಕತೆಗೆ ಸಮಯ ತಡವಾಗಿದೆ, ದೊಡ್ಡ ಪ್ರಮಾಣದ ದಾಳಿ ಬಾಕಿ ಇದೆ

## ಮಿಲಿಟರಿ ಕಾರ್ಯಾಚರಣೆ ನಿಲ್ಲಿಸಿ ಮಾತುಕತೆ ನಡೆಸುವಂತೆ ಇರಾನ್ ಮಾಡಿದ ಮನವಿ ತಿರಸ್ಕರಿಸಿದ ಟ್ರಂಪ್



**ವಾಷಿಂಗ್ಟನ್, ಮಾ.3:** ಅಮೆರಿಕ, ಇಸ್ರೇಲ್ ಮತ್ತು ಇರಾನ್ ನಡುವಿನ ಸಂಘರ್ಷ ಮಂಗಳವಾರ ತೀವ್ರಗೊಂಡಿದೆ. ಈ ಪ್ರದೇಶದಾದ್ಯಂತ ಮಿಲಿಟರಿ ಕಾರ್ಯಾಚರಣೆಗಳು ಮುಂದುವರೆಸದಂತೆ ಮಾತುಕತೆ ಮಾಡುವಂತೆ ಟೆಹರಾನ್ ಮಾಡಿದ ವಿನಂತಿಗೆ ಸಮಯ ಬಹಳ ತಡವಾಗಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

ಇರಾನ್‌ನ ನಾಯಕತ್ವ ಮತ್ತು ಪ್ರಮುಖ ಮಿಲಿಟರಿ ಸೌಲಭ್ಯಗಳನ್ನು ಮಾಡಲಾಗಿದೆ. ದೊಡ್ಡ ಪ್ರಮಾಣದ ದಾಳಿಗಳು ಇನ್ನೂ ಬಾಕಿ ಇದೆ ಎಂದು ಟ್ರಂಪ್ ಎಚ್ಚರಿಸಿದ್ದಾರೆ. ಹಾಗೂ ನಾವಿನ್ನೂ ಇರಾನ್ ಮೇಲೆ ಪ್ರಬಲ ದಾಳಿ ಪ್ರಾರಂಭಿಸಿಲ್ಲ ಎಂದಿದ್ದಾರೆ. ಟ್ರಂಪ್ ಅವರ ಈ ಹೇಳಿಕೆ ಯುದ್ಧ ಮತ್ತಷ್ಟು ಉಲ್ಬಣಗೊಳ್ಳುವುದನ್ನು ಸೂಚಿಸುತ್ತದೆ.

ಮತ್ತೊಂದೆಡೆ ಪ್ರತಿದಾಳಿಯಲ್ಲಿ ಮಧ್ಯಪ್ರಾಚ್ಯದಾದ್ಯಂತ ಇರುವ ಇಸ್ರೇಲ್ ಮತ್ತು ಯುಎಸ್ ಮಿಲಿಟರಿ ನೆಲೆಗಳನ್ನು ಗುರಿಯಾಗಿಸಿಕೊಂಡು ಇರಾನ್ ಕ್ಷಿಪಣಿ ಮತ್ತು ಡ್ರೋನ್ ದಾಳಿಗಳನ್ನು ಮುಂದುವರೆಸಿದೆ. ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ (ಐಆರ್‌ಜಿಸಿ) ಈ ಪ್ರದೇಶದಲ್ಲಿನ ಯುಎಸ್ ಗುರಿಗಳ ವಿರುದ್ಧ ಹೊಸ ಅಲೆಯ ದಾಳಿಗಳನ್ನು ನಡೆಸಿದೆ ಎಂದು ಇರಾನ್ ಹೇಳಿದೆ.

ಲೆಬನಾನ್‌ನಲ್ಲಿ ಇಸ್ರೇಲಿ ದಾಳಿಗಳು ಬೈರೂತ್‌ನ ದಕ್ಷಿಣ ಉಪನಗರಗಳಲ್ಲಿ ಹೆಜ್ಬೊಲ್ಲಾ-ಸಂಬಂಧಿತ ಪ್ರದೇಶಗಳನ್ನು ಹಾನಿಗೀಡುಮಾಡಿದ್ದು, ಇದು ದೊಡ್ಡ ಪ್ರಮಾಣದ ಸ್ಥಳಾಂತರಕ್ಕೆ ಕಾರಣವಾಯಿತು. ಸಾವಿರಾರು ಜನರು ಆಶ್ರಯ ಪಡೆದಿದ್ದ ಕಾರಣ ಬೈರೂತ್‌ನ ಕೆಲವು ಭಾಗಗಳಲ್ಲಿನ ಶಾಲೆಗಳು ಮುಚ್ಚಲ್ಪಟ್ಟವು. ಸಂಘರ್ಷವು ಕೊಲ್ಲಿಗೂ ವ್ಯಾಪಿಸಿದೆ. ಕತಾರ್, ಸೌದಿ ಅರೇಬಿಯಾ ಮತ್ತು ಒಮಾನ್‌ಗಳಲ್ಲಿನ ಇಂಧನ ಸೌಲಭ್ಯಗಳನ್ನು ಗುರಿಯಾಗಿಸಿಕೊಂಡು ಡ್ರೋನ್ ದಾಳಿಗಳು ಮುಂದುವರಿದಿದ್ದು, ತೈಲ ಮತ್ತು ಅನಿಲ ಕಾರ್ಯಾಚರಣೆಗೆ ಅಡ್ಡಿಪಡಿಸಿದೆ. ಇದರಿಂದಾಗಿ ಜಾಗತಿಕ ಇಂಧನ ಬೆಲೆಗಳು ತೀವ್ರವಾಗಿ ಏರಿಕೆಯಾಗಿವೆ. ಜಾಗತಿಕ ತೈಲ ಪೂರೈಕೆಗೆ ನಿರ್ಣಾಯಕವಾದ ಹಾರ್ಮುಜ್ ಜಲಸಂಧಿಯ ಮೂಲಕ ಸಾಗಣೆ ಮಾಡದಂತೆ ಇರಾನ್ ಎಚ್ಚರಿಕೆ ನೀಡಿದೆ. ಇಸ್ರೇಲಿ ಮತ್ತು ಯುಎಸ್ ಪಡೆಗಳು ಇರಾನ್ ಮೇಲೆ ದಾಳಿ ಮುಂದುವರೆಸಿದ್ದು, ಇರಾನ್‌ನ ರಾಜ್ಯ ಪ್ರಸಾರಕನ ಮೇಲೆ ದಾಳಿಯೂ ಸೇರಿದ್ದು, ಮೃತರ ಸಂಖ್ಯೆ 787ಕ್ಕೇರಿದೆ. ಇಸ್ರೇಲಿ ಸೈನ್ಯವು ಲೆಬನಾನ್ ಮೇಲೆ ವಾಯು ದಾಳಿಯನ್ನು ತೀವ್ರಗೊಳಿಸಿದೆ ಮತ್ತು ಇರಾನ್‌ನ ದಕ್ಷಿಣ ಭಾಗದಲ್ಲಿ ಹೊಸ ದಾಳಿ ಆರಂಭಿಸಿದೆ.

### ರಾಯಭಾರ ಕಚೇರಿಗಳು ಬಂದ್

ರಿಯಾದ್‌ನಲ್ಲಿರುವ ಯುಎಸ್ ರಾಯಭಾರ ಕಚೇರಿಗೆ ಎರಡು ಡ್ರೋನ್‌ಗಳು ದಾಳಿ ನಡೆಸಿದ್ದರಿಂದ ಸಣ್ಣ ಪ್ರಮಾಣದಲ್ಲಿ ಬೆಂಕಿ ಕಾಣಿಸಿಕೊಂಡು ಅಲ್ಪ ಹಾನಿಯಾಗಿದೆ ಎಂದು ಸೌದಿ ಅಧಿಕಾರಿಗಳು ತಿಳಿಸಿದ್ದಾರೆ. ಡ್ರೋನ್ ದಾಳಿಯಾಗುತ್ತಿದ್ದಂತೆ ರಿಯಾದ್‌ನಲ್ಲಿರುವ ಯುಎಸ್ ರಾಯಭಾರ ಕಚೇರಿ ಸೇವೆಗಳನ್ನು ಸ್ಥಗಿತಗೊಳಿಸಲಾಗಿದೆ.

### ಗಗನಕ್ಕೇರಿದ ತೈಲಬೆಲೆ

ಮಧ್ಯ ಪ್ರಾಚ್ಯದ ಯುದ್ಧದಿಂದಾಗಿ ಜಾಗತಿಕ ಮಾರುಕಟ್ಟೆಗಳು ಕುಸಿದಿದ್ದು, ಮತ್ತು ಇರಾನ್ ಪ್ರತೀಕಾರದ ದಾಳಿಗಳ ಸರಣಿಯನ್ನು ಆರಂಭಿಸುತ್ತಿದ್ದಂತೆ ತೈಲ ಬೆಲೆಗಳು ಒಂದು ವರ್ಷದ ಅವಧಿಯಲ್ಲಿ ದಾಖಲೆ ಮಟ್ಟಕ್ಕೆ ಏರಿಕೆ ಕಂಡಿತು. ಯುಎಸ್ ಕಚ್ಚಾತೈಲ ದರ ಬ್ಯಾರಲ್‌ಗೆ ಶೇ.8.6ರಷ್ಟು ಏರಿಕೆ ಕಂಡು 77.36 ಡಾಲರ್‌ಗೆ ತಲುಪಿತು. ಸಂಸ್ಕರಣಾಗಾರರು ಬೇಸಿಗೆಯ ಇಂಧನ ಮಿಶ್ರಣಗಳಿಗೆ ಬದಲಾಯಿಸುವುದರಿಂದ ಯುಎಸ್ ಇರಾನ್ ಮೇಲೆ ದಾಳಿ ಮಾಡುವ ಮೊದಲೇ ಅನಿಲ ಬೆಲೆಗಳು ಈಗಾಗಲೇ ಏರುತ್ತಿದ್ದವು. ಜುಲೈ 2024ರ ನಂತರ ಮೊದಲ ಬಾರಿಗೆ ಬ್ರೆಂಟ್ ತೈಲ ಬೆಲೆ 85 ಡಾಲರ್ ತಲುಪಿದೆ. ಮಧ್ಯಪ್ರಾಚ್ಯ ಇಂಧನ ಪೂರೈಕೆಯಲ್ಲಿ ದೀರ್ಘಕಾಲದ ಅಡ್ಡಿಯಿಂದಾಗಿ ಹಣದುಬ್ಬರದ ಒತ್ತಡ ಮತ್ತು ಯೂರೋ ಜೋನ್‌ನಲ್ಲಿ ಆರ್ಥಿಕ ಕುಸಿತಕ್ಕೆ ಕಾರಣವಾಗಬಹುದು ಎಂದು ಯುರೋಪಿಯನ್ ಸೆಂಟ್ರಲ್ ಬ್ಯಾಂಕ್ ಎಚ್ಚರಿಸಿದೆ. ಎರಡೂ ಕಡೆಯವರು ಮುಂದಿನ ಕ್ರಮಕ್ಕೆ ಸಿದ್ಧರಾಗುವಂತೆ ಸೂಚಿಸುತ್ತಿದ್ದಂತೆ, ಮಧ್ಯಪ್ರಾಚ್ಯ ಭದ್ರತಾ ಭೂದೃಶ್ಯವನ್ನು ಹೆಚ್ಚು ಮರುರೂಪಿಸುತ್ತಿರುವ ಸಂಘರ್ಷದ ಸಂಭಾವ್ಯ ವಿಸ್ತರಣೆಗೆ ಜಾಗತಿಕ ಮಾರುಕಟ್ಟೆಗಳು ಮತ್ತು ಸರ್ಕಾರಗಳು ಸಿದ್ಧತೆ ನಡೆಸುತ್ತಿವೆ.

# ಬಲಿಷ್ಠ ಆರ್ಥಿಕತೆ: ಭಾರತ ಜಗತ್ತಿಗೆ ದಾರಿದೀಪವಾಗಿ ಹೊರಹೊಮ್ಮಿದೆ



**ನವದೆಹಲಿ, ಮಾ.3:** ಬಲಿಷ್ಠ ಆರ್ಥಿಕತೆ ಹೊಂದಿದ ಭಾರತ ಜಗತ್ತಿಗೆ ದಾರಿದೀಪವಾಗಿ ಹೊರಹೊಮ್ಮಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಬಣ್ಣಿಸಿದರು. ಬಜೆಟ್ ನಂತರದ ವೆಬಿನಾರ್‌ನಲ್ಲಿ ಮಾತನಾಡಿದ ಅವರು, ಉತ್ಪಾದನೆ, ಲಾಜಿಸ್ಟಿಕ್ಸ್ ಮತ್ತು ಎಂಎಸ್‌ಎಂಇ ವಲಯ ಭಾರತೀಯ ಆರ್ಥಿಕತೆಯ ಪ್ರಮುಖ ಆಧಾರ ಸ್ತಂಭಗಳಾಗಿವೆ. ಈ ವಲಯಗಳನ್ನು ಬಲಪಡಿಸುವುದರಿಂದ ದೇಶದ ಆರ್ಥಿಕ ಬೆಳವಣಿಗೆ ವೇಗಗೊಳ್ಳುತ್ತದೆ. ಇದು ಜಾಗತಿಕ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸುತ್ತದೆ ಎಂದರು. ಜಗತ್ತು ವಿಶ್ವಾಸಾರ್ಹ ಉತ್ಪಾದನಾ ಪಾಲುದಾರರನ್ನು ಹುಡುಕುತ್ತಿದೆ. ಈ ವಿಷಯದಲ್ಲಿ ಭಾರತಕ್ಕೆ ಉತ್ತಮ ಅವಕಾಶವಿದೆ. ಸಂಶೋಧನೆ ಮತ್ತು ಅಭಿವೃದ್ಧಿಯಲ್ಲಿ ಹೂಡಿಕೆಯನ್ನು ಹೆಚ್ಚಿಸಬೇಕು. ಗುಣಮಟ್ಟದ ಮೇಲೆ ಗಮನಹರಿಸಬೇಕು. ನಮ್ಮ ಉತ್ಪನ್ನಗಳ ಗುಣಮಟ್ಟ ಜಾಗತಿಕ ಮಾನದಂಡಗಳಿಗೆ ಅನುಗುಣವಾಗಿರಬೇಕು ಎಂದು ಉದ್ಯಮಿಗಳಿಗೆ ಸಲಹೆ ನೀಡಿದರು. ಉತ್ಪನ್ನ ಮಾನದಂಡಗಳನ್ನು ಸುಧಾರಿಸುವುದು ಭಾರತೀಯ ವ್ಯವಹಾರ ಅಂತರರಾಷ್ಟ್ರೀಯ ಮಾರುಕಟ್ಟೆಗಳಿಗೆ ವಿಸ್ತರಿಸಲು ಸಹಾಯ ಮಾಡುತ್ತದೆ. ಭಾರತವು ತನ್ನ ಬಲಿಷ್ಠ ಆರ್ಥಿಕತೆಯಿಂದ ಜಗತ್ತಿಗೆ ಆಶಾಕಿರಣವಾಗಿದೆ ಎಂದರು.

**ಮುಕ್ತ ವ್ಯಾಪಾರ ಒಪ್ಪಂದದಿಂದ ಅವಕಾಶ:** ಭಾರತವು ಹಲವಾರು ದೇಶಗಳೊಂದಿಗೆ ಮುಕ್ತ ವ್ಯಾಪಾರ ಒಪ್ಪಂದಗಳನ್ನು ಮಾಡಿಕೊಂಡಿದೆ. ಇದು ದೇಶೀಯ ಕೈಗಾರಿಕೆಗಳು ಮತ್ತು ರಫ್ತುದಾರರಿಗೆ ವ್ಯಾಪಕ ಅವಕಾಶ ನೀಡುತ್ತದೆ. ಈ ಒಪ್ಪಂದಗಳಿಂದ ದೇಶದ ವ್ಯವಹಾರಕ್ಕೆ ಜಾಗತಿಕ ಮಟ್ಟದ ಮಾರುಕಟ್ಟೆಗಳಿಗೆ ಪ್ರವೇಶ ಸಿಗುತ್ತದೆ. ಈ ವರ್ಷದ ಬಜೆಟ್ ಮೂಲಸೌಕರ್ಯ ಮತ್ತು ಸರಕು ಸಾಗಣೆಗೆ ದಾಖಲೆ ಮಟ್ಟದ ಬಂಡವಾಳ ಮೀಸಲಿಟ್ಟಿದೆ. ವರ್ಧಿತ ಬಂಡವಾಳ ವೆಚ್ಚವು ಪೂರೈಕೆ ಸರಪಳಿಗಳನ್ನು ಮತ್ತಷ್ಟು ಬಲಪಡಿಸುತ್ತದೆ ಎಂದು ಒತ್ತಿ ಹೇಳಿದರು.

## ಕತಾರ್, ಕುವೈತ್, ಓಮನ್ ನಾಯಕರೊಂದಿಗೆ ಪ್ರಧಾನಿ ದೂರವಾಣಿ ಸಂಭಾಷಣೆ: ಸಂವಾದ, ಶಾಂತಿಗಾಗಿ ಕರೆ

**ನವದೆಹಲಿ, ಮಾ.3:** ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಕತಾರ್ ಅಮೀರ್ ಶೇಖ್ ತಮೀಮ್ ಬಿನ್ ಹಮದ್ ಅಲ್ ಥಾನಿ, ಕುವೈತ್ ರಾಜಕುಮಾರ ಶೇಖ್ ಸಬಾಹ್ ಅಲ್-ಖಾಲಿದ್ ಅಲ್-ಹಮದ್ ಅಲ್-ಮುಬಾರಕ್ ಅಲ್-ಸಬಾಹ್ ಮತ್ತು ಒಮಾನ್‌ನ ಸುಲ್ತಾನ್ ಹೈಥಮ್ ಬಿನ್ ತಾರಿಕ್ ಅವರೊಂದಿಗೆ ಮಾತನಾಡಿ ಅವರ ಸಾರ್ವಭೌಮತ್ವ ಮತ್ತು ಪ್ರಾದೇಶಿಕ ಸಮಗ್ರತೆಯ ಉಲ್ಲಂಘನೆಯನ್ನು ಖಂಡಿಸಿದರು, ಈ ಪ್ರದೇಶದಲ್ಲಿ ಶಾಂತಿ ಮರುಸ್ಥಾಪನೆಗಾಗಿ ಸಂವಾದದ ಮಹತ್ವವನ್ನು ಒತ್ತಿ ಹೇಳಿದರು. ಭಾರತೀಯ ಸಮುದಾಯಕ್ಕೆ ಬೆಂಬಲ ಮತ್ತು ಕಾಳಜಿ ತೋರಿದ್ದಕ್ಕಾಗಿ ಮೂವರು ನಾಯಕರನ್ನು ಶ್ಲಾಘಿಸಿದರು.

# ಕೇಂದ್ರ-ರಾಜ್ಯ ಸಂಬಂಧ ಕುರಿತು ರಾಷ್ಟ್ರಮಟ್ಟದ ಚರ್ಚೆಗೆ ಬೆಂಬಲ

■ ತಮಿಳುನಾಡು ಸಿಎಂ ಎಂ.ಕೆ. ಸ್ಟಾಲಿನ್‌ಗೆ ಸಿಎಂ ಸಿದ್ದರಾಮಯ್ಯ ಪತ್ರ

**ಬೆಂಗಳೂರು, ಮಾ.3:** ತಮಿಳುನಾಡು ಸಿಎಂ ಎಂಕೆ ಸ್ಟಾಲಿನ್ ಅವರಿಗೆ ಸಿಎಂ ಸಿದ್ದರಾಮಯ್ಯ ಪತ್ರ ಬರೆದಿದ್ದು, ಭಾರತದ ಸಾಂವಿಧಾನಿಕ ಚೌಕಟ್ಟಿನಲ್ಲಿ ಸಹಕಾರಿ ಫೆಡರಲಿಸಂ (ಒಕ್ಕೂಟ ವ್ಯವಸ್ಥೆ) ಪ್ರಾಮುಖ್ಯತೆಯನ್ನು ಒತ್ತಿ ಹೇಳುವ ಕೇಂದ್ರ-ರಾಜ್ಯ ಸಂಬಂಧಗಳ ಕುರಿತು ರಾಷ್ಟ್ರಮಟ್ಟದ ಚರ್ಚೆಗೆ ಬೆಂಬಲ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಈ ವಿಷಯವನ್ನು ಹಂಚಿಕೊಂಡಿರುವ ಸಿದ್ದರಾಮಯ್ಯ, ಕೇಂದ್ರ- ರಾಜ್ಯಗಳ ಸಂಬಂಧಗಳ ಬಗ್ಗೆ ರಾಷ್ಟ್ರಮಟ್ಟದ ಹೊಸಚರ್ಚೆಗೆ ಕರ್ನಾಟಕ ಬೆಂಬಲಿಸಲಿದೆ ಎಂದು ಸ್ಟಾಲಿನ್‌ಗೆ ಬರೆದಿರುವ ಪತ್ರದಲ್ಲಿ ತಿಳಿಸಿದ್ದಾರೆ. ಒಕ್ಕೂಟ ವ್ಯವಸ್ಥೆ ರಾಜಕೀಯ ಬೇಡಿಕೆಯಲ್ಲ. ಇದು ಸಂವಿಧಾನದ ಮೂಲಕ ರಚನೆಯ ಭಾಗವಾಗಿದೆ. ಕೇಂದ್ರದಿಂದ ಅನುದಾನ ಕೊರತೆ ಮತ್ತು ಶಾಸನಾತ್ಮಕ ವಿಷಯಗಳಿಗೆ ಸಂಬಂಧಿಸಿದಂತೆ ನಮ್ಮ ಸಂವಿಧಾನ ರಚನಕಾರರು ರೂಪಿಸಿದ ಹೊಂದಾಣಿಕೆ ನೀತಿಗೆ ಅಡ್ಡಿಯಾಗಿದೆ. ರಾಜ್ಯಗಳು ತಮಗೆ ವಹಿಸಿದ ಜವಾಬ್ದಾರಿಗಳನ್ನು ಪೂರೈಸಲು ಅಧಿಕಾರ ಮತ್ತು ಹಣಕಾಸಿನ ಅಗತ್ಯವಿರುತ್ತದೆ ಎಂದಿದ್ದಾರೆ. ಸಹಕಾರ, ಸಮನ್ವಯದ ಫೆಡರಲಿಸಂ, ಸಾಂವಿಧಾನಿಕ ನಂಬಿಕೆ ಮತ್ತು ವೈವಿಧ್ಯತೆಯ ಗೌರವದಲ್ಲಿ ಭಾರತದ ಶಕ್ತಿ ಅಡಗಿದೆ. ನಮ್ಮ ಒಕ್ಕೂಟ ವ್ಯವಸ್ಥೆಯಲ್ಲಿ ಎಲ್ಲಾ ರಾಜ್ಯಗಳೊಂದಿಗೆ ಮಾತುಕತೆ ಮತ್ತು ಹೊಂದಾಣಿಕೆಯನ್ನು ಪುನರ್ ಸ್ಥಾಪಿಸಲು ಅಂತರ-ರಾಜ್ಯ ಮಂಡಳಿಯಂತಹ ಸಾಂಸ್ಥಿಕ ವೇದಿಕೆಯನ್ನು ಸ್ಥಾಪಿಸಬೇಕು ಎಂದು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ.

# ಡಿಕೆಶಿಯನ್ನು ಬಿಜೆಪಿಗೆ ಸೆಳೆಯುವ ಯತ್ನ ಫಲಿಸಲ್ಲ

## ಬಾಕಿ ಅವಧಿಗೂ ಕಾಂಗ್ರೆಸ್‌ನವರೇ ಮುಖ್ಯಮಂತ್ರಿಯಾಗಿರುತ್ತಾರೆ: ಮುಖ್ಯಮಂತ್ರಿ ಸಿದ್ದರಾಮಯ್ಯ



**ಬೆಂಗಳೂರು, ಮಾ.3:** ಫೋನ್ ಕದ್ದಾಲಿಕೆ ಆರೋಪಕ್ಕೆ ತೀಕ್ಷ್ಣ ಪ್ರತಿಕ್ರಿಯೆ ನೀಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಡಿ.ಕೆ.ಶಿವಕುಮಾರ್ ಅವರನ್ನು ಬಿಜೆಪಿಗೆ ಸೆಳೆಯುವ ಪ್ರಯತ್ನ ಫಲ ನೀಡುವುದಿಲ್ಲ. ರಾಜ್ಯದಲ್ಲಿ ಬಾಕಿ ಉಳಿದ ಅವಧಿಗೂ ಕಾಂಗ್ರೆಸ್‌ನವರೇ ಮುಖ್ಯಮಂತ್ರಿಯಾಗಿರುತ್ತಾರೆ ಎಂದು ಹೇಳಿದ್ದಾರೆ.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಮೇಲೆ ಕಣ್ಣಿಡಲು ಫೋನ್ ಕದ್ದಾಲಿಕೆ ನಡೆಯುತ್ತಿದೆ ಎಂದು ವಿರೋಧ ಪಕ್ಷದ ನಾಯಕರಾದ ಆರ್.ಅಶೋಕ್ ಮತ್ತು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿಯವರ ಆರೋಪ ತಾ ಕಳ್ಳ, ಇತರರನ್ನು ನಂಬ ಎಂಬ ಗಾದೆಯಂತಿದೆ. ಇದೊಂದು ಅತೃಪ್ತ ಆತ್ಮಗಳ ಹತಾಶ ಹೇಳಿಕೆ ಎಂದು ಕಿಡಿಕಾರಿದ್ದಾರೆ. 2004ರಿಂದ 2013ವರೆಗಿನ ಒಂಬತ್ತು ವರ್ಷಗಳ ಅವಧಿಯಲ್ಲಿ ರಾಜ್ಯ ಐದು ಮುಖ್ಯಮಂತ್ರಿಗಳನ್ನು, 2018ರಿಂದ 2023ರ 5 ವರ್ಷಗಳ ಅವಧಿಯಲ್ಲಿ ಮೂರು ಮುಖ್ಯಮಂತ್ರಿಗಳನ್ನು ರಾಜ್ಯ ಕಾಣುವಂತಾಗಲು ಇವರೊಳಗಿನ ಪರಸ್ಪರ ಅಪನಂಬಿಕೆ, ದ್ವೇಷ, ಅಸೂಯೆ, ಬೆನ್ನಿಗೆ ಚೂರಿಹಾಕುವ ಕುತಂತ್ರಗಳೇ ಕಾರಣ. 2018ರಲ್ಲಿ ಹೆಚ್.ಡಿ.ಕುಮಾರಸ್ವಾಮಿಯವರು ಮುಖ್ಯಮಂತ್ರಿಯಾಗಿದ್ದಾಗ ಆದಿಚುಂಚನಗಿರಿಯ ಪೂಜ್ಯ ನಿರ್ಮಲಾನಂದನಾಥ ಸ್ವಾಮಿಗಳ ಫೋನನ್ನೆ ಕದ್ದಾಲಿಸಿದ್ದಾರೆ ಎಂದು ಈಗಿನ ಅವರ ರಾಜಕೀಯ ಸಂಗಾತಿ ಬಿ.ವೈ ವಿಜಯೇಂದ್ರ ಅವರೇ ಆರೋಪ ಮಾಡಿದ್ದರು. ಇದರ ಬಗ್ಗೆ ತನಿಖೆ ಮಾಡಿದ್ದ ಸಿಬಿಐ, ಒಬ್ಬ ಸ್ವಾಮೀಜಿಗಳದ್ದಷ್ಟೇ ಅಲ್ಲ, ಬದಲಿಗೆ ಏಳು ಸ್ವಾಮೀಜಿಗಳ ಫೋನ್‌ಗಳ ಕದ್ದಾಲಿಕೆ ಮಾಡಲಾಗಿದೆ ಎಂದು ತಿಳಿಸಿತ್ತು ಎಂದು ಸಿದ್ದರಾಮಯ್ಯ ನೆನಪಿಸಿದ್ದಾರೆ.

ಅಧಿಕಾರವನ್ನು ದುರ್ಬಳಕೆ ಮಾಡಿ ಸರ್ಕಾರಿ ಯಂತ್ರಗಳ ಮೂಲಕವೇ ವಿರೋಧ ಪಕ್ಷದ ನಾಯಕರನ್ನು ಮಾತ್ರವಲ್ಲ, ಸ್ವಪಕ್ಷದಲ್ಲಿ ತಮ ನಾಯಕತ್ವಕ್ಕೆ ಪೈಪೋಟಿ ನೀಡಬಲ್ಲ ನಾಯಕರನ್ನು ನಿಯಂತ್ರಣದಲ್ಲಿಟ್ಟುಕೊಳ್ಳುವ ಪ್ರಯತ್ನವನ್ನು ಪ್ರಧಾನಿ ನರೇಂದ್ರ ಮೋದಿಯವರು ತಾವು ಅಧಿಕಾರಕ್ಕೆ ಬಂದ ದಿನದಿಂದಲೇ ಮಾಡುತ್ತಿದ್ದಾರೆ ಎನ್ನುವುದು ಜಗಜ್ಜಾಹೀರಾಗಿರುವ ಸತ್ಯ. ಹಾಡಹಗಲೇ ಪೊಲೀಸ್, ಸಿಬಿಐ, ಇಡಿ, ಐಟಿ ಇಲಾಖೆಗಳ ದುರ್ಬಳಕೆಯಾಗುತ್ತಿರುವ ಬಗ್ಗೆ ಇಡೀ ದೇಶದ ಜನ ಮಾತನಾಡಿಕೊಳ್ಳುತ್ತಿದ್ದಾರೆ. ಇಂತಹವರು ತಮ ರಾಜಕೀಯ ವಿರೋಧಿಗಳ ಫೋನ್ ಗಳನ್ನು ಕದ್ದು ಆಲಿಸದೆ ಬಿಡುತ್ತಾರೆಯೇ ಎಂದು ಪ್ರಶ್ನಿಸಿದ್ದಾರೆ.

ಆದರೆ ಇಂತಹ ಬೆದರಿಕೆಗಳಿಗೆ ನಾನಾಗಲಿ, ನನ್ನ ಪಕ್ಷದ ಯಾವ ನಾಯಕರಾಗಲಿ ಜಗ್ಗುವವರಲ್ಲ, ಬಗ್ಗುವವರೂ ಅಲ್ಲ ಎನ್ನುವುದನ್ನು ಸ್ಪಷ್ಟಪಡಿಸುತ್ತೇನೆ. ಕುಮಾರಸ್ವಾಮಿಯವರಿಗೆ ಈ ಗೂಢಚರ್ಯೆಯ ಪಾಠವನ್ನು ಅವರ ತಂದೆಯವರೇ ಹೇಳಿಕೊಟ್ಟಿರಬಹುದು. ತನ್ನನ್ನು ಪ್ರಧಾನಿ ಮಾಡಿದ ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾಗಿದ್ದ ಸೀತಾರಾಂ ಕೇಸರಿಯವರ ವಿರುದ್ಧವೇ ಗೂಢಚರ್ಯೆ ಮಾಡಿದ್ದ ಕಾರಣಕ್ಕೆ ಕಾಂಗ್ರೆಸ್ ಪಕ್ಷ ತನ್ನ ಬೆಂಬಲವನ್ನು ಹಿಂದೆಗೆದುಕೊಂಡಿರುವುದು ಇತಿಹಾಸದ ಪುಟಗಳಲ್ಲಿದೆ. ಈ ಅಪನಂಬಿಕೆಗಳಿಂದಾಗಿಯೇ ಕನ್ನಡಿಗರೊಬ್ಬರು ಇನ್ನಷ್ಟು ಕಾಲ ಪ್ರಧಾನಿಯಾಗುವ ಅವಕಾಶ ತಪ್ಪಿಹೋಯಿತು ಎನ್ನುವುದು ವಿಷಾದನೀಯ ಮತ್ತು ವಾಸ್ತವ ಎಂದಿದ್ದಾರೆ.

ಎಚ್.ಡಿ.ಕುಮಾರಸ್ವಾಮಿ ಮತ್ತು ಆರ್ ಅಶೋಕ್ ಅವರು ತಮ ಅಮೂಲ್ಯ ಕ್ಷಣಗಳನ್ನು ಈ ರೀತಿ ಕುಟಿಲ ರಾಜಕೀಯದಲ್ಲಿ ವ್ಯರ್ಥಮಾಡುವ ಬದಲಿಗೆ ರಚನಾತಕ ವಿರೋಧ ಪಕ್ಷದ ರೀತಿಯಲ್ಲಿ ಕೆಲಸ ಮಾಡಿ ರಾಜ್ಯಕ್ಕೆ ಒಳ್ಳೆಯದನ್ನು ಮಾಡಲಿ ಎಂದು ಹಾರೈಸುತ್ತೇನೆ. ರಾಜ್ಯದ ಪ್ರಜ್ಞಾವಂತ ಮತದಾರರು ಐದು ವರ್ಷಗಳ ಕಾಲ ಸರ್ಕಾರ ನಡೆಸಲು ನಮಗೆ ಜನಾದೇಶ ನೀಡಿದ್ದಾರೆ. ವಿರೋಧ ಪಕ್ಷಗಳ ಎಲ್ಲ ಕುತಂತ್ರ-ಕುಚೇಷ್ಠೆಗಳ ನಡುವೆಯೂ ಈ ಅವಧಿಯನ್ನು ಕಾಂಗ್ರೆಸ್ ಪಕ್ಷ ಪೂರ್ಣಗೊಳಿಸಲಿದೆ ಮತ್ತು ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷದ ಮುಖ್ಯಮಂತ್ರಿಯೇ ಇರುತ್ತಾರೆ ಎಂದು ಹೇಳುವ ಮೂಲಕ ಕುತೂಹಲ ಕೆರಳಿಸಿದ್ದಾರೆ.

**ಡಿಕೆಶಿ ಕಟ್ಟಾ ಕಾಂಗ್ರೆಸ್ಸಿಗ:** ಸುಳ್ಳು ಸುದ್ದಿ ಹರಡಿ ನಮ್ಮಿಬ್ಬರ ನಡುವಿನ ಸಂಬಂಧವನ್ನು ಕೆಡಿಸಿ ಡಿಕೆಶಿ ಅವರನ್ನು ಒಲಿಸಿಕೊಳ್ಳಲು ದುರಾಲೋಚನೆ ಏನಾದರೂ ಬಿಜೆಪಿ - ಜೆಡಿಎಸ್ ನಾಯಕರಿಗಿದ್ದರೆ ಅವರ ಹಗಲುಗನಸಿಗೆ ಶುಭ ಹಾರೈಸುತ್ತೇನೆ. ಶಿವಕುಮಾರ್ ಕಟ್ಟಾ ಕಾಂಗ್ರೆಸಿಗ, ಸುಳ್ಳು ಕೇಸ್ ಹಾಕಿ, ಜೈಲಿಗೆ ಕಳಿಸಿ ಅವರನ್ನು ಮಣಿಸುವ ಎಲ್ಲ ಪ್ರಯತ್ನಗಳನ್ನು ಬಿಜೆಪಿ ಮಾಡಿಯಾಗಿದೆ.

ಇದಕ್ಕೆಲ್ಲ ಮಣಿಯದೆ ಅವರು ಪಕ್ಷಕ್ಕೆ ನಿಷ್ಠರಾಗಿ ಉಳಿದವರು ಎನ್ನುವುದು ಈ ಕುತಂತ್ರಿ ನಾಯಕರಿಗೆ ತಿಳಿದಿರಲಿ ಎಂದು ಸಿದ್ದರಾಮಯ್ಯ ತಿರುಗೇಟು ನೀಡಿದ್ದಾರೆ. ಕರ್ನಾಟಕದ ಇತ್ತೀಚಿನ ರಾಜಕೀಯ ಇತಿಹಾಸದ ಪುಟಗಳ ಮೇಲೆ ಒಮೆ ಕಣ್ಣಾಡಿಸಿದರೆ ಈ ಫೋನ್ ಕದ್ದಾಲಿಕೆ, ಗೂಢಚರ್ಯೆಗಳೆಲ್ಲ ಯಾವ ಪಕ್ಷದ ದುಷ್ಕೃತ್ಯಗಳು ಎನ್ನುವುದು ಅರಿವಾಗುತ್ತದೆ. ಈ ದುರ್ಬುದ್ಧಿಯ ಕಾರಣದಿಂದಾಗಿಯೇ ರಾಜ್ಯ ರಾಜಕೀಯದಲ್ಲಿ ಆಪರೇಷನ್ ಕಮಲ, ರೆಸಾರ್ಟ್ ರಾಜಕಾರಣ, ವಚನಭಂಗದಂತಹ ಅನಿಷ್ಟಗಳು ಕಾಣಿಸಿಕೊಂಡಿರುವುದು ಎಂದು ಲೇವಡಿ ಮಾಡಿದ್ದಾರೆ.

### ಹಾಲು-ಜೇನಿನ ಸಂಬಂಧದ ಮೇಲೆ ಪರಿಣಾಮ ಬೀರಲ್ಲ

ಈ ಬಾರಿ ಪಕ್ಷ ಅಧಿಕಾರಕ್ಕೆ ಬಂದ ನಂತರ ಈ ನಿರುದ್ಯೋಗಿಗಳಾಗಿರುವ ವಿರೋಧ ಪಕ್ಷದ ನಾಯಕರು ನನ್ನ ಮತ್ತು ಡಿ.ಕೆ.ಶಿವಕುಮಾರ್ ನಡುವಿನ ಸಂಬಂಧಕ್ಕೆ ಹುಳಿ ಹಿಂಡಲು ಪ್ರಯತ್ನಿಸುತ್ತಲೇ ಇದ್ದಾರೆ, ಇದರಿಂದ ಅವರೊಳಗೆ ತುಂಬಿಕೊಂಡಿರುವ ಹುಳಿ ಖಾಲಿಯಾಗಬಹುದೇ ಹೊರತು ನಮ್ಮ ಹಾಲು-ಜೇನಿನಂತಹ ಸಂಬಂಧದ ಮೇಲೆ ಯಾವ ಪರಿಣಾಮವೂ ಆಗುವುದಿಲ್ಲ ಎನ್ನುವುದು ಇಬ್ಬರಿಗೂ ತಿಳಿದಿರಲಿ ಎಂದು ಸಿದ್ದರಾಮಯ್ಯ ತಿರುಗೇಟು ನೀಡಿದ್ದಾರೆ. ಆರೋಪ ಮಾಡಿರುವ ಒಬ್ಬರು ರಾಜ್ಯದ ಮುಖ್ಯಮಂತ್ರಿಗಳಾಗಿದ್ದವರು, ಇನ್ನೊಬ್ಬರು ಉಪಮುಖ್ಯಮಂತ್ರಿ ಮತ್ತು ಗೃಹ ಸಚಿವರಾಗಿದ್ದವರು. ಅವರ ಕಾಲದಲ್ಲಿ ಕೂಡಾ ಗುಪ್ತಚರ ವಿಭಾಗ ಮುಖ್ಯಮಂತ್ರಿಯವರ ಬಳಿಯೇ ಇತ್ತು. ಅವರ ಹೇಳಿಕೆಗಳನ್ನು ಗಮನಿಸಿದರೆ ಇವರಿಬ್ಬರೂ ತಮ್ಮ ಅನುಭವದ ಬಲದಿಂದಲೇ ಈ ಆರೋಪ ಮಾಡುತ್ತಿರುವಂತೆ ಕಾಣಿಸುತ್ತಿದೆ. ನಮ್ಮದು ಆಂತರಿಕ ಪ್ರಜಾಪ್ರಭುತ್ವ ಇರುವ ಪಕ್ಷ. ಪ್ರಧಾನಿ ಎದುರು ಬಾಯಿಮುಚ್ಚಿಕೊಂಡಿರುವ, ಏಕ ಕುಟುಂಬದ ಅಧಿಪತ್ಯ ಇರುವ ಪಕ್ಷ ಕಾಂಗ್ರೆಸ್ ಅಲ್ಲ. ನಮ್ಮ ಶಾಸಕರಲ್ಲಿ ಯಾರೂ ಕೂಡಾ ನನ್ನ ಇಲ್ಲವೇ ಡಿ.ಕೆ.ಶಿವಕುಮಾರ್ ಬೆಂಬಲಿಗರಲ್ಲ, ಎಲ್ಲರೂ ಕಾಂಗ್ರೆಸ್ ಬೆಂಬಲಿಗರು ಎಂದಿದ್ದಾರೆ.

## ನಾಯಕತ್ವ ಬದಲಾವಣೆ ಚರ್ಚೆ ಜೋರಾಗಿರುವ ನಡುವೆ ಮಾ.10ಕ್ಕೆ ಡಿಸಿಎಂ ಔತಣಕೂಟ



■ ಕೆಪಿಸಿಸಿ ಅಧ್ಯಕ್ಷರಾಗಿ ಆರು ವರ್ಷ ಪೂರೈಸಿದ ಸಂದರ್ಭದಲ್ಲಿ ಆಯೋಜನೆ

**ಬೆಂಗಳೂರು, ಮಾ.3:** ಕರ್ನಾಟಕ ರಾಜ್ಯ ಕಾಂಗ್ರೆಸ್‌ನಲ್ಲಿ ಮತ್ತೆ ನಾಯಕತ್ವ ಬದಲಾವಣೆ ಚರ್ಚೆ ಜೋರಾಗಿದೆ. ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಬಣದ ನಾಯಕರು ಸಭೆ ಮೇಲೆ ಸಭೆ ನಡೆಸುತ್ತಿದ್ದು, ತಮ್ಮ ತಮ್ಮ ನಾಯಕನ ಪರ ಹೇಳಿಕೆಗಳನ್ನು ನೀಡುತ್ತಿದ್ದಾರೆ ಅಲ್ಲದೇ ಈ ಅಧಿಕಾರ ಹಂಚಿಕೆ ಬಿಕ್ಕಟ್ಟಿಗೆ ಹೈಕಮಾಂಡ್ ತೆರೆ ಎಳೆಯಬೇಕೆಂದು ಕೈ ನಾಯಕರು ಪಟ್ಟುಹಿಡಿದಿದ್ದಾರೆ. ಈ ಎಲ್ಲಾ ಬೆಳವಣಿಗೆಗಳ ನಡುವೆ ಡಿಸಿಎಂ ಡಿಕೆ ಶಿವಕುಮಾರ್ ಡಿನ್ನರ್ ಮೀಟಿಂಗ್ ಕರೆದಿದ್ದಾರೆ.ಇದೇ ಮಾರ್ಚ್ 10ರಂದು ಖಾಸಗಿ ಹೋಟೆಲ್‌ನಲ್ಲಿ ಔತಣಕೂಟ ಆಯೋಜಿಸಿದ್ದಾರೆ. ಮಾ.6ಕ್ಕೆ ಡಿ.ಕೆ.ಶಿವಕುಮಾರ್ ಕೆಪಿಸಿಸಿ ಅಧ್ಯಕ್ಷರಾಗಿ 6 ವರ್ಷ ಪೂರ್ಣಗೊಳಿಸುತ್ತಿರುವುದರಿಂದ ಈ ಔತಣಕೂಟ ನೀಡುತ್ತಿದ್ದಾರೆ ಎಂದು ತಿಳಿದುಬಂದಿದೆ. ಈ ಔತಣಕೂಟದ ಮೂಲಕ ಶಾಸಕರು, ಪರಿಷತ್ ಸದಸ್ಯರು ಹಾಗೂ ಸಚಿವರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವ ಪ್ರಯತ್ನ ಇದಾಗಿದೆ ಎಂದು ವಿಶ್ಲೇಷಿಸಲಾಗಿದೆ.


# ವಿಮಾನ ಸೇವೆ ಮತ್ತೆ ಆರಂಭ: ಅಬುದಾಭಿಯಿಂದ 500ಕ್ಕೂ ಹೆಚ್ಚು ಕನ್ನಡಿಗರು ವಾಪಸ್

**ಬೆಂಗಳೂರು, ಮಾ.3:** ಮಧ್ಯಪ್ರಾಚ್ಯ ರಾಷ್ಟ್ರಗಳಲ್ಲಿ ಸಿಲುಕಿರುವ ಕನ್ನಡಿಗರನ್ನು ರಾಜ್ಯಕ್ಕೆ ಕರೆ ತರುವ ಪ್ರಕ್ರಿಯೆಗಳು ಆರಂಭವಾಗಿದ್ದು, ನಿನ್ನೆ ರಾತ್ರಿಯಿಂದ ಇಂದು ಮುಂಜಾನೆವರೆಗೆ 500ಕ್ಕೂ ಹೆಚ್ಚು ಕನ್ನಡಿಗರು ರಾಜ್ಯಕ್ಕೆ ಮರಳಿದ್ದಾರೆ.

ಇಸ್ರೇಲ್-ಇರಾನ್ ಯುದ್ಧದಿಂದಾಗಿ ರದ್ದಾಗಿದ್ದ ವಿಮಾನಯಾನ ಸೇವೆಗಳು ನಿನ್ನೆಯಿಂದ ಆರಂಭವಾಗಿದ್ದು, ಅಬುದಾಭಿಯಿಂದ ಬೆಂಗಳೂರಿನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಎರಡು ವಿಮಾನಗಳಲ್ಲಿ 500ಕ್ಕೂ ಹೆಚ್ಚು ಕನ್ನಡಿಗರು ಆಗಮಿಸಿದ್ದಾರೆ. ನಿನ್ನೆ ರಾತ್ರಿ 10 ಗಂಟೆ ಹೊತ್ತಿಗೆ ಅಬುಧಾಬಿಯಿಂದ ಬಂದ ವಿಮಾನದಲ್ಲಿ 210 ಕನ್ನಡಿಗರು ಸುರಕ್ಷಿತವಾಗಿ ಮರಳಿದ್ದರು. ಮಂಗಳವಾರ ಬೆಳಗಿನ ಜಾವ 3.20ಕ್ಕೆ ಅಬುಧಾಬಿಯಿಂದ ಬಂದ ವಿಮಾನದಲ್ಲಿ 300ಕ್ಕೂ ಹೆಚ್ಚು ಕನ್ನಡಿಗರು ತಾಯ್ನಾಡಿಗೆ ಮರಳಿದರು.

**ಪಿ.ವಿ. ಸಿಂಧು ವಾಪಸ್:** ಸ್ಟಾರ್ ಬ್ಯಾಡ್ಮಿಂಟನ್ ಆಟಗಾರ್ತಿ, ಒಲಂಪಿಕ್ಸ್ ಪದಕ ವಿಜೇತೆ ಪಿ.ವಿ. ಸಿಂಧು ಅವರು ಸಹ ದುಬೈಯಿಂದ ಬೆಂಗಳೂರಿಗೆ ವಾಪಸ್ಸಾದರು. ಆಲ್ ಇಂಗ್ಲೆಂಡ್ ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ಪಾಲ್ಗೊಳ್ಳುವ ಮುನ್ನ ಪಿ.ವಿ. ಸಿಂಧು ರವರು ಬೆಂಗಳೂರಿನಿಂದಲೇ ನಾಲ್ಕೈದು ದಿನಗಳ ಹಿಂದೆ ದುಬೈಗೆ ತೆರಳಿದ್ದರು. ಇಸ್ರೇಲ್-ಇರಾನ್ ಯುದ್ಧದಿಂದಾಗಿ ವಿಮಾನ ರದ್ದಾಗಿ ಸಿಂಧು ಅವರು ದುಬೈನಲ್ಲಿ ಸಿಲುಕಿದ್ದರು. ಹೀಗಾಗಿ ಅವರು ದುಬೈನಲ್ಲಿ ನಡೆಯಬೇಕಿದ್ದ ಆಲ್ ಇಂಗ್ಲೆಂಡ್ ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ಪಾಲ್ಗೊಳ್ಳುವುದಕ್ಕೆ ತೊಂದರೆಯಾಯಿತು. ವಿಮಾನಯಾನ ಸಂಚಾರಕ್ಕಿದ್ದ ಎಲ್ಲಾ ಅಡೆತಡೆಗಳು ನಿವಾರಣೆಯಾಗಿ ಪಿ.ವಿ. ಸಿಂಧು ತಾಯ್ನಾಡಿಗೆ ಮರಳಿದರು.

### ಸೋಮವಾರ ಮುಂಜಾನೆವರೆಗೆ 2 ವಿಮಾನಗಳಲ್ಲಿ ಆಗಮನ



ಯುದ್ಧದ ಪರಿಸ್ಥಿತಿಯಿಂದ ಮಧ್ಯಪ್ರಾಚ್ಯ ದೇಶಗಳಲ್ಲಿ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗಿತ್ತು. ಹೀಗಾಗಿ ದುಬೈ, ಅಬುಧಾಬಿ, ರಿಯಾಜ್, ಡೆಡ್ಡಾ, ದೋಹ ಮತ್ತಿತರ ನಗರಗಳಲ್ಲಿ ವಾಯು ಪ್ರದೇಶ ನಿರ್ಬಂಧಿಸಲಾಗಿತ್ತು. ಈ ಕಾರಣದಿಂದ ಶನಿವಾರದಿಂದಲೇ ಮಧ್ಯಪ್ರಾಚ್ಯದಿಂದ ಬೆಂಗಳೂರಿಗೆ ಬರಬೇಕಿದ್ದ ವಿಮಾನಗಳ ಹಾರಾಟವನ್ನು ಸ್ಥಗಿತಗೊಳಿಸಲಾಗಿತ್ತು. ನಿನ್ನೆಯಿಂದ ವಿಮಾನಯಾನ ಆರಂಭವಾದ ಹಿನ್ನೆಲೆಯಲ್ಲಿ ಬೆಂಗಳೂರು-ಅಬುಧಾಬಿ ನಡುವೆ ವಿಮಾನ ಸಂಚಾರ ಆರಂಭಗೊಂಡಿದ್ದು, ಕನ್ನಡಿಗರನ್ನು ಹಂತ ಹಂತವಾಗಿ ತಾಯ್ನಾಡಿಗೆ ಕರೆ ತರಲಾಗುತ್ತಿದೆ.

ಭೋಜೇಗೌಡ, ಎ.ಟಿ. ಶ್ರೀನಿವಾಸ್ ವಾಪಸ್: ದುಬೈನಲ್ಲಿ ಶಾಸಕರಾದ ಭೋಜೇಗೌಡ, ಎ.ಟಿ. ಶ್ರೀನಿವಾಸ್ ಸಹ ಸಿಲುಕಿದ್ದರು. ಅವರುಗಳು ಸಹ ಸುರಕ್ಷಿತವಾಗಿ ವಾಪಸ್ಸಾಗಿದ್ದು, ಇಂದು ಬೆಳಿಗ್ಗೆ ಅಬುಧಾಬಿಯಿಂದ ಬಂದ ವಿಧಾನ ಪರಿಷತ್ ಸದಸ್ಯ ಎಲ್.ಎಲ್. ಭೋಜೇಗೌಡ ಅವರು ಸುದ್ದಿಗಾರರೊಂದಿಗೆ ಮಾತನಾಡಿ, ನಾನು ದಕ್ಷಿಣ ಆಫ್ರಿಕಾಗೆ ತೆರಳಿದ್ದೆ. ಕಾರಣಾಂತರಗಳಿಂದ ದುಬೈ ಮೂಲಕ ಇಂಡಿಯಾಗೆ ವಾಪಸ್ ಬರಬೇಕಿತ್ತು. ಆದರೆ ವಿಮಾನಗಳ ಸಂಚಾರ ಸ್ಥಗಿತಗೊಂಡಿತು. ನಮ್ಮ ಬಳಿ ದುಬೈ ವೀಸಾ ಇರಲಿಲ್ಲ. ಬಳಿಕ ವೀಸಾ ಪಡೆದುಕೊಂಡೆ. ಕೇಂದ್ರ ಸಚಿವ ಕುಮಾರಸ್ವಾಮಿಯವರು ಹೋಟೆಲ್ ವ್ಯವಸ್ಥೆ ಮಾಡಿದ್ದರು. ಹೋಟೆಲ್ ಪಕ್ಕದಲ್ಲೇ ಬಾಂಬ್‌ಗಳ ಸುರಿಮಳೆಯಾಗುತ್ತಿತ್ತು. ನಮ್ಮನ್ನು ಸುರಕ್ಷಿತ ಸ್ಥಳದಲ್ಲಿ ಇರಿಸಿದ್ದರು. ಸೋಮವಾರ ಬೆಳಗ್ಗೆ ಸಚಿವರಾದ ಕೃಷ್ಣಬೈರೇಗೌಡ ಮತ್ತು ಹೆಚ್.ಕೆ. ಪಾಟೀಲ್ ಅವರಿಗೆ ದೂರವಾಣಿ ಮಾಡಿದ್ದೆ. ಆ ಸಂದರ್ಭದಲ್ಲಿ ನಾವಿದ್ದ ಸ್ಥಳದ ಪಕ್ಕದಲ್ಲೇ ಮೂರು ಮಿಸೈಲ್‌ಗಳು ಬಿದ್ದವು. ಖುರ್ಜಾ ಕಲೀಬ್ ಪಕ್ಕದಲ್ಲೇ ಬಾಂಬ್‌ಗಳು ಬಿದ್ದವು. ಯಾವುದೇ ತೊಂದರೆಯಾಗಲಿಲ್ಲ. ಈ ಯುದ್ಧದ ವಾತಾವರಣದಲ್ಲಿ ಇಷ್ಟು ಬೇಗ ನಾವು ವಾಪಸ್ ಬರುತ್ತವೆ ಎಂದುಕೊಂಡಿರಲಿಲ್ಲ. ದೇವರ ದಯೆ ಕನ್ನಡಿಗರು ಸೇರಿದಂತೆ ಭಾರತೀಯರೆಲ್ಲರೂ ಸುರಕ್ಷಿತವಾಗಿ ತಾಯ್ನಾಡಿಗೆ ಮರಳಿದ್ದೇವೆ ಎಂದರು.

### ವಾಯುಪ್ರದೇಶ ಮತ್ತೆ ಬಂದ್: ದುಬೈಗೆ ಹೊರಟಿದ್ದ ವಿಮಾನ ಮಧ್ಯದಲ್ಲೇ ವಾಪಸ್

ಇರಾನ್-ಇಸ್ರೇಲ್ ಯುದ್ಧದ ತೀವ್ರತೆಯ ನಡುವೆ ದುಬೈ ವಾಯು ಪ್ರದೇಶವನ್ನು ಮತ್ತೆ ಬಂದ್ ಮಾಡಲಾಗಿದೆ. ಇದರ ಪರಿಣಾಮವಾಗಿ ಬೆಂಗಳೂರಿನಿಂದ ದುಬೈಗೆ 113 ಪ್ರಯಾಣಿಕರನ್ನು ಹೊತ್ತು ಹೊರಟಿದ್ದ ಎಮಿರೇಟ್ಸ್ ವಿಮಾನ ಮಧ್ಯದಲ್ಲೇ ವಾಪಸ್ ಆಗಿದೆ.ಇಂದು ಮಾ 3 ಮುಂಜಾನೆ 04:30ಕ್ಕೆ ಎಮಿರೇಟ್ಸ್ ವಿಮಾನ ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಟೇಕಾಫ್ ಆಗಿತ್ತು.ಆದರೆ ಭಾರತದ ಗಡಿ ದಾಟುವಷ್ಟರಲ್ಲಿ ದುಬೈ ವಾಯು ಪ್ರದೇಶ ಬಂದ್ ಆಗಿರುವ ಮಾಹಿತಿ ಲಭಿಸಿದೆ. ತಕ್ಷಣವೇ ವಿಮಾನವನ್ನು ಹಿಂತಿರುಗಿಸುವ ನಿರ್ಧಾರ ಕೈಗೊಳ್ಳಲಾಗಿದೆ.ದುಬೈಗೆ ತೆರಳುತ್ತಿದ್ದ ಪ್ರಯಾಣಿಕರು ಇದೀಗ ವಿಮಾನ ನಿಲ್ದಾಣದಲ್ಲೇ ಕಾದು ಕುಳಿತಿದ್ದಾರೆ. ಯುದ್ಧದ ಪರಿಣಾಮದಿಂದ ಏರ್‌ಟ್ರಾಫಿಕ್ ಮೇಲೆ ಭಾರಿ ಪರಿಣಾಮ ಬೀರಿದೆ.ಇಂದು ಮಾತ್ರವಲ್ಲದೆ, ಒಟ್ಟು 42 ವಿಮಾನಗಳ ಹಾರಾಟವನ್ನು ರದ್ದು ಮಾಡಲಾಗಿದೆ. ಆಗಮಿಸಬೇಕಿದ್ದ 21 ಹಾಗೂ ನಿರ್ಗಮಿಸಬೇಕಿದ್ದ 21 ವಿಮಾನಗಳು ರದ್ದಾಗಿವೆ. ಅಬುದಾಬಿ, ರಿಯಾದ್, ದುಬೈ, ದೋಹಾ, ದಮ್ಮನ್ ಸೇರಿದಂತೆ ಹಲವು ಗಲ್ಫ್ ನಗರಗಳಿಗೆ ಸಂಪರ್ಕಿತ ಹಾರಾಟಗಳು ಸ್ಥಗಿತಗೊಂಡಿವೆ.ಸೋಮವಾರವೂ ಇದೇ ಕಾರಣದಿಂದ 72 ವಿಮಾನಗಳ ಹಾರಾಟ ರದ್ದು ಮಾಡಲಾಗಿತ್ತು. ಪ್ರಯಾಣಿಕರಿಗೆ ಮುಂಚಿತವಾಗಿ ಮಾಹಿತಿ ನೀಡಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಹಾರ್ಮುಜ್ ಜಲಸಂಧಿಯಲ್ಲಿನ ಸಂಚಾರ ಬಂದ್, ಕೊಲ್ಲಿಯ ಕಚ್ಚಾತೈಲ ಅವಲಂಬಿಸಿರುವ ಭಾರತಕ್ಕೆ ನೇರ ಹೊಡೆತ

# ಎರಡು ವಾರಗಳಲ್ಲಿ ಭಾರತದಲ್ಲಿ ಇಂಧನ ಅಭಾವ ನಿರೀಕ್ಷೆ?




**ನವದೆಹಲಿ, ಮಾ.3:** ಹಾರ್ಮುಜ್ ಜಲಸಂಧಿಯಲ್ಲಿನ ಸಂಚಾರ ಬಂದ್ ಅವಧಿ ಮತ್ತೆ ಕೆಲವು ದಿನ ಮುಂದುವರಿದರೆ ಟ್ಯಾಂಕರ್‌ಗಳ ಸಾಲು ಮತ್ತಷ್ಟು ಬೆಳೆಯಲಿದೆ. ಮಾತ್ರವಲ್ಲದೆ, ತೈಲ ವಿತರಣಾ ವ್ಯವಸ್ಥೆ ಸಂಪೂರ್ಣವಾಗಿ ಕುಸಿಯಲಿದೆ. ಇದರ ಪರಿಣಾಮಗಳು ಭೀಕರವಾಗಿರಲಿವೆ.

ಇರಾನ್ ಮತ್ತು ಅಮೆರಿಕ–ಇಸ್ರೇಲ್ ನಡುವಿನ ಸಂಘರ್ಷದಿಂದಾಗಿ ಇರಾನ್ ಬಳಿಯ ಹಾರ್ಮುಜ್ ಜಲಸಂಧಿ ಸ್ಥಬ್ದವಾಗಿದೆ. ಹಾರ್ಮುಜ್ ಜಲಸಂಧಿ ಮೂಲಕ ನಡೆಯುವ ಜಾಗತಿಕ ತೈಲ ಸಂಚಾರವು ಸಂಪೂರ್ಣವಾಗಿ ಸ್ಥಗಿತಗೊಂಡಿದೆ. ಒಟ್ಟು ಜಾಗತಿಕ ತೈಲ ವಹಿವಾಟಿನಲ್ಲಿ ಬರೋಬ್ಬರಿ 86%ರಷ್ಟು ಕುಸಿತ ಕಂಡಿದೆ. ಇದು ಇಂಧನ ಮಾರುಕಟ್ಟೆಯನ್ನು ಸಂಕಷ್ಟಕ್ಕೆ ದೂಡಿದೆ.

ಕಡಲ ವಿಶ್ಲೇಷಣಾ ಸಂಸ್ಥೆಗಳಾದ ವಿಂಡ್ವರ್ಡ್ ಮತ್ತು ಕೆಪ್ಲರ್ ನೀಡಿರುವ ಅಂಕಿ–ಅಂಶಗಳ ಪ್ರಕಾರ, ಈ ಜಲಮಾರ್ಗವು ಅಧಿಕೃತವಾಗಿ ಮುಚ್ಚಲ್ಪಟ್ಟಿಲ್ಲ. ಆದರೂ, ವಾಸ್ತವದಲ್ಲಿ ಸಂಚಾರ ಬಂದ್ ಆಗಿದೆ. ಮಾರ್ಚ್ 1ರಂದು, ಕೇವಲ 28 ಲಕ್ಷ ಬ್ಯಾರೆಲಲ್‌ಗಳನ್ನು ಹೊತ್ತ ಮೂರು ಟ್ಯಾಂಕರ್‌ಗಳು ಮಾತ್ರ ಹಾರ್ಮುಜ್ ಜಲಸಂಧಿಯನ್ನು ದಾಟಿವೆ. ಇದು 2026ರ ದೈನಂದಿನ ವಹಿವಾಟಿನ ಸರಾಸರಿ 1.98 ಕೋಟಿ ಬ್ಯಾರೆಲ್‌ಗಳ ಪೈಕಿ 86%ರಷ್ಟು ವಹಿವಾಟು ಸ್ಥಗಿತಗೊಂಡಂತಾಗಿದ್ದು, ಭಾರಿ ಕುಸಿತ ಕಂಡಿದೆ. ಮಾರ್ಚ್ 2ರ ಮುಂಜಾನೆಯ ವೇಳೆಗೆ, ಕೇವಲ ಒಂದು ಸಣ್ಣ ಟ್ಯಾಂಕರ್ ಮತ್ತು ಒಂದು ಸಣ್ಣ ಸರಕು ಹಡಗು ಮಾತ್ರ ಮುಖ್ಯ ಪಥದಲ್ಲಿ ಚಲಿಸಿವೆ.

ಸರಿಸುಮಾರು, ಭಾರತದ ಎಲ್‌ಎನ್‌ಜಿ ಆಮದಿನ ಸುಮಾರು 60 ಪ್ರತಿಶತ ಮತ್ತು ದಿನಕ್ಕೆ ಸುಮಾರು 2.5ರಿಂದ 2.7 ದಶಲಕ್ಷ ಬ್ಯಾರೆಲ್‌ಗಳ ಕಚ್ಚಾ ತೈಲ ಆಮದಿನ ಅರ್ಧದಷ್ಟು, ಓಮನ್ ಮತ್ತು ಇರಾನ್ ನಡುವಿನ ಕಿರಿದಾದ ಜಲಮಾರ್ಗವಾದ ಹಾರ್ಮುಜ್ ಜಲಸಂಧಿಯ ಮೂಲಕ ಸಾಗುತ್ತದೆ. ಅದೇ ಸಮಯದಲ್ಲಿ, ಪಶ್ಚಿಮ ಏಷ್ಯಾದಿಂದ ಭಾರತ, ಜಪಾನ್, ಕೊರಿಯಾ ಮತ್ತು ಚೀನಾಕ್ಕೆ 20 ಲಕ್ಷ ಬ್ಯಾರೆಲ್ ತೈಲವನ್ನು ಸಾಗಿಸಬಲ್ಲ ಅತಿ ದೊಡ್ಡ ತೈಲ ಟ್ಯಾಂಕರ್‌ಗಳ (ವಿಎಲ್ಸಿಸಿ ಎಂದು ಕರೆಯಲ್ಪಡುವ) ಸಾಗಣೆ ಬೆಲೆ 94 ಪ್ರತಿಶತದಷ್ಟು ಹೆಚ್ಚಾಗಿ 423,736 ಡಾಲರ್‌ಗಳ ದಾಖಲೆಯ ಗರಿಷ್ಠವನ್ನು ತಲುಪಿದೆ ಎಂದು ಲಂಡನ್ ಷೇರುಪೇಟೆ ತಿಳಿಸಿದೆ.

ಕೊಲ್ಲಿಯ ಕಚ್ಚಾತೈಲವನ್ನೇ ಹೆಚ್ಚಾಗಿ ಅವಲಂಬಿಸಿರುವ ಚೀನಾ ಮತ್ತು ಭಾರತಕ್ಕೆ ಇದು ನೇರ ಹೊಡೆತ ನೀಡಲಿದೆ. ಎಲ್‌ಎನ್ಜಿ ಬಳಸುವ ಭಾರತೀಯ ಸಂಸ್ಥೆಗಳು ಪೂರೈಕೆಯಲ್ಲಿ ಕಡಿತ ಮತ್ತು ನೈಸರ್ಗಿಕ ಅನಿಲದ ಬೆಲೆಯಲ್ಲಿ ಏರಿಕೆಗೆ ಸಜ್ಜಾಗುತ್ತಿವೆ, ಇದು ರಸಗೊಬ್ಬರ ಮತ್ತು ಪೆಟ್ರೋ–ರಾಸಾಯನಿಕ ಕಂಪನಿಗಳಿಗೆ ಆಹಾರವಾಗುವುದರ ಜೊತೆಗೆ ತಮ್ಮ ಟರ್ಬೈನ್, ಆರ್ಕ್ ಫರ್ನೇಸ್, ಸ್ಮೆಲ್ಟರ್ ಮತ್ತು ಇತರ ಭಾರಿ ಯಂತ್ರೋಪಕರಣಗಳನ್ನು ನಡೆಸುತ್ತದೆ. ಭಾರತ ಈಗ ರಷ್ಯಾದಿಂದ ಖರೀದಿಗಳನ್ನು ಹೆಚ್ಚಿಸುವ ಮಾರ್ಗಗಳನ್ನು ಹುಡುಕುತ್ತಿದೆ ಎಂದು ಮೂಲಗಳು ತಿಳಿಸಿವೆ.



# ದೇಶದಲ್ಲಿ ಕಚ್ಚಾತೈಲ, ಪೆಟ್ರೋಲಿಯಂ ಉತ್ಪನ್ನಗಳ ದಾಸ್ತಾನು ಸಮೃದ್ಧ: ಹರ್ದೀಪ್‌ಸಿಂಗ್ ಪುರಿ ಸ್ಪಷ್ಟನೆ

**ನವದೆಹಲಿ, ಮಾ.3:** ತೈಲ ದಾಸ್ತಾನಿನ ಬಗ್ಗೆ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದು, ಅನಿಶ್ಚಿತತೆ ಎದುರಾದರೆ ಕಚ್ಚಾತೈಲು ರಫ್ತು ಮಾಡುವುದನ್ನು ಸ್ಥಗಿತಗೊಳಿಸಲಾಗುವುದು ಎಂದು ಕೇಂದ್ರ ಇಂಧನ ಇಲಾಖೆ ಚಿಂತನೆ ನಡೆಸಿದೆ. ಹಾಗೂ ರಷ್ಯಾದಿಂದ ಕಚ್ಚಾತೈಲ ಆಮದನ್ನು ಹೆಚ್ಚಿಸಬಹುದು ಹಾಗೂ ದೇಶದೊಳಗೆ ಇಂಧನ ಪೂರೈಕೆಗೆ ಅಡುಗೆ ಅನಿಲ ಮಾದರಿಯಲ್ಲಿ ಪಡಿತರ ವಿತರಣೆಯಂತಹ ಕ್ರಮಗಳನ್ನು ಜಾರಿ ಮಾಡಬಹುದು ಎಂದು ಕೇಂದ್ರ ಇಂಧನ ಸಚಿವ ಹರ್ದೀಪ್‌ಸಿಂಗ್ ಪುರಿ ಹೇಳಿದ್ದಾರೆ.

ಇಂಧನ ಪೂರೈಕೆಯ ಬಗ್ಗೆ ಪರಿಶೀಲನೆ ನಡೆಸಿದ ಅವರು, ಪರಿಸ್ಥಿತಿಯನ್ನು ನಿರಂತರವಾಗಿ ಗಮನಿಸುತ್ತಿದ್ದೇವೆ.ದೇಶದಲ್ಲಿ ಪ್ರಮುಖ ಪೆಟ್ರೋಲಿಯಂ ಉತ್ಪನ್ನಗಳ ಲಭ್ಯತೆ ಮತ್ತು ಕೈಗೆಟುಕುವ ಬೆಲೆಯನ್ನು ಖಚಿತಪಡಿಸಿಕೊಳ್ಳಲು ಎಲ್ಲ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ. ಮಧ್ಯಪ್ರಾಚ್ಯದಿಂದ ಉಂಟಾಗುವ ಅಲ್ಪಾವಧಿಯ ಅಡೆತಡೆಗಳನ್ನು ಎದುರಿಸಲು ದೇಶವು ಕಚ್ಚಾ ತೈಲ ಮತ್ತು ಪೆಟ್ರೋಲ್, ಡೀಸೆಲ್ ಮತ್ತು ಎಟಿಎಫ್ ಸೇರಿದಂತೆ ಪ್ರಮುಖ ಪೆಟ್ರೋಲಿಯಂ ಉತ್ಪನ್ನಗಳ ಸಮೃದ್ಧ ದಾಸ್ತಾನು ಇದೆ ಎಂದು ಹೇಳಿದರು.

ದೇಶಾದ್ಯಂತ ಪೆಟ್ರೋಲಿಯಂ ಉತ್ಪನ್ನಗಳ ಪೂರೈಕೆ ಮತ್ತು ದಾಸ್ತಾನು ಸ್ಥಿತಿಯನ್ನು



ನಿರಂತರವಾಗಿ ಮೇಲ್ವಿಚಾರಣೆ ಮಾಡಲು ಸಚಿವಾಲಯವು 24 ಗಂಟೆಗಳ ನಿಯಂತ್ರಣ ಕೊಠಡಿಯನ್ನು ಸ್ಥಾಪಿಸಿದೆ.


**ಎಲ್‌ಪಿಜಿ ವಿಷಯದಲ್ಲಿ ದೇಶ ಅಸುರಕ್ಷಿತ**

ಭಾರತವು ತನ್ನ ಎಲ್‌ಪಿಜಿ ಅಗತ್ಯದ 80–85%ರಷ್ಟನ್ನು ಆಮದು ಮಾಡಿಕೊಳ್ಳುತ್ತದೆ. ಅಲ್ಲದೆ, ಇದರ ಹೆಚ್ಚಿನ ಭಾಗವು ಹಾರ್ಮುಜ್ ಜಲಸಂಧಿಯ ಮೂಲಕ ಕೊಲ್ಲಿ ರಾಷ್ಟ್ರಗಳಿಂದಲೇ ಬರುತ್ತದೆ. ಹೊಸ ಸರಕುಗಳ ಪೂರೈಕೆ ನಿಂತರೆ, ಪ್ರಸ್ತುತ ಇರುವ ದಾಸ್ತಾನು ಕೇವಲ ಎರಡು ವಾರಗಳ ಬಳಕೆಗೆ ಮಾತ್ರ ಸಾಕಾಗಬಹುದು ಎಂದು ಅಂದಾಜಿಸಲಾಗಿದೆ. ಸರ್ಕಾರಿ ಸ್ವಾಮ್ಯದ ಇಂಡಿಯನ್ ಆಯಿಲ್, ಎಚ್‌ಪಿಸಿಎಲ್ ಮತ್ತು ಬಿಪಿಸಿಎಲ್ ಕಂಪನಿಗಳು ಆಯ್ದ ಘಟಕಗಳಲ್ಲಿ ಎಲ್ಪಿಜಿ ಉತ್ಪಾದನೆಯನ್ನು ಹೆಚ್ಚಿಸಲು ಪ್ರಾರಂಭಿಸಿವೆ. ಭಾರತದ ಸಂಗ್ರಹಾಗಾರಗಳು, ಸಂಸ್ಕರಣಾಗಾರಗಳು ಹಾಗೂ ಬಂದರುಗಳಲ್ಲಿರುವ ಒಟ್ಟು ಕಚ್ಚಾ ತೈಲ ಮತ್ತು ಉತ್ಪನ್ನಗಳ ದಾಸ್ತಾನು ಸುಮಾರು 74 ದಿನಗಳ ಬೇಡಿಕೆಯನ್ನು ಪೂರೈಸಬಲ್ಲದು ಎಂದು ಪುರಿ ಹೇಳಿದ್ದಾರೆ. ಇದರಲ್ಲಿ ಕಚ್ಚಾ ತೈಲವು ಸುಮಾರು 17–18 ದಿನಗಳಿಗೆ, ಸಂಸ್ಕರಿಸಿದ ಇಂಧನಗಳು ಸುಮಾರು 20–21 ದಿನಗಳಿಗೆ ಹಾಗೂ ಎಲ್‌ಎನ್‌ಜಿ ಸಂಗ್ರಹವು ಸುಮಾರು 10–12 ದಿನಗಳಿಗೆ ಸಾಕಾಗಬಹುದು ಎಂದು ಉದ್ಯಮದ ಮೂಲಗಳು ಅಂದಾಜಿಸಿವೆ. ಪಶ್ಚಿಮ ಏಷ್ಯಾದ ಈ ಸಂಘರ್ಷವು ದಿನಗಳಲ್ಲ, ವಾರಗಳ ಕಾಲ? ಮುಂದುವರಿಯಬಹುದು ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎಚ್ಚರಿಸಿದ್ದಾರೆ. ಇದು ಭಾರತಕ್ಕೆ ತನ್ನ ದೇಶೀಯ ಇಂಧನ ಭದ್ರತೆ ಮತ್ತು ಜಾಗತಿಕ ರಫ್ತಿನ ನಡುವೆ ಸಮತೋಲನ ಕಾಯ್ದುಕೊಳ್ಳುವ ದೊಡ್ಡ ಸವಾಲನ್ನು ಒಡ್ಡಿದೆ.

### ಬ್ಯಾರೆಲ್‌ಗೆ 100 ಡಾಲರ್‌ಗಿಂತ ಏರಿಕೆ ಸಂಭವ

ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಮಿಲಿಟರಿ ಏರಿಕೆಗಳ ಮಧ್ಯೆ ತೈಲ ಮೂಲಸೌಕರ್ಯಕ್ಕೆ ಯಾವುದೇ ರಚನಾತ್ಮಕ ಅಡ್ಡಿ ಉಂಟಾದರೆ ಕಚ್ಚಾ ತೈಲ ಬೆಲೆಗಳು ಬ್ಯಾರೆಲ್‌ಗೆ USD 100 ಮಿತಿಗಿಂತ ಹೆಚ್ಚಾಗಬಹುದು ಎಂದು ICICI ಬ್ಯಾಂಕ್ ವರದಿ ಹೇಳಿದೆ. ಬ್ರೆಂಟ್ ಕಚ್ಚಾ ತೈಲ ಬೆಲೆಗಳು ಬ್ಯಾರೆಲ್‌ಗೆ USD 75 ರಿಂದ USD 95 ವ್ಯಾಪ್ತಿಯಲ್ಲಿ ವಹಿವಾಟು ನಡೆಸುವ ನಿರೀಕ್ಷೆಯಿದೆ ಮತ್ತು ತೈಲ ಬೆಲೆಗಳು ಈ ಶ್ರೇಣಿಯ ಉನ್ನತ ಅಂತ್ಯದತ್ತ ಸಾಗುವ ಅಪಾಯಗಳಿವೆ ಎಂದು ವರದಿ ಹೇಳಿದೆ.






ನವದೆಹಲಿಯಲ್ಲಿ ಮಂಗಳವಾರ "ಆರ್ಥಿಕ ಬೆಳವಣಿಗೆಯನ್ನು ಸುಸ್ಥಿರಗೊಳಿಸುವುದು ಮತ್ತು ಬಲಪಡಿಸುವುದು" ಎಂಬ ವಿಷಯದ ಕುರಿತು ಆಯೋಜಿಸಿದ್ದ ಬಜೆಟ್ ನಂತರದ ವೆಬಿನಾರ್ ಅನ್ನು ಉದ್ದೇಶಿಸಿ ಪ್ರಧಾನಿ ನರೇಂದ್ರ ಮೋದಿ ಮಾತನಾಡಿದರು.

# ರಾಜ್ಯಸಭಾ ಚುನಾವಣೆ: ಬಿಜೆಪಿಯಿಂದ ಒಂಬತ್ತು ಅಭ್ಯರ್ಥಿಗಳ ಘೋಷಣೆ



**■ ಬಿಹಾರದಿಂದ ಬಿಜೆಪಿ ಅಧ್ಯಕ್ಷ ನಿತಿನ್ ನಬೀನ್ ಸ್ಪರ್ಧೆ**

**ನವದೆಹಲಿ, ಮಾ.3:** ಮಾರ್ಚ್ 16 ರಂದು ನಡೆಯಲಿರುವ ರಾಜ್ಯಸಭಾ ಚುನಾವಣೆಗೆ ಬಿಜೆಪಿ ಮಂಗಳವಾರ 9 ಅಭ್ಯರ್ಥಿಗಳನ್ನು ಘೋಷಿಸಿದ್ದು, ಪಕ್ಷದ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್ ಬಿಹಾರದಿಂದ ಸ್ಪರ್ಧಿಸಲಿದ್ದಾರೆ. ಬಿಹಾರದಿಂದ ನಿತಿನ್ ನಬೀನ್ ಮತ್ತು ಶಿವೇಶ್ ಕುಮಾರ್, ಅಸ್ಸಾಂನಿಂದ ತೇರಶ್ ಗೋವಲ್ಲ ಮತ್ತು ಜೋಗೆನ್ ಮೋಹನ್ ಹಾಗೂ ಛತ್ತೀಸ್‌ಗಢದಿಂದ ಲಕ್ಷ್ಮಿ ವರ್ಮಾ ಅವರನ್ನು ಅಭ್ಯರ್ಥಿಯಾಗಿ ಹೆಸರಿಸಿದೆ. ಇನ್ನೂ ಹರಿಯಾಣದಿಂದ ಸಂಜಯ್ ಭಾಟಿಯಾ, ಒಡಿಶಾದಿಂದ ಸುಜೀತ್ ಕುಮಾರ್ ಜೊತೆಗೆ ಬಿಜೆಪಿ ರಾಜ್ಯ ಘಟಕದ ಮುಖ್ಯಸ್ಥ ಮನಮೋಹನ್ ಸಮಲ್ ಹಾಗೂ ಪಶ್ಚಿಮ ಬಂಗಾಳದಿಂದ ರಾಹುಲ್ ಸಿನ್ಹಾ ಅವರನ್ನ ಚುನಾವಣೆಗೆ ಆಯ್ಕೆ ಮಾಡಿದೆ.

# ನಿತೀಶ್ ಪುತ್ರ ರಾಜಕೀಯಕ್ಕೆ ಎಂಟ್ರಿ



**ಪಾಟ್ನಾ, ಮಾ. 3:** ಬಿಹಾರದ ಮುಖ್ಯಮಂತ್ರಿ ನಿತೀಶ್ ಕುಮಾರ್ ಪುತ್ರ ನಿಶಾಂತ್ ಕುಮಾರ್ ರಾಜಕೀಯ ಪ್ರವೇಶ ಅಂತಿಮಗೊಂಡಿದೆ. ಈ ಬಗ್ಗೆ ಜೆಡಿಯು ಶೀಘ್ರದಲ್ಲೇ ಅಧಿಕೃತ ಘೋಷಣೆ ಮಾಡಲಿದೆ. ಬಿಹಾರ ಸಚಿವ ಶ್ರವಣ್ ಕುಮಾರ್, ನಿಶಾಂತ್ ಅವರಿಗೆ ಪಕ್ಷದಲ್ಲಿ ದೊಡ್ಡ ಜವಾಬ್ದಾರಿ ನೀಡಲಾಗುವುದು ಎಂದು ಹೇಳಿದ್ದಾರೆ.

ನಿಶಾಂತ್ ಕುಮಾರ್ ಸಕ್ರಿಯ ರಾಜಕೀಯಕ್ಕೆ ಸೇರುವುದು ಈಗ ಅಂತಿಮಗೊಂಡಿದೆ. ಪಕ್ಷವು ಒಂದು ಅಥವಾ ಎರಡು ದಿನಗಳಲ್ಲಿ ಈ ಕುರಿತು ಅಧಿಕೃತ ಘೋಷಣೆ ಮಾಡಲಿದೆ. ನಿಶಾಂತ್ ಅವರು ರಾಜಕೀಯಕ್ಕೆ ಬರಬೇಕೆಂದು ಪಕ್ಷದ ಕಾರ್ಯಕರ್ತರು ಕಳೆದ ಹಲವು ವರ್ಷಗಳಿಂದ ಒತ್ತಾಯಿಸುತ್ತಿದ್ದರು. ಹೋಳಿ ಹಬ್ಬದ ಮುನ್ನವೇ ಈ ನಿರ್ಧಾರ ಹೊರಬಂದಿರುವುದು ಕಾರ್ಯಕರ್ತರು ಮತ್ತು ಬೆಂಬಲಿಗರಲ್ಲಿ ಸಂಭ್ರಮ ಮೂಡಿಸಿದೆ ಎಂದು ಹೇಳಿದ್ದಾರೆ.

ಪಕ್ಷದಲ್ಲಿ ಅವರಿಗೆ ದೊಡ್ಡ ಜವಾಬ್ದಾರಿಯನ್ನು ನೀಡಲಾಗುವುದು. ಅವರು ಯಾವ ನಿರ್ದಿಷ್ಟ ಪಾತ್ರವನ್ನು ವಹಿಸಿಕೊಳ್ಳಲಿದ್ದಾರೆ ಎಂಬುದು ಒಂದೆರಡು ದಿನಗಳಲ್ಲಿ ನಿರ್ಧಾರವಾಗಲಿದೆ ಎಂದು ಸಚಿವರು ಸೇರಿಸಿದ್ದಾರೆ. ನಿಶಾಂತ್ ಅವರನ್ನು ರಾಜ್ಯಸಭೆಗೆ ಕಳುಹಿಸಲಾಗುತ್ತದೆಯೇ ಎಂಬ ಪ್ರಶ್ನೆಗೆ ಉತ್ತರಿಸಿದ ಶ್ರವಣ್ ಕುಮಾರ್, ಏನು ಬೇಕಾದರೂ ಆಗಬಹುದು ಎಂದಿದ್ದಾರೆ.

### ಮಾನವನ ಚಿಂತನೆಗೆ AI ದೊಡ್ಡ ಬೆದರಿಕೆ

# ಮುಕ್ತ ಕಲಾ ಶಿಕ್ಷಣದ ಮಹತ್ವ ಅರಿಯಬೇಕಿದೆ: ಶಶಿ ತರೂರ್

**ಚೆನ್ನೈ, ಮಾ.3:** ಮುಂದಿನ ಕೇರಳ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ನೇತೃತ್ವದ ಯುಡಿಎಫ್ ಕನಿಷ್ಠ 85 ಸ್ಥಾನಗಳನ್ನು ಗೆಲ್ಲಲಿದೆ ಎಂದು ತಿರುವನಂತಪುರ ಕ್ಷೇತ್ರದ ಸಂಸದ ಶಶಿ ತರೂರ್ ಅಂದಾಜಿಸಿದ್ದಾರೆ.

ಚೆನ್ನೈನಲ್ಲಿ ಆಯೋಜಿಸಿದ್ದ 14ನೇ ಥಿಂಕು ಎಜು ಸಮಾವೇಶದ ಮೊದಲ ದಿನ Why Liberal Arts Matter ವಿಷಯದ ಕುರಿತು ಹಿರಿಯ ಪತ್ರಕರ್ತೆ ಕಾವೇರಿ ಬಮ್ಜಾಯಿ ಅವರೊಂದಿಗೆ ಸಂವಾದದಲ್ಲಿ ಮಾತನಾಡಿದರು.



ಲಿಬರಲ್ ಆರ್ಟ್ಸ್ ಮತ್ತು ಕೃತಕ ಬುದ್ಧಿಮತ್ತೆ ಕುರಿತು ಮಾತನಾಡಿದ ಅವರು, AI ಮಾನವ ಚಿಂತನೆಗೆ ಪರ್ಯಾಯವಾಗುವ ಅಪಾಯವಿದೆ ಎಂದು ಕಳವಳ ವ್ಯಕ್ತಪಡಿಸಿದರು. ಮುಂದಿನ ಪೀಳಿಗೆ ಚಿಂತನೆ ಪ್ರಕ್ರಿಯೆಯನ್ನು ಎಐಗೆ ಒಪ್ಪಿಸಿದರೆ, ನಾವು ಬೌದ್ಧಿಕವಾಗಿ ದಿವಾಳಿಯಾಗುತ್ತೇವೆ ಎಂದರು.

1990ರಿಂದ 2005ರವರೆಗೆ ನಡೆದ ಭಯೋತ್ಪಾದಕ ದಾಳಿಗಳಲ್ಲಿ ತೊಡಗಿದ್ದವರಲ್ಲಿ 96 ಶೇಕಡಾ ಜನರಿಗೆ ಎಂಜಿನಿಯರಿಂಗ್ ಹಿನ್ನೆಲೆ ಇತ್ತು ಎಂಬ ಆಕ್ಸ್‌ಫರ್ಡ್ ವಿಶ್ವವಿದ್ಯಾಲಯದ ಅಧ್ಯಯನವನ್ನು ಉಲ್ಲೇಖಿಸಿದರು. ಎಲ್ಲ ಎಂಜಿನಿಯರ್‌ಗಳು ಭಯೋತ್ಪಾದಕರು ಎಂದಲ್ಲ; ಆದರೆ ಆ ಅವಧಿಯಲ್ಲಿ ಅತಿರೇಕಿಗಳಲ್ಲಿ ಹಲವರು ಎಂಜಿನಿಯರಿಂಗ್ ತರಬೇತಿ ಪಡೆದವರು ಎಂದರು.

ದ್ವಂದ್ವಾತ್ಮಕ ಮತ್ತು ನಿಶ್ಚಿತತೆಯ ಆಧಾರಿತ ಚಿಂತನೆ ಗಟ್ಟಿಯಾದ ದೃಷ್ಟಿಕೋನಗಳನ್ನು ಬೆಳೆಸಬಹುದು; ಲಿಬರಲ್ ಆರ್ಟ್ಸ್ ಶಿಕ್ಷಣವು ಸೂಕ್ಷ್ಮತೆ ಮತ್ತು ಸಮಾಜದೊಂದಿಗೆ ಯುಕ್ತಿಯುತವಾಗಿ ತೊಡಗಿಸಿಕೊಳ್ಳುವ ಸಾಮರ್ಥ್ಯವನ್ನು ಬೆಳೆಸುತ್ತದೆ ಎಂದು ಹೇಳಿದರು.

ಯುವಕರ ಉದ್ಯೋಗಾವಕಾಶಗಳ ಕೊರತೆಯಿಂದ ವಲಸೆ ಹೆಚ್ಚುತ್ತಿರುವುದರ ಬಗ್ಗೆ ಕಳವಳ ವ್ಯಕ್ತಪಡಿಸಿದ ಅವರು, ಕೆಲವು ಪ್ರದೇಶಗಳು ಭೂತಪಟ್ಟಣಗಳಾಗಿ ಪರಿಣಮಿಸುತ್ತಿವೆ ಎಂದರು. ಹೋರಾಟಗಳಿಗೆ (ಕೇರಳದಲ್ಲಿ ಹರತಾಳ) ನಿಷೇಧ ಹೇರಿಕೆ ಹಾಗೂ ಹೂಡಿಕೆದಾರರ ರಕ್ಷಣಾ ಕಾಯ್ದೆ ಜಾರಿಗೆ ತರುವಂತಹ ನೀತಿ ಸ್ಥಿರತೆಯ ಕ್ರಮಗಳ ಮೂಲಕ ಹೂಡಿಕೆ ಆಕರ್ಷಿಸಬೇಕು ಎಂದು ಸಲಹೆ ನೀಡಿದರು. ಆರೋಗ್ಯ ಕ್ಷೇತ್ರದ ಬಲವಾದ ಮಾನವ ಸಂಪನ್ಮೂಲವನ್ನು ಬಳಸಿಕೊಂಡು ಸಮಗ್ರ ಆರೋಗ್ಯ ಹಾಗೂ ವೃದ್ಧಾಪ್ಯ ಆರೈಕೆಯಲ್ಲಿ ಕೇರಳವನ್ನು ಮುಂಚೂಣಿಗೆ ತರಬೇಕು ಎಂದರು. ಕಾಂಗ್ರೆಸ್ ನೇತೃತ್ವದ ಯುಡಿಎಫ್‌ಗೆ ಜನಬೆಂಬಲ ಸಾಕಷ್ಟಿದೆ. ಜನಮತ ಸಮೀಕ್ಷೆಗಳು ಮೈತ್ರಿಗೆ ಕನಿಷ್ಠ 85 ಸ್ಥಾನಗಳನ್ನು ಸೂಚಿಸುತ್ತಿವೆ. ಚುನಾವಣಾ ಪ್ರಚಾರದ ವೇಳೆ ಜನರಿಂದ ಬಲವಾದ ಪ್ರತಿಕ್ರಿಯೆ ಸಿಕ್ಕಿದೆ. ಕಳೆದ ಐದು ದಶಕಗಳಿಗೂ ಹೆಚ್ಚು ಕಾಲ ಕೇರಳದಲ್ಲಿ ಸರ್ಕಾರಗಳು ಪರ್ಯಾಯವಾಗಿ ಬದಲಾಗುತ್ತ ಬಂದಿರುವುದರಿಂದ, ಎಡಪಕ್ಷಗಳಿಗೆ ಮೂರನೇ ನಿರಂತರ ಅವಧಿ ಅಪೂರ್ವವಾಗಿದೆ ಎಂದರು.

ಕೇರಳದಲ್ಲಿ ಮುಖ್ಯಮಂತ್ರಿ ಅಭ್ಯರ್ಥಿ ಯಾಗುವಿರಾ ಎಂಬ ಪ್ರಶ್ನೆಗೆ, ಅಂತಹ ನಿರ್ಧಾರ ಕಾಂಗ್ರೆಸ್ ಹೈಕಮಾಂಡ್ ತೆಗೆದುಕೊಳ್ಳುತ್ತದೆ; ನಾನು ಸಂಸತ್ತಿನ ನನ್ನ ಕೆಲಸದ ಮೇಲೆ ಗಮನ ಕೇಂದ್ರೀಕರಿಸಿದ್ದೇನೆ ಎಂದರು.

ಪಕ್ಷದ ನಾಯಕತ್ವದೊಂದಿಗೆ ಉಂಟಾದ ಭಿನ್ನಾಭಿಪ್ರಾಯಗಳ ಬಗ್ಗೆ ಕೇಳಿದಾಗ, ಆಪರೇಶನ್ ಸಿಂದೂರ್ ಕುರಿತು ಹೈಕಮಾಂಡ್ ಜೊತೆ ಭಿನ್ನಾಭಿಪ್ರಾಯವಾಗಿತ್ತು, ಅದು ಈಗ ಪರಿಹಾರಗೊಂಡಿದೆ ಎಂದರು. ಕೇರಳದಲ್ಲಿ ಏಕಮುಖವಾಗಿ ಕಾಣಿಸಿಕೊಳ್ಳುವುದು ಅಗತ್ಯವೆಂದು ಅವರು ಒತ್ತಿಹೇಳಿದರು.

**ಕೇರಳ ಮರುನಾಮಕರಣ:** ಕೇರಳವನ್ನು Keralam ಎಂದು ಮರುನಾಮಕರಣ ಮಾಡುವ ಪ್ರಸ್ತಾಪದ ಕುರಿತು ಪ್ರತಿಕ್ರಿಯಿಸಿದ ಅವರು, ಕಳೆದ 10 ವರ್ಷಗಳಲ್ಲಿ ಆಡಳಿತಾರೂಢ ಮೈತ್ರಿಗೆ ಎಂ ಅಕ್ಷರವನ್ನು ಸೇರಿಸುವುದನ್ನು ಹೊರತುಪಡಿಸಿ ವಿಶೇಷ ಸಾಧನೆಗಳಿಲ್ಲ ಎಂದು ಟೀಕಿಸಿದರು. ಎಐಐಎಂಎಸ್ ಸ್ಥಾಪನೆ, ಕರಾವಳಿ ಕರಕುಸಿತ ಸಮಸ್ಯೆ ಪರಿಹಾರ, ಮೀನುಗಾರರು ಮತ್ತು ರೈತರಿಗೆ ಬೆಂಬಲ ಸೇರಿದಂತೆ ದೀರ್ಘಕಾಲದ ಬೇಡಿಕೆಗಳು ಇನ್ನೂ ಈಡೇರಿಲ್ಲ ಎಂದು ಆರೋಪಿಸಿದರು.

# ಖಮೇನಿ ಹತ್ಯೆಗೆ ಭಾರತ ಮೌನ: ಕೇಂದ್ರ ಸರ್ಕಾರದ ನಡೆಗೆ ಸೋನಿಯಾ ಗಾಂಧಿ ಖಂಡನೆ

**ನವದೆಹಲಿ, ಮಾ.3:** ಇರಾನ್‌ನ ಸರ್ವೋಚ್ಚ ನಾಯಕ ಆಯತೊಲ್ಲಾ ಅಲಿ ಖಮೇನಿ ಅವರ ಹತ್ಯೆಯ ಬಗ್ಗೆ ಮೋದಿ ನೇತೃತ್ವದ ಕೇಂದ್ರ ಸರ್ಕಾರದ ಮೌನವನ್ನು ಕಾಂಗ್ರೆಸ್ ಹಿರಿಯ ನಾಯಕಿ ಸೋನಿಯಾ ಗಾಂಧಿ ಪ್ರಶ್ನಿಸಿದ್ದಾರೆ. ಈ ಮೌನವು ತಟಸ್ಥ ನಿಲುವಲ್ಲ. ಬದಲಿಗೆ, ಅದು ಜವಾಬ್ದಾರಿಯಿಂದ ನುಣುಚಿಕೊಳ್ಳುವ ಕೃತ್ಯ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಸಂದರ್ಭದಲ್ಲಿ ಕೇಂದ್ರ ಸರ್ಕಾರ ಮೌನವಾಗಿರುವುದು ತಟಸ್ಥವಲ್ಲ, ಬದಲಾಗಿ ಪರಾತ್ಯಾಗ ಎಂದು ಟಾಂಗ್ ಕೊಟ್ಟಿದ್ದಾರೆ. ಖಮೇನಿಯವರ ಸಾವಿನ ಬಗ್ಗೆ ಕೇಂದ್ರ ಸರ್ಕಾರ ಯಾವುದೇ ಹೇಳಿಕೆ ನೀಡಿಲ್ಲ. ಆದರೆ, ಮಧ್ಯಪ್ರಾಚ್ಯ ಪ್ರದೇಶದಲ್ಲಿ ಸಂಯಮ ಮತ್ತು ಉದ್ವಿಗ್ನತೆಯನ್ನು ಕಡಿಮೆ ಮಾಡಲು ಕರೆ ನೀಡಿದೆ. ಟೆಹರಾನ್ ಜೊತೆಗಿನ ದೆಹಲಿಯ ಸಂಬಂಧವು ನಾಗರಿಕತೆಯಷ್ಟೇ ಪುರಾತನವಾದದ್ದು. ಕಾರ್ಯತಂತ್ರದ ದೃಷ್ಟಿಯಿಂದ ಮುಖ್ಯವಾದದ್ದು. ಇರಾನ್ ಹಲವಾರು ಸಂದರ್ಭಗಳಲ್ಲಿ ಭಾರತದ ನೆರವಿಗೆ ಧಾವಿಸಿದ್ದನ್ನು ಮೋದಿ ಸರ್ಕಾರ ಮರೆಯಬಾರದು ಎಂದಿದ್ದಾರೆ.

ಆರಂಭದಲ್ಲಿ, ಅಮೆರಿಕ–ಇಸ್ರೇಲ್‌ನ ಬೃಹತ್ ಆಕ್ರಮಣ ನಡೆಸಿದಾಗ ಮೌನಕ್ಕೆ ಜಾರಿದ್ದ ಪ್ರಧಾನಿ (ನರೇಂದ್ರ ಮೋದಿ), ಯುಎಇ ಮೇಲೆ ಇರಾನ್ ನಡೆಸಿದ ಪ್ರತೀಕಾರದ ದಾಳಿಯನ್ನು ಮಾತ್ರವೇ ಖಂಡಿಸುವುದಕ್ಕೆ ಸೀಮಿತಗೊಳಿಸಿಕೊಂಡರು. ಅದಕ್ಕಿಂತ ಮೊದಲು ನಡೆದ ಘಟನೆಗಳ ಬಗ್ಗೆ ಅವರು ಮಾತನಾಡಲಿಲ್ಲ. ನಂತರ, ಅವರು ತೀವ್ರ ಕಳವಳ, ಸಂವಾದ ಹಾಗೂ ರಾಜತಾಂತ್ರಿಕತೆಯ ಬಗ್ಗೆಯಷ್ಟೇ ಮಾತನಾಡಿದರು. ಇಸ್ರೇಲ್ ಮತ್ತು ಅಮೆರಿಕ ಪ್ರಚೋದನೆಯಿಲ್ಲದೆ ಬೃಹತ್ ದಾಳಿಗಳನ್ನು ನಡೆಸುವ ಮೊದಲು ಇದೇ ಸಂವಾದ ಮತ್ತು ರಾಜತಾಂತ್ರಿಕತೆಯ ಪ್ರಕ್ರಿಯೆ ನಡೆಯುತ್ತಿತ್ತು ಎಂದು ಗಾಂಧಿ ಹೇಳಿದ್ದಾರೆ.

ಪ್ರಸ್ತುತ ಸನ್ನಿವೇಶ ಆತಂಕವನ್ನು ಹೆಚ್ಚಿಸಿದೆ. ಹತ್ಯೆಗೆ ಕೇವಲ 48 ಗಂಟೆಗಳ ಮೊದಲು ಪ್ರಧಾನಿಯವರು ಇಸ್ರೇಲ್ ಪ್ರವಾಸದಿಂದ ಹಿಂದಿರುಗಿದ್ದರು. ಅಲ್ಲಿ ಅವರು ಬೆಂಜಮಿನ್ ನೆತನ್ಯಾಹು ಸರ್ಕಾರಕ್ಕೆ ಅಚಲ ಬೆಂಬಲವನ್ನು ಪುನರುಚ್ಚರಿಸಿದ್ದರು. ಗಾಜಾ ಸಂಘರ್ಷದಲ್ಲಿ ಮಹಿಳೆಯರು ಮತ್ತು ಮಕ್ಕಳು ಸೇರಿದಂತೆ ನಾಗರಿಕರ ಸಾವು–ನೋವುಗಳ ಪ್ರಮಾಣವು ಜಾಗತಿಕ ಆಕ್ರೋಶಕ್ಕೆ ಕಾರಣವಾಗಿದ್ದರೂ ಈ ಬೆಂಬಲ ವ್ಯಕ್ತವಾಗಿದ್ದಕ್ಕೆ ಸೋನಿಯಾ ಕಿಡಿಕಾರಿದ್ದಾರೆ.



**ಮೌನವು ತಟಸ್ಥ ನಿಲುವಲ್ಲ, ಜವಾಬ್ದಾರಿಯಿಂದ ನುಣುಚಿಕೊಳ್ಳುವ ಯತ್ನ**

**ಹಲವಾರು ಸಂದರ್ಭದಲ್ಲಿ ದೇಶದ ನೆರವಿಗೆ ಇರಾನ್ ಧಾವಿಸಿದ್ದನ್ನು ಮೋದಿ ಮರೆಯಬಾರದು**

### ಕಾಶ್ಮೀರದ ವಿಚಾರ ನೆನಪಿಸಿದ ಸೋನಿಯಾ ಗಾಂಧಿ

ಕಾಶ್ಮೀರದ ಬಗ್ಗೆ ನೆನೆಪಿಸಿದ ಸೋನಿಯಾ ಗಾಂಧಿ, 1994ರಲ್ಲಿ ಇಸ್ಲಾಮಿಕ್ ಸಹಕಾರ ಸಂಘಟನೆಯ ಕೆಲವು ವಿಭಾಗಗಳು ಕಾಶ್ಮೀರ ವಿಚಾರವಾಗಿ ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಆಯೋಗದಲ್ಲಿ ಭಾರತದ ವಿರುದ್ಧ ನಿರ್ಣಯವನ್ನು ಮಂಡಿಸಲು ಪ್ರಯತ್ನಿಸಿದ್ದವು. ಆಗ, ಆ ಪ್ರಯತ್ನವನ್ನು ತಡೆಯುವಲ್ಲಿ ಇರಾನ್ ನಿರ್ಣಾಯಕ ಪಾತ್ರ ವಹಿಸಿತ್ತು. ಭಾರತದ ಆರ್ಥಿಕ ಹಾದಿಯ ಆ ಸಂಕಷ್ಟದ ಸಮಯದಲ್ಲಿ ಕಾಶ್ಮೀರ ವಿಷಯವು ಅಂತರರಾಷ್ಟ್ರೀಕರಣ ಗೊಳ್ಳುವುದನ್ನು ತಡೆಯಲು ಆ ಮಧ್ಯಸ್ಥಿಕೆ ಸಹಾಯ ಮಾಡಿತ್ತು. ಇರಾನ್ ಪಾಕಿಸ್ತಾನದ ಗಡಿಯ ಸಮೀಪವಿರುವ ಜಹೇದಾನ್‌ನಲ್ಲಿ ಭಾರತದ ರಾಜತಾಂತ್ರಿಕ ಉಪಸ್ಥಿತಿಗೆ ಅವಕಾಶ ನೀಡಿದೆ. ಇದು ಗ್ವಾದರ್ ಬಂದರು ಮತ್ತು ಚೀನಾ–ಪಾಕಿಸ್ತಾನ ಆರ್ಥಿಕ ಕಾರಿಡಾರ್ ಅಭಿವೃದ್ಧಿಗೆ ವ್ಯೂಹಾತ್ಮಕ ಪ್ರತಿಯಾಗಿ ಕಾರ್ಯನಿರ್ವಹಿಸುತ್ತದೆ ಎಂದು ತಿಳಿಸಿದ್ದಾರೆ.

2001ರ ಏಪ್ರಿಲ್‌ನಲ್ಲಿ ಅಂದಿನ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರು ಟೆಹರಾನ್‌ಗೆ ಅಧಿಕೃತ ಭೇಟಿ ನೀಡಿದಾಗ, ಇರಾನ್‌ನೊಂದಿಗೆ ಭಾರತ ಹೊಂದಿರುವ ನಾಗರಿಕ ಮತ್ತು ಸಮಕಾಲೀನ ನಿಕಟ ಸಂಬಂಧಗಳನ್ನು ಆತ್ಮೀಯವಾಗಿ ಪುನರುಚ್ಚರಿಸಿದ್ದರು ಎಂಬುದನ್ನು ಪ್ರಸ್ತುತ ಸರ್ಕಾರ ನೆನೆಪಿಟ್ಟುಕೊಳ್ಳಬೇಕು. ಅಂತಹ ದೀರ್ಘಕಾಲದ ಸಂಬಂಧಗಳ ಬಗ್ಗೆ ಅವರಿಗಿದ್ದ ಗೌರವವು ಪ್ರಸ್ತುತ ಸರ್ಕಾರಕ್ಕೆ ಇಲ್ಲದಂತೆ ತೋರುತ್ತಿದೆ ಎಂದು ಸೋನಿಯಾ ಕಿಡಿಕಾರಿದ್ದಾರೆ. ಭಾರತದ ಸಂಬಂಧವು ಇಸ್ರೇಲ್‌ನೊಂದಿಗೆ ಇತ್ತೀಚಿನ ವರ್ಷಗಳಲ್ಲಿ ರಕ್ಷಣೆ, ಕೃಷಿ ಹಾಗೂ ತಂತ್ರಜ್ಞಾನದ ಕ್ಷೇತ್ರಗಳಲ್ಲಿ ವಿಸ್ತರಿಸಿದೆ. ಭಾರತವು ಟೆಹರಾನ್ ಮತ್ತು ಟೆಲ್‌ಅವಿವ್ ಎರಡರ ಜೊತೆಗೂ ಸಂಬಂಧವನ್ನು ಹೊಂದಿರುವುದರಿಂದಲೇ ಸಂಯಮಕ್ಕಾಗಿ ಒತ್ತಾಯಿಸುವ ರಾಜತಾಂತ್ರಿಕ ಅವಕಾಶವನ್ನು ಹೊಂದಿದೆ. ಆದರೆ, ಅಂತಹ ಅವಕಾಶವು ವಿಶ್ವಾಸಾರ್ಹತೆಯ ಮೇಲೆ ಅವಲಂಬಿತವಾಗಿರುತ್ತದೆ. ವಿಶ್ವಾಸಾರ್ಹತೆಯು ಭಾರತವು ಅನುಕೂಲಕ್ಕೆ ತಕ್ಕಂತೆ ಅಲ್ಲದೆ, ತತ್ವಗಳ ಆಧಾರದ ಮೇಲೆ ಮಾತನಾಡುತ್ತದೆ ಎಂಬ ಅಭಿಪ್ರಾಯದ ಮೇಲೆ ನಿಂತಿದೆ ಎಂದು ವಿವರಿಸಿದ್ದಾರೆ.

### 369 ವಾರ್ಡ್‌ಗಳ ಪೈಕಿ ಮಹಿಳೆಯರಿಗೆ 185 ಸ್ಥಾನ: ಇಂದು ಅಥವಾ ನಾಳೆ ಬಿಡುಗಡೆ

# ಜಿಬಿಎ 5 ಪಾಲಿಕೆಗಳ ಚುನಾವಣಾ ಮೀಸಲಾತಿ ಪಟ್ಟಿ ಸಿದ್ಧ

**ಬೆಂಗಳೂರು, ಮಾ.3:** ಜಿಬಿಎ ವ್ಯಾಪ್ತಿಯ ಐದು ನಗರ ಪಾಲಿಕೆಗಳ ಚುನಾವಣಾ ಮೀಸಲಾತಿ ಪಟ್ಟಿ ಸಿದ್ಧಗೊಂಡಿದ್ದು, ಇಂದು ಸಂಜೆ ಇಲ್ಲವೇ ನಾಳೆ ಅಂತಿಮ ಪಟ್ಟಿ ಬಿಡುಗಡೆಯಾಗಲಿದೆ.5 ನಗರ ಪಾಲಿಕೆಗಳ 369 ವಾರ್ಡ್‌ಗಳ ಮೀಸಲಾತಿ ಪಟ್ಟಿಯನ್ನು ಸಿದ್ಧಪಡಿಸಲಾಗಿದ್ದು ಮಾ.5ರೊಳಗೆ ಬಿಡುಗಡೆ ಮಾಡಿ ನಂತರ ಸುಪ್ರೀಂ ಕೋರ್ಟ್‌ಗೆ ಸಲ್ಲಿಸಲಾಗುವುದು ಎಂದು ನಗರಾಭಿವೃದ್ಧಿ ಇಲಾಖೆ ಮೂಲಗಳು ಖಚಿತಪಡಿಸಿವೆ.

ಈ ಹಿಂದೆ ಬಿಡುಗಡೆ ಮಾಡಲಾಗಿದ್ದ ಕರಡು ಮೀಸಲಾತಿ ಪಟ್ಟಿಗೆ ನೂರಾರು ಆಕ್ಷೇಪಣೆಗಳು ಬಂದಿದ್ದವು. ಹೀಗಾಗಿ ಕೆಲವು ಲೋಪದೋಷಗಳನ್ನು ಸರಿಪಡಿಸಿ ಅಂತಿಮ ಪಟ್ಟಿ ಸಿದ್ಧಪಡಿಸಲಾಗಿದೆ.ಕರಡು ಪಟ್ಟಿಯಲ್ಲಿ ಮಹಿಳೆಯರಿಗೆ ಶೇ.50 ರಷ್ಟು ಮೀಸಲಾತಿ ಕಲ್ಪಿಸಲು ಸಾಧ್ಯವಾಗಿರಲಿಲ್ಲ. ಈ ಕುರಿತಂತೆ ಬಂದಿದ್ದ ಆಕ್ಷೇಪಣೆಗಳನ್ನು ನಿವಾರಣೆ ಮಾಡಿ ಅಂತಿಮ ಪಟ್ಟಿಯಲ್ಲಿ ಮಹಿಳೆಯರಿಗೆ ಆಗಿದ್ದ ಅನ್ಯಾಯವನ್ನು ಸರಿಪಡಿಸಲಾಗಿದೆ ಎಂದು ಮೂಲಗಳು ವಿವರಿಸಿವೆ.

ಐದು ನಗರಪಾಲಿಕೆಗಳ 369 ವಾರ್ಡ್‌ಗಳ ಪೈಕಿ ಮಹಿಳೆಯರಿಗೆ 185 ಸ್ಥಾನಗಳನ್ನು ನೀಡಲಾಗಿದೆ ಎಂದು ತಿಳಿದುಬಂದಿದೆ. ಉಳಿದಂತೆ ಕೆಲವು ಪ್ರದೇಶಗಳಿಗೆ ಈ ಹಿಂದೆ ನಿಗದಿಪಡಿಸಿದ್ದ ಮೀಸಲಾತಿಯನ್ನು ಬದಲು ಮಾಡಲಾಗಿದೆ ಎಂದು ವರದಿಯಾಗಿದೆ.ಕೆಲವು ವಾರ್ಡ್‌ಗಳಲ್ಲಿ ನಮಗೆ ಟಿಕೆಟ್ ಕೈತಪ್ಪುವ ಸಾಧ್ಯತೆ ಇದೆ ಎಂದು ಕೆಲ ಯುವ




ಕಾಂಗ್ರೆಸ್ ಕಾರ್ಯಕರ್ತರು ಪಟ್ಟುಹಿಡಿದ ಪರಿಣಾಮ ಆಡಳಿತ ಪಕ್ಷಕ್ಕೆ ಅನುಕೂಲವಾಗುವಂತೆ ಕೆಲವು ವಾರ್ಡ್‌ಗಳ ಮೀಸಲಾತಿಯನ್ನು ಬದಲಾಯಿಸಲಾಗಿದೆ ಎನ್ನಲಾಗಿದೆ.

ಕಾಮಾಕ್ಷಿಪಾಳ್ಯ ವಾರ್ಡ್‌ನಲ್ಲಿ ಸಾಮಾನ್ಯ ಮೀಸಲಾತಿ ಬದಲಿಗೆ ಬಿಸಿಎಂಗೆ ಅವಕಾಶ ನೀಡಲೇಬೇಕು ಎಂದು ಸಿಎಂ ಸಿದ್ದರಾಮಯ್ಯ ಅವರ ಪುತ್ರ ಮೃತ ರಾಕೇಶ್ ಅವರ ಸ್ನೇಹಿತ ಸುಧಾಕರ್ ಎಂಬುವರು ಪಟ್ಟುಹಿಡಿದಿದ್ದರು, ಅದೇ ರೀತಿ ಯಶವಂತಪುರ ವಿಧಾನಸಭಾ ಕ್ಷೇತ್ರದ ಸಾಮಾನ್ಯ ವಾರ್ಡ್ ಆಗಿದ್ದ ಕೆಂಗಲ್ ವಾರ್ಡ್ ಅನ್ನು ಬಿಸಿಎಂ–2ಗೆ ಮೀಸಲಿಡಬೇಕು. ಆ ವಾರ್ಡ್‌ನಲ್ಲಿ ನನ್ನ ಪುತ್ರನಿಗೆ ಟಿಕೆಟ್ ನೀಡಬೇಕು ಎಂದು ಮಾಜಿ ಸಚಿವ ಎಚ್.ಎಂ.ರೇವಣ್ಣ ಪಟ್ಟುಹಿಡಿದಿದ್ದರು. ಆದರೆ, ಬಿಜೆಪಿಯಿಂದ ಗೆದ್ದು ಕಾಂಗ್ರೆಸ್ ಪಕ್ಷದೊಂದಿಗೆ ಗುರುತಿಸಿಕೊಂಡಿರುವ ಮಾಜಿ ಸಚಿವ ಹಾಗೂ ಶಾಸಕ ಎಸ್.ಟಿ.ಸೋಮಶೇಖರ್ ಅವರು ಯಾವುದೇ ಕಾರಣಕ್ಕೂ ನಮ್ಮ ಕ್ಷೇತ್ರದ ಮೀಸಲಾತಿ ಬದಲಿಸಬಾರದು ಎಂದು ಪಟ್ಟುಹಿಡಿದಿದ್ದರು.

ಅದೇ ರೀತಿ ಇನ್ನುಳಿದ ಕೆಲವು ವಾರ್ಡ್‌ಗಳಲ್ಲೂ ಮೀಸಲು ಬದಲಿಗೆ ಒತ್ತಡಗಳು ಹೆಚ್ಚಾಗಿದ್ದವು. ಈ ಎಲ್ಲ ಒತ್ತಡಗಳನ್ನು ಹೇಗೆ ನಿವಾರಿಸಲಾಗಿದೆ ಎನ್ನುವುದು ಅಂತಿಮ ಪಟ್ಟಿ ಹೊರಬಿದ್ದ ನಂತರವಷ್ಟೇ ಬಹಿರಂಗಗೊಳ್ಳಲಿದೆ.

**ವಾರ್ಡ್ ವಿಂಗಡಣೆಯೂ ಸಿದ್ಧ;** ಅಂತಿಮ ಮೀಸಲಾತಿ ಪಟ್ಟಿ ಜೊತೆಗೆ ವಾರ್ಡ್ ಪುನರ್‌ವಿಂಗಡಣೆ ಪಟ್ಟಿಯೂ ಸಿದ್ಧಗೊಂಡಿದ್ದು ಈ ಎರಡು ಪಟ್ಟಿಗಳನ್ನು ಸರ್ಕಾರ ಸುಪ್ರೀಂಕೋರ್ಟ್‌ಗೆ ಸಲ್ಲಿಕೆ ಮಾಡಲಿದೆ ಎಂದು ತಿಳಿದುಬಂದಿದೆ. ಒಂದು ಕಡೆ ಯಾವುದೇ ಪಕ್ಷಗಳಿಗೂ ಜಿಬಿಎ ಚುನಾವಣೆ ಬೇಕಿಲ್ಲದಿದ್ದರೂ ನ್ಯಾಯಾಲಯದ ಒತ್ತಡದಿಂದಾಗಿ ಚುನಾವಣಾ ಕಾರ್ಯಗಳನ್ನು ಮುಂದುವರಿಸಬೇಕಾಗಿದೆ.ಈ ಕಾನೂನು ಒತ್ತಡಗಳ ನಡುವೆಯೂ ಏನಾದರೂ ಮಾಡಿ ಜಿಬಿಎ ಚುನಾವಣೆಗಳನ್ನು ಮುಂದೂಡಬೇಕು ಎಂಬ ಪ್ರಯತ್ನಗಳು ಮುಂದುವರೆದಿವೆ. ಆದರೆ, ಯಾವುದೇ ಕಾರಣಕ್ಕೂ ನ್ಯಾಯಲಯ ಅದಕ್ಕೆ ಅವಕಾಶ ನೀಡುವುದಿಲ್ಲ ಎಂಬ ಮಾತುಗಳು ಕೇಳಿ ಬರುತ್ತಿದ್ದು ಎಲ್ಲ ಅಂದುಕೊಂಡಂತೆ ನಡೆದರೆ ಜೂನ್ ಇಲ್ಲವೇ ಜುಲೈ ತಿಂಗಳಿನಲ್ಲಿ ಚುನಾವಣೆ ನಡೆಯುವ ಸಾಧ್ಯತೆಗಳಿವೆ ಎಂಬ ಆಶಾಭಾವನೆಯನ್ನು ಕೆಲವರು ವ್ಯಕ್ತಪಡಿಸಿದ್ದಾರೆ.



ಬೆಂಗಳೂರಿನಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಪೊಲೀಸರು ವಶಪಡಿಸಿಕೊಂಡ ವಸ್ತುಗಳನ್ನು ಪರಿಶೀಲಿಸಿದರು.

### 60ಕ್ಕೂ ಹೆಚ್ಚು ದಲಿತ ಸಂಘಟನೆಗಳ ಖಂಡನೆ: ಸರ್ಕಾರದ ವಿರುದ್ಧ ಹೋರಾಡಲು ಬಿಜೆಪಿ ಯೋಜನೆ

## 3 ವರ್ಷಗಳಲ್ಲಿ 39 ಸಾವಿರ ಕೋಟಿ ರೂ. ಪರಿಶಿಷ್ಟರ ಹಣ ಅನ್ಯ ಉದ್ದೇಶಕ್ಕೆ ಬಳಕೆ

**ಬೆಂಗಳೂರು, ಮಾ.3:** ಪರಿಶಿಷ್ಟ ಜಾತಿ, ವರ್ಗಕ್ಕೆ ಬಳಸಬೇಕಾದ ಎಸ್‌ಇಪಿ, ಟಿಎಸ್‌ಪಿ ಹಣದ ವಿಚಾರದಲ್ಲಿ ಸರಕಾರ 3 ವರ್ಷಗಳಲ್ಲಿ 39 ಸಾವಿರ ಕೋಟಿ ರೂಪಾಯಿಯನ್ನು ಅನ್ಯ ಉದ್ದೇಶಕ್ಕೆ ಬಳಸಿದ್ದನ್ನು ಎಲ್ಲ ದಲಿತ ಸಂಘಟನೆಗಳು ಸೇರಿ ಖಂಡಿಸಿದ್ದೇವೆ ಎಂದು ವಿಧಾನಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ತಿಳಿಸಿದ್ದಾರೆ.

60ಕ್ಕೂ ಹೆಚ್ಚು ಸಂಘಟನೆಗಳು ಇಂದಿನ ದುಂಡು ಮೇಜಿನ ಸಭೆಯಲ್ಲಿ ಭಾಗವಹಿಸಿದ್ದರು ಎಂದು ಅವರು ಮಾಧ್ಯಮ ಪ್ರತಿನಿಧಿ ಗಳಿಗೆ ತಿಳಿಸಿದರು. ಪ್ರತಿಯೊಬ್ಬರೂ ಇದನ್ನು ಹೇಳಿದ್ದಾರೆ. ಈ ಸರಕಾರ ದಲಿತರಿಗೆ ದೋಖಾ, ವಂಚನೆ ಮಾಡುತ್ತಿದೆ ಎಂದಿದ್ದಾರೆ. ಆದ್ದರಿಂದ ಈ ಸರಕಾರದ ವಿರುದ್ಧ ದೊಡ್ಡ ಹೋರಾಟ ರೂಪಿಸಬೇಕೆಂಬ ಮಾತನ್ನು ಒಕ್ಕೊರಲಿನಿಂದ ಹೇಳಿದ್ದಾರೆ ಎಂದರು.

ಗ್ಯಾರಂಟಿಗಳಿಗೆ ಒಂದು ವರ್ಷಕ್ಕೆ 52 ಸಾವಿರ ಕೋಟಿ ಬೇಕು. 52 ಸಾವಿರ ಕೋಟಿ ನೀವು ಬಜೆಟ್‌ನಲ್ಲಿ ತೆಗೆದಿಟ್ಟ ಮೇಲೆ ಎಸ್‌ಇಪಿ, ಟಿಎಸ್‌ಪಿ



ಹಣ ಅದಕ್ಕೆ ಯಾಕೆ ಬೇಕು ಎಂದು ಪ್ರಶ್ನಿಸಿದರು. ನೀವು ಒಕ್ಕಲಿಗ ಸಮುದಾಯದ ಹೆಣ್ಮಕ್ಕಳಿಗೆ 2 ಸಾವಿರ ರೂ. ಕೊಡುತ್ತೀರಿ.

ಅದನ್ನು ಒಕ್ಕಲಿಗ ಅಭಿವೃದ್ಧಿ ನಿಗಮದಿಂದ ತೆಗೆದು ಕೊಡುತ್ತಿದ್ದೀರಾ ಎಂದು ಕೇಳಿದರು. ಲಿಂಗಾಯತರಿಗೆ ಕೊಡುವು ದನ್ನು ಅವರ ಅಭಿವೃದ್ಧಿ ನಿಗಮದಿಂದ ತೆಗೆದು ಕೊಡುತ್ತಿದ್ದೀರಾ ಎಂದು ಪ್ರಶ್ನಿಸಿದರು.

ಮುಸ್ಲಿಮರಿಗೆ ಕೊಡುವ ಗ್ಯಾರಂಟಿ ಹಣವನ್ನು ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ತೆಗೆದು ಕೊಡುತ್ತೀರಾ ಎಂದು ಕೇಳಿದರು. ಪರಿಶಿಷ್ಟ ಜಾತಿ, ವರ್ಗಗಳಿಗೆ ಕೊಡುವಾಗ ಅವರ ಹಣ ತೆಗೆದು ಯಾಕೆ ಕೊಡುತ್ತೀರಿ ಎಂಬ ವಿಷಯವನ್ನು ಎಲ್ಲ ಮುಖಂಡರು ಮಾತನಾಡಿದರು ಎಂದರು.

ಎಸ್‌ಇಪಿ, ಟಿಎಸ್‌ಪಿ ಹಣ 42 ಸಾವಿರ ಕೋಟಿ ಎಂದು ಜನರಿಗೆ ತೋರಿಸುತ್ತೀರಿ. ಇದರಲ್ಲಿ 34 ಇಲಾಖೆಗಳಿವೆ. 21 ಸಾವಿರ ಕೋಟಿ ಅವುಗಳಿಗೆ ಕೊಡುತ್ತೀರಿ. ಉಳಿದ 21 ಸಾವಿರ ಕೋಟಿಯಲ್ಲಿ 14 ಸಾವಿರ ಕೋಟಿಯನ್ನು ಗ್ಯಾರಂಟಿಗಳಿಗೆ ಬಳಸಿದರೆ ಉಳಿಯುವುದು 7 ಸಾವಿರ ಕೋಟಿ. ಅಂದರೆ ಪರಿಶಿಷ್ಟ ಜಾತಿ, ಪಂಗಡಕ್ಕೆ ಸಿಗುವ ಎಸ್‌ಇಪಿ, ಟಿಎಸ್‌ಪಿ ಹಣ ಕೇವಲ 7 ಸಾವಿರ ಕೋಟಿ. 42 ಸಾವಿರ ಕೋಟಿ ಎಂದು ಯಾಕೆ ಹೇಳುತ್ತೀರಿ ಎಂದು ಪ್ರಶ್ನೆಯನ್ನು ಮುಂದಿಟ್ಟರು.

**ದುಂಡುಮೇಜಿನ ಸಭೆ:** ಎಸ್‌ಸಿಎಸ್‌ಪಿ–ಟಿಎಸ್‌ಪಿ ಹಣವನ್ನು ಅನ್ಯ ಉದ್ದೇಶಕ್ಕೆ ಬಳಸುವ ಕಾಂಗ್ರೆಸ್ ಸರ್ಕಾರದ ವಿರುದ್ಧ ಇಂದು ಶಾಸಕರ ಭವನದ ಸಭಾಂಗಣದಲ್ಲಿ ಬಜೆಟ್ ಪೂರ್ವ ದುಂಡು ಮೇಜಿನ ಸಭೆಯನ್ನು ಹಮ್ಮಿಕೊಳ್ಳಲಾಗಿತ್ತು.

## ಶಾಸಕ ಮುನಿರತ್ನ ವಿರುದ್ಧ ಹನಿಟ್ರ್ಯಾಪ್ ಪ್ರಕರಣ

### ಸಿಐಡಿಯ ಬಿ-ರಿಪೋರ್ಟ್ ತಿರಸ್ಕಾರ, ಮರು ತನಿಖೆಗೆ ವಿಶೇಷ ನ್ಯಾಯಾಲಯ ಆದೇಶ

**ಬೆಂಗಳೂರು, ಮಾ.3:** ಬಿಜೆಪಿ ಶಾಸಕ ಮುನಿರತ್ನ ವಿರುದ್ಧದ ಹನಿಟ್ರ್ಯಾಪ್ ಪ್ರಕರಣದಲ್ಲಿ ಮಹತ್ವದ ಬೆಳವಣಿಗೆ ಕಂಡುಬಂದಿದೆ. ಕರ್ನಾಟಕ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು ಸಿಐಡಿ ಎಸ್‌ಐಟಿ ಸಲ್ಲಿಸಿದ್ದ ಬಿ ರಿಪೋರ್ಟ್ ತಿರಸ್ಕರಿಸಿ, ಮರು ತನಿಖೆ ನಡೆಸುವಂತೆ ಆದೇಶಿಸಿದೆ.

ಜೆಡಿಎಸ್ ಮುಖಂಡ ಲಗ್ಗೆರೆ ನಾರಾಯಣಸ್ವಾಮಿ ಸಲ್ಲಿಸಿದ್ದ ದೂರಿನ ತನಿಖೆ ಪೂರ್ಣಗೊಳಿಸಿದ ಎಸ್‌ಐಟಿ ಅಧಿಕಾರಿಗಳು ಸಾಕ್ಷ್ಯಾಭಾವ ಉಲ್ಲೇಖಿಸಿ ಬಿ ರಿಪೋರ್ಟ್ ಸಲ್ಲಿಸಿದ್ದರು. ಆದರೆ ದೂರುದಾರರು ಇದನ್ನು ಪ್ರಶ್ನಿಸಿ ಮರು ಅರ್ಜಿ ಸಲ್ಲಿಸಿದ್ದರು. ಅವರ ಪರ ಹಿರಿಯ ವಕೀಲ ಸಿ.ಎಚ್. ಹನುಮಂತರಾಯ ವಾದ ಮಂಡಿಸಿ, ಧ್ವನಿಮುದ್ರಣ ಸೇರಿದಂತೆ ಪ್ರಾಥಮಿಕ ಸಾಕ್ಷ್ಯಾಧಾರಗಳಿದ್ದರೂ ಸಮರ್ಪಕ ತನಿಖೆ ನಡೆದಿಲ್ಲ ಎಂದು ನ್ಯಾಯಾ ಲಯಕ್ಕೆ ತಿಳಿಸಿದರು.

ಶಾಸಕರು, ಸಂಸದರ ವಿರುದ್ಧದ ಪ್ರಕರಣಗಳ ವಿಚಾರಣೆ ನಡೆಸುವ ವಿಶೇಷ ಮ್ಯಾಜಿಸ್ಟ್ರೇಟ್ ನ್ಯಾಯಾಧೀಶ



ಕೆ.ಎನ್. ಶಿವಕುಮಾರ್ ವಾದಗಳನ್ನು ಆಲಿಸಿ, ಬಿ ರಿಪೋರ್ಟ್ ಅನ್ನು ರದ್ದುಗೊಳಿಸಿ, ಪ್ರಕರಣದ ಮುಂದಿನ ತನಿಖೆ ನಡೆಸುವಂತೆ ಸಿಐಡಿ ಎಸ್‌ಐಟಿಗೆ ನಿರ್ದೇಶನ ನೀಡಿದರು. ವಿಚಾರಣೆಯನ್ನು ಮಾರ್ಚ್ 30ಕ್ಕೆ ಮುಂದೂಡಲಾಗಿದೆ.

ಬೆಂಗಳೂರಿನ 2024ರ ಡಿಸೆಂಬರ್‌ನಲ್ಲಿ ನಂದಿನಿ ಲೇಔಟ್ ಠಾಣೆಗೆ ನೀಡಿದ ದೂರಿನಲ್ಲಿ, ತಮ್ಮ ಹಾಗೂ ಪತ್ನಿಯ ವಿರುದ್ಧ ಹನಿಟ್ರ್ಯಾಪ್ ಸಂಚು ರೂಪಿಸಿ ತೇಜೋವಧೆ ಮಾಡಲು ಯತ್ನಿಸಲಾಗಿದೆ ಎಂಬ ಗಂಭೀರ ಆರೋಪಗಳನ್ನು ನಾರಾಯಣಸ್ವಾಮಿ ಮಾಡಿದ್ದರು. ಬಳಿಕ ಪ್ರಕರಣವನ್ನು ಸಿಐಡಿ ಎಸ್‌ಐಟಿಗೆ ವರ್ಗಾವಣೆ ಮಾಡಲಾಗಿತ್ತು.

### ತಮ್ಮದೇ ಪಕ್ಷದ ಶಾಸಕರ ಮೇಲೆ ನಂಬಿಕೆಯಿಲ್ಲ

## ಗುಪ್ತಚರ ವಿಭಾಗದ ಮೂಲಕ ಮಾಹಿತಿ ಸಂಗ್ರಹ: ಸಿಎಂ ವಿರುದ್ಧ ಸಂಶಯ ವ್ಯಕ್ತಪಡಿಸಿದ ಎಂಎಲ್‌ಸಿ ಸಿ.ಟಿ.ರವಿ

**ಬೆಂಗಳೂರು, ಮಾ.3:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ತಮ್ಮದೇ ಪಕ್ಷದ ಶಾಸಕರ ಮೇಲೆ ನಂಬಿಕೆ ಇಲ್ಲದ ಕಾರಣ ಅವರ ಚಲನವಲನಗಳ ಬಗ್ಗೆ ಗುಪ್ತಚರ ವಿಭಾಗದ ಮೂಲಕ ಮಾಹಿತಿ ಕಲೆ ಹಾಕಲು ಮುಂದಾಗಿರಬಹುದೆಂದು ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಸಂಶಯ ವ್ಯಕ್ತಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾರಿಗೆ ಸಚಿವರು ಮತ್ತು ಶಾಸಕರ ಮೇಲೆ ನಂಬಿಕೆ ಇರುವುದಿಲ್ಲವೋ ಅಂಥವರ ಮೇಲೆ ಅವರ ಚಟುವಟಿಕೆಗಳ ಕುರಿತು ಗುಪ್ತಚರ ಇಲ್ಲವೇ ತಮದೇ ಆಂತರಿಕ ಮೂಲಗಳಿಂದ ಮಾಹಿತಿ ಕಲೆ ಹಾಕುತ್ತಾರೆ. ಈಗ ಮುಖ್ಯಮಂತ್ರಿಗಳ ಪರಿಸ್ಥಿತಿಯೂ ಅದೇ ಆಗಿರಬಹುದು.ಸರ್ಕಾರ ಉಳಿಸಿಕೊಳ್ಳಲು ಅಥವಾ ಕುರ್ಚಿ ಉಳಿಸಿಕೊಳ್ಳಲು ಗೂಢಚಾರಿಕೆ ಅಥವಾ ದೂರವಾಣಿ ಕದ್ದಾಲಿಕೆ ಸಿಎಂಗೆ ಅನಿವಾರ್ಯ ಇರಬಹುದು. ಆದರೆ ಜನ ನಿಮ್ಮ ಸರ್ಕಾರದ ಬಗ್ಗೆ ಏನು ಹೇಳುತ್ತಿದ್ದಾರೆ ಎಂಬುದನ್ನು ಸಿಎಂ ತಿಳಿದುಕೊಳ್ಳಲಿ ಎಂದರು.



ಜನ ಈ ಸರ್ಕಾರದ ಮೇಲೆ ಬೇಸರಗೊಂಡಿದ್ದಾರೆ. ಜನಾಭಿಪ್ರಾಯ ತಿಳಿಯಲು ಗೂಢಚಾರಿಕೆ ಅಥವಾ ಫೋನ್ ಟ್ಯಾಪಿಂಗ್ ಅಗತ್ಯ ಇಲ್ಲ. ಜನ ಏನು ಹೇಳ್ತಾರೆ ಅಂತ ಕಿವಿ ತೆರೆದು ಕೇಳಿಸಿಕೊಂಡರೆ ಸಾಕು ಎಚ್.ಡಿ.ಕುಮಾರಸ್ವಾಮಿ ಮತ್ತು ಅಶೋಕ್ ಫೋನ್ ಟ್ಯಾಪಿಂಗ್ ಆಗುತ್ತಿದೆ ಎಂದಿದ್ದಾರೆ. ಅವರಿಗೆ ಅದರ ಬಗ್ಗೆ ಮಾಹಿತಿ ಇರಬಹುದು. ಆದರೆ ಸಿಎಂಗೆ ಜನರ ನಾಡಿಮಿಡಿತ ತಿಳಿದಿರಬೇಕು ಎಂದು ತಿರುಗೇಟು ನೀಡಿದರು.

ಇರಾನ್ ಯುದ್ಧದ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ನಡೆಗೆ ಪ್ರತಿಪಕ್ಷಗಳು ಟೀಕೆ ಮಾಡುತ್ತಿರುವ ಕುರಿತ ಮಾತನಾಡಿದ ಸಿ.ಟಿ.ರವಿ, ಭಾರತ ಅಲಿಪ್ತ ನೀತಿಗೆ ತಿಲಾಂಜಲಿ ಹಾಡಿಲ್ಲ. ರಾಷ್ಟ್ರದ ಹಿತಾಸಕ್ತಿಗೆ ಅನುಗುಣವಾಗಿ ಕಾಲಕಾಲಕ್ಕೆ ನಿರ್ಧಾರ ತಗೊಳ್ಳುತ್ತದೆ. ಕಾಂಗ್ರೆಸ್‌ಗೆ ಭಾರತದ ಹಿತಾಸಕ್ತಿಗಿಂತ ಅದರ ಹಿತಾಸಕ್ತಿ ಮುಖ್ಯವಾಗಿದೆ ಎಂದು ಟೀಕಿಸಿದರು.

ರಾಜಕೀಯ ದೃಷ್ಟಿ, ರಾಜಕೀಯ ಲಾಭ ಇಟ್ಟುಕೊಂಡು ಕಾಂಗ್ರೆಸ್ ಮಾತಾಡುತ್ತದೆ. ಅದಕ್ಕೆ ತನ್ನ ವೋಟ್ ಬ್ಯಾಂಕ್ ಮುಖ್ಯ. ಬಿಜೆಪಿ ಭಾರತದ ಪರ ನಿಲುವು ತೆಗೆದುಕೊಳ್ಳುವ ಪಕ್ಷ ಎಂದು ಸಮರ್ಥಿಸಿಕೊಂಡರು. ಯುದ್ಧಪೀಡಿತ ದೇಶದಿಂದ ಕನ್ನಡಿಗರನ್ನು ಕರೆತರುವ ವಿಚಾರಕ್ಕೆ ಪ್ರತಿಕ್ರಿಯಿಸುತ್ತಾ, ಪರಿಸ್ಥಿತಿ ತಿಳಿಗೊಳ್ಳುತ್ತಿರುವಂತೆಯೇ ಕನ್ನಡಿಗರನ್ನು ಭಾರತೀಯರನ್ನು ವಾಪಸ್ ಕರೆತರುವ ಕೆಲಸ ಆಗುತ್ತಿರುತ್ತದೆ. ನಿನ್ನೆ ಕೆಲವರು ಬಂದಿದ್ದಾರೆ, ಸುರಕ್ಷಿತವಾಗಿ ಬಂದಿದ್ದಾರೆ. ಯಾರಿಗೂ ಆತಂಕ ಬೇಡ, ಎಲ್ಲರನ್ನೂ ಸುರಕ್ಷಿತವಾಗಿ ಕರೆತರುವ ಕೆಲಸ ಕೇಂದ್ರ ಮಾಡುತ್ತದೆ ಎಂದು ಭರವಸೆ ನೀಡಿದರು.

ಮಾರ್ಚ್ 6 ರಿಂದ ಗುತ್ತಿಗೆದಾರರ ಮುಷ್ಕರದ ಬಗ್ಗೆ ಮಾತನಾಡಿದ ಅವರು, ಸರ್ಕಾರದ ಬೊಕ್ಕಸ ಖಾಲಿಯಾಗಿದೆ. ಬೊಕ್ಕಸದ ಹಣ ಎಲ್ಲಿ ಹೋಯಿತು? ದುರ್ಬಳಕೆ ಆಯ್ತಾ? ಸಿಎಂ ಸಿದ್ದರಾಮಯ್ಯ ಈಗ ಚಾಣಕ್ಯ ನೀತಿ ಅನುಸರಿಸುತ್ತಿಲ್ಲ, ಚಾರ್ವಾಕ ನೀತಿ ಅನುಸರಿಸುತ್ತಿದ್ದಾರೆ. ಬೊಕ್ಕಸ ಖಾಲಿ, ಸಾಲ ಜಾಸ್ತಿ, ಸಾಲ ಮಾಡಿದ ಹಣ ಎಲ್ಲಿ ಹೋಯಿತು? ಸಾಲದ ಹಣ ದುರ್ಬಳಕೆ ಆಯಿತೇ ಎಂದು ಪ್ರಶ್ನಿಸಿದರು.

## ಡಿಸಿಎಂ ಸೂಚನೆಯಂತೆ ರಸ್ತೆಬದಿ, ರಸ್ತೆ ವಿಭಜಕ, ಗಿಡಗಳ ನಿರ್ವಹಣೆಗೆ ಆದೇಶ

**ಬೆಂಗಳೂರು, ಮಾ.2:** ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆಗಿರುವ ಡಿಸಿಎಂ ಡಿ.ಕೆ.ಶಿವಕುಮಾರ್ ಅವರ ಸೂಚನೆ ಹಿನ್ನೆಲೆಯಲ್ಲಿ ರಸ್ತೆಬದಿ ಹಾಗೂ ರಸ್ತೆ ವಿಭಜಕಗಳಲ್ಲಿ ನೆಡಲಾಗಿರುವ ಗಿಡಗಳನ್ನು ಸೂಕ್ತ ನಿರ್ವಹಣೆಗೆ ನಗರಾಭಿವೃದ್ಧಿ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿಗಳು ಆದೇಶ ಹೊರಡಿಸಿದ್ದಾರೆ.



ಬೆಂಗಳೂರಿನ ಸೌಂದರ್ಯ ಹೆಚ್ಚಿಸಲು ನೆಡಲಾಗಿರುವ ಅಲಂಕಾರಿಕ ಗಿಡಗಳು ಸರಿಯಾಗಿ ಪೋಷಣೆಯಾಗದೇ ಒಣಗಿದ್ದು, ಬಹಳ ಕೆಟ್ಟದಾಗಿ ಕಾಣುತ್ತಿವೆ. ಹೀಗಾಗಿ ಗ್ರೇಟರ್ ಬೆಂಗಳೂರು ವ್ಯಾಪ್ತಿಯ ಎಲ್ಲಾ ರಸ್ತೆಬದಿ ಹಾಗೂ ರಸ್ತೆ ವಿಭಜಕಗಳಲ್ಲಿನ ಗಿಡಗಳನ್ನು ಸರಿಯಾಗಿ ಪೋಷಣೆ ಮಾಡಬೇಕು, ಒಣಗಿ ಬಿದ್ದಿರುವ ಕಸವನ್ನು ತೆರವುಗೊಳಿಸಬೇಕು. ಈ ಪ್ರಕ್ರಿಯೆಯನ್ನು ನಿರಂತರ ಪರಿಶೀಲಿಸಬೇಕು ಎಂದು ಶಿವಕುಮಾರ್ ಅವರು ಇತ್ತೀಚೆಗೆ ಸೂಚನೆ ನೀಡಿದ್ದರು. ಈ ಹಿನ್ನೆಲೆಯಲ್ಲಿ ನಗರಾಭಿವೃದ್ಧಿ ಇಲಾಖೆಯು02.03.2026 ರಂದು ಆದೇಶ ಹೊರಡಿಸಿದ್ದು, ರಸ್ತೆಬದಿ ಹಾಗೂ ರಸ್ತೆವಿಭಜಕಗಳಲ್ಲಿ ಬೆಳಸಲಾಗಿರುವ ಅಲಂಕಾರಿಕ ಗಿಡಗಳನ್ನು ಸರಿಯಾಗಿ ಪೋಷಣೆ ಮಾಡಿ, ಅವಕಾಶವಿರುವ ಕಡೆ ಹೊಸದಾಗಿ ಅಲಂಕಾರಿಕ ಗಿಡ, ಮರಗಳನ್ನು ಬೆಳೆಸಬೇಕು, ಈಗಾಗಲೇ ಒಣಗಿ ಬಿದ್ದಿರುವ ಕಸವನ್ನು ತೆಗೆದು ಸ್ವಚ್ಛಗೊಳಿಸಬೇಕು" ಎಂದು ಆದೇಶದಲ್ಲಿ ತಿಳಿಸಲಾಗಿದೆ.

ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯ ಎಲ್ಲಾ ಪಾಲಿಕೆಗಳಲ್ಲಿ ಸೂಕ್ತ ಕ್ರಮ ಕೈಗೊಂಡಿರುವ ಬಗ್ಗೆ ಮುಖ್ಯ ಆಯುಕ್ತರು, ಜಿಬಿಎ ಹಾಗೂ ಅವರ ಮುಖ್ಯ ಕಾರ್ಯದರ್ಶಿಗಳು ನಿಯಮಿತವಾಗಿ ಸಭೆ ನಡೆಸಿ ಪರಿಶೀಲನೆ ಮಾಡಬೇಕು ಎಂದು ಆದೇಶದಲ್ಲಿ ಸೂಚಿಸಲಾಗಿದೆ.

### ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸಲು ಹೆಣಗಾಡುತ್ತಿರುವ ಸರ್ಕಾರದಿಂದ ಆದಾಯ ಸರಿದೂಗಿಸಲು ಹೆಜ್ಜೆ

# ಬಜೆಟ್‌ನಲ್ಲಿ ಇಂಧನ ಮಾರಾಟ ಮೇಲಿನ ಸೆಸ್ ಹೆಚ್ಚಳ?

**ಬೆಂಗಳೂರು, ಮಾ.3:** ಉಳ್ಳವರು ಗ್ಯಾರಂಟಿಗಳನ್ನು ಬಡವರಿಗೆ ಬಿಟ್ಟುಕೊಡುವಂತೆ ಕರೆ ನೀಡಲು ಮುಂದಾಗಿರುವ ರಾಜ್ಯ ಸರ್ಕಾರ ಇದೀಗ ಬಜೆಟ್‌ನಲ್ಲಿ ಇಂಧನದ ಮಾರಾಟ ಮೇಲಿನ ಸೆಸ್ ಹೆಚ್ಚಳ ಮಾಡಲು ಮುಂದಾಗಿದೆ.

ಮಹತ್ವಕಾಂಕ್ಷೆಯ 5 ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸಲು ಹೆಣಗಾಡುತ್ತಿರುವ ರಾಜ್ಯ ಸರ್ಕಾರ, ಬೇರೆ ಬೇರೆ ಮೂಲಗಳಿಂದ ಆದಾಯ ಸರಿದೂಗಿಸಲು ಭಾರೀ ಸರ್ಕಸ್ ನಡೆಸುತ್ತಿದೆ. ಹೀಗಾಗಿಯೇ ಆರ್ಥಿಕವಾಗಿ ಸಿರಿವಂತರು ಗ್ಯಾರಂಟಿ ಯೋಜನೆಗಳನ್ನು ಪಡೆಯದೆ ಉದಾರತೆ ತೋರಿ ಎಂದು ಸಚಿವರು ಪ್ರತಿನಿತ್ಯ ಹೇಳುತ್ತಿದ್ದಾರೆ.

ಈ ಹಿಂದೆ ಪ್ರಧಾನಿ ನರೇಂದ್ರ ಮೋದಿಯವರು ಬಡತನ ರೇಖೆಗಿಂತ ಕೆಳಗಿರುವವರಿಗೆ (ಬಿಪಿಎಲ್) ಉಜ್ವಲ ಯೋಜನೆಯನ್ನು ಜಾರಿ ಮಾಡಿದ್ದರು. ಪರಿಣಾಮ ಲಕ್ಷಾಂತರ ಜನರು ಮೋದಿ ಕರೆಗೆ ಓಗೊಟ್ಟು ಯೋಜನೆಯನ್ನು ತ್ಯಜಿಸಿದ್ದರು. ಈಗ ಸಿ.ಎಂ ಸಿದ್ದರಾಮಯ್ಯ ಕೂಡ ಇದೇ ತಂತ್ರವನ್ನು ಅನುಕರಣೆ ಮಾಡಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಶುಕ್ರವಾರ ತಮ ದಾಖಲೆಯ 17ನೇ ಬಜೆಟ್ ಮಂಡಿಸಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪೆಟ್ರೋಲ್–ಡೀಸೆಲ್ ಮಾರಾಟದ ಮೇಲಿನ ಸೆಸ್ ಮೇಲ್ತೆರಿಗೆ ಹೆಚ್ಚಳ ಮಾಡಲಿದ್ದಾರೆ. ಅಂದರೆ ಲೀಟರ್ ಡೀಸೆಲ್ ಮತ್ತು ಪೆಟ್ರೋಲ್ ಮೇಲಿನ ಮಾರಾಟದಲ್ಲಿ 2 ರೂ. ಏರಿಕೆ ಮಾಡಲು ಸರ್ಕಾರ ತೀರ್ಮಾನಿಸಿದೆ.

ಈ ಹಿಂದೆ ರಾಜ್ಯ ಸರ್ಕಾರ 2025ರ ಏಪ್ರಿಲ್ 2ರಂದು ಡೀಸೆಲ್ ಮತ್ತು ಪೆಟ್ರೋಲ್ ಮೇಲಿನ ದರವನ್ನು ಕ್ರಮವಾಗಿ 2 ರೂಪಾಯಿಗೆ ಏರಿಕೆ ಮಾಡಿತ್ತು. ಕರ್ನಾಟಕದಲ್ಲಿ ಪ್ರಸ್ತುತ ಡೀಸೆಲ್ ಮೇಲಿನ ಮಾರಾಟ ತೆರಿಗೆ 21.77 ರೂ, ಇದ್ದರೆ ಅದೇ ರೀತಿ ಪೆಟ್ರೋಲ್ ಮೇಲಿನ ಮಾರಾಟ ತೆರಿಗೆಯು ರೂ. 18 ಇದೆ. ಹೊಸದಾಗಿ ಮಾರಾಟ ತೆರಿಗೆ ಹೆಚ್ಚಳ ಮಾಡಿದರೆ ವಾಹನ ಸವಾರರ ಜೇಬಿಗೆ ಕತ್ತರಿ ಬೀಳುವುದು ಗ್ಯಾರಂಟಿ.

ಇಲಾಖೆಗಳಿಗೆ ನೀಡಿದ್ದ ರಾಜಸ್ವ ಸಂಗ್ರಹಣೆಯ ಗುರಿ ಈಗಾಗಲೇ ಅತಿಯಾಗಿದೆ. ಹೀಗಾಗಿ ಹೊಸ ಆದಾಯದ ಮೂಲಗಳನ್ನು ಅರಸುವುದು ಅನಿವಾರ್ಯವಾಗಿದ್ದು, ಪ್ರತಿ ಲೀಟರ್ ಪೆಟ್ರೋಲ್ ಹಾಗೂ ಡೀಸೆಲ್ ಮೇಲೆ 1 ರೂ. ಹೆಚ್ಚುವರಿ ಮಾರಾಟ ತೆರಿಗೆ ವಿಧಿಸುವುದರಿಂದ ತಕ್ಕಮಟ್ಟಿಗೆ ಸಂಪನ್ಮೂಲ ಕ್ರೋಡೀಕರಣಕ್ಕೆ ವೇಗ ನೀಡಬಹುದೆಂದು ಚರ್ಚಿಸಲಾಗುತ್ತಿದೆ.




**ಆದಾಯ ಖೋತಾ:** ಸರಕಾರದ ಸ್ವಂತ ತೆರಿಗೆ ಮೂಲಗಳಿಂದ ವಾರ್ಷಿಕ ಗುರಿಯಷ್ಟು ಆದಾಯ ಸಂಗ್ರಹವಾಗುವುದು ಕಷ್ಟಸಾಧ್ಯವೆನಿಸಿದೆ. ಗುರಿ ತಲುಪಲು ಮಾರ್ಚ್ ಅಂತ್ಯದೊಳಗೆ 48,306 ಕೋಟಿ ರೂ. ಸಂಗ್ರಹವಾಗಬೇಕಿದ್ದು, ಅಬಕಾರಿ ಇಲಾಖೆ ಹೊರತುಪಡಿಸಿ ಉಳಿದ ಮೂರು ಮೂಲಗಳಿಂದ ವಾರ್ಷಿಕ ಗುರಿ ಸಾಧನೆ ಅನುಮಾನವೆನಿಸಿದೆ.

ವಾಣಿಜ್ಯ ತೆರಿಗೆ, ಮುದ್ರಾಂಕ ಮತ್ತು ನೋಂದಣಿ, ಮೋಟಾರು ವಾಹನ ತೆರಿಗೆಯಿಂದ ಸುಮಾರು 15,000 ಕೋಟಿ ರೂ.ನಷ್ಟು ಆದಾಯ ಕೈತಪ್ಪುವ ಲಕ್ಷಣ ಕಾಣುತ್ತಿದೆ. ಇದು ಸರಕಾರದ ವೆಚ್ಚ, ಬಜೆಟ್ ಗಾತ್ರದ ಮೇಲೆ ಪರಿಣಾಮ ಬೀರಲಿದೆ. ಪ್ರಸಕ್ತ ಸಾಲಿನಲ್ಲಿ ಬಂಡವಾಳ ವೆಚ್ಚಕ್ಕೆ 83,200 ಕೋಟಿ ರೂ. ವಿನಿಯೋಗಿಸುವುದಾಗಿ ಸರಕಾರ ಹೇಳುತ್ತಿದ್ದರೂ ತೆರಿಗೆ ಆದಾಯ ತಗ್ಗಿದರೆ ಅಭಿವೃದ್ಧಿ ಯೋಜನೆಗಳಿಗೆ ಬಳಕೆಯಾಗುವ ಅನುದಾನ ಕಡಿತವಾಗಲಿದೆ. ವಾಣಿಜ್ಯ ತೆರಿಗೆ ಮೂಲದಿಂದ ಜನವರಿ ಅಂತ್ಯದವರೆಗೆ 90,229 ಕೋಟಿ ರೂ. ಸಂಗ್ರಹವಾಗಿದೆ. ಜಿಎಸ್‌ಟಿಯಿಂದ 66,605 ಕೋಟಿ ರೂ., ಮಾರಾಟ ತೆರಿಗೆಯಿಂದ 22,387 ಕೋಟಿ ರೂ. ಹಾಗೂ ವೃತ್ತಿ ತೆರಿಗೆಯಿಂದ 1,236 ಕೋಟಿ ರೂ. ಬೊಕ್ಕಸಕ್ಕೆ ಬಂದಿದೆ. ಮುದ್ರಾಂಕ ಮತ್ತು ನೋಂದಣಿ ಶುಲ್ಕ ಸೇರಿದಂತೆ ಇತರ ಶುಲ್ಕ ರೂಪದಲ್ಲಿ 20,500 ಕೋಟಿ ರೂ. ಆದಾಯ ಗಳಿಸಿದೆ.

ಬಾಕಿ ಎರಡು ತಿಂಗಳಲ್ಲಿ 7,500 ಕೋಟಿ ರೂ. ಸಂಗ್ರಹ ಅಸಾಧ್ಯವೆನಿಸಿದ್ದು, 3,000 ಕೋಟಿ ರೂ.ನಷ್ಟು ಆದಾಯ ಕೈತಪ್ಪುವ ಸಾಧ್ಯತೆ ಇದೆ. ಮೋಟಾರು ವಾಹನ ತೆರಿಗೆ ಸೇರಿದಂತೆ ಇತರೆ ಮೂಲಗಳಿಂದ ಮಾರ್ಚ್ ಅಂತ್ಯಕ್ಕೆ 15,000 ಕೋಟಿ ರೂ. ಸಂಗ್ರಹ ಗುರಿ ನೀಡಲಾಗಿದೆ. ಆದರೆ ಜನವರಿವರೆಗೆ ಕೇವಲ 10,594 ಕೋಟಿ ರೂ. ಸಂಗ್ರಹವಾಗಿದೆ. ಇನ್ನು ಎರಡು ತಿಂಗಳಲ್ಲಿ4,406 ಕೋಟಿ ರೂ. ಗಳಿಸಬೇಕಿದೆ.ಮಾರ್ಚ್ ಅಂತ್ಯಕ್ಕೆ 15,000 ಕೋಟಿ ರೂ. ಆದಾಯ ಸಂಗ್ರಹ ಸವಾಲಾಗಿದ್ದು, 13,000 ಕೋಟಿ ರೂ. ಆದಾಯ ಬರುವ ನಿರೀಕ್ಷೆ ಇದೆ. ವಾರ್ಷಿಕ ಗುರಿಯಲ್ಲಿ 2000 ಕೋಟಿ ರೂ. ನಷ್ಟು ಕೈತಪ್ಪುವ ಸಂಭವವಿದೆ ಎಂದು ಇಲಾಖೆ ಮೂಲಗಳು ಹೇಳಿವೆ.

## ಇಂದು ಬೆಂಗಳೂರು ಪ್ರೆಸ್‌ಕ್ಲಬ್ ಆವರಣದಲ್ಲಿ ಥಟ್ ಅಂತ ಹೇಳಿ ಕಾರ್ಯಕ್ರಮ ಚಿತ್ರೀಕರಣ

**ಬೆಂಗಳೂರು, ಮಾ.2:** ನಾಡಿನ ಮನೆಮಾತಾಗಿರುವ, ಐದು ಸಾವಿರಕ್ಕೂ ಅಧಿಕ ಸಂಚಿಕೆಗಳ ಪ್ರಸಾರ ಕಂಡು ಗಿನ್ನೆಸ್ ಸೇರಿ ಹಲವು ದಾಖಲೆಗಳನ್ನು ನಿರ್ಮಿಸಿರುವ ದೂರದರ್ಶನ ಚಂದನವಾಹಿನಿಯ 'ಥಟ್ ಅಂತ ಹೇಳಿ' ರಸಪ್ರಶ್ನೆ ಕಾರ್ಯಕ್ರಮದ ಐದು ಸಂಚಿಕೆಗಳು ಮಾರ್ಚ್ 4




ರ ಬುಧವಾರ ಬೆಳಗ್ಗೆ 10.30 ರಿಂದ ಪ್ರೆಸ್ ಕ್ಲಬ್ ಆಫ್ ಬೆಂಗಳೂರು ಇಲ್ಲಿ ಚಿತ್ರೀಕರಣವಾಗಲಿದೆ.

ಕಾರ್ಯಕ್ರಮವನ್ನು ಯಶಸ್ವಿಯಾಗಿ ಮುನ್ನಡೆಸುತ್ತಿರುವ ಡಾ. ನಾ. ಸೋಮೇಶ್ವರ್ ಅವರು ಪ್ರೆಸ್‌ಕ್ಲಬ್‌ನಲ್ಲಿ ವಿಶೇಷ ಸಂಚಿಕೆಗಳ ನಿರೂಪಣೆ ಮಾಡಲಿದ್ದಾರೆ. ಪ್ರೆಸ್ ಕ್ಲಬ್‌ನ ಸದಸ್ಯರು ಹಾಗೂ ಪತ್ರಕರ್ತರು ಈ ವಿಶೇಷ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕೆಂದು ಕೋರಲಾಗಿದೆ.

## ಗಾರ್ಡನ್‌ಸಿಟಿ ವಿಶ್ವವಿದ್ಯಾಲಯದ 35ನೇ ವರ್ಷದ ಕೋರಲ್ ವಾರ್ಷಿಕೋತ್ಸವಕ್ಕೆ ಅದ್ದೂರಿ ಚಾಲನೆ

ಬೆಂಗಳೂರು, ಫೆಬ್ರವರಿ 26: ಗಾರ್ಡನ್‌ಸಿಟಿ ವಿಶ್ವವಿದ್ಯಾಲಯ ತನ್ನ ಸ್ಥಾಪನೆಯ 35ನೇ ವರ್ಷದ ಮಹತ್ವದ ಮೈಲಿಗಲ್ಲನ್ನು ಭವ್ಯವಾಗಿ ಆಚರಿಸುವ ಸಲುವಾಗಿ ಗುರುವಾರ ಕೋರಲ್ ವಾರ್ಷಿಕೋತ್ಸವ ಸಂಭ್ರಮಕ್ಕೆ ಅದ್ದೂರಿ ಚಾಲನೆ ನೀಡಿತು. 1992ರ ಫೆ.27ರಂದು ಆರಂಭವಾದ ಗಾರ್ಡನ್‌ಸಿಟಿ ಶಿಕ್ಷಣ ಸಂಸ್ಥೆ, ಕಳೆದ ಮೂರು ದಶಕಗಳಿಗೂ ಹೆಚ್ಚು ಕಾಲ ಶಿಕ್ಷಣ ಕ್ಷೇತ್ರಕ್ಕೆ ನೀಡಿರುವ ಕೊಡುಗೆಯನ್ನು ಸ್ಮರಿಸಲು `IGNITE 35: A Year of Ideas' ಎಂಬ ಶೀರ್ಷಿಕೆಯಲ್ಲಿ ಕೋರಲ್ ಜ್ಯುಬಿಲಿ ಸಂಭ್ರಮಾಚರಣೆಯನ್ನು ಆಚರಿಸುತ್ತಿದೆ.

35ನೇ ವರ್ಷದ ಸಂಭ್ರಮಾಚರಣೆಯ ಸಲುವಾಗಿ 35,000 ಸಸಿಗಳನ್ನು ನೆಡುವ ಅಭಿಯಾನದ




ಜತೆಗೆ ವಿವಿಧ ಕ್ಷೇತ್ರಗಳ 35 ಗಣ್ಯರನ್ನು ಸನ್ಮಾನಿಸುವ ಕಾರ್ಯಕ್ರಮಗಳು ಸೇರಿದಂತೆ ವರ್ಷ ಪೂರ್ತಿ ನಡೆಯಲಿರುವ ಅನೇಕ ಸಾಮಾಜಿಕ ಮತ್ತು ಶೈಕ್ಷಣಿ ಕಚಟುವಟಿಕೆಗಳ ಕುರಿತು ಮಾಹಿತಿ ನೀಡಿದರು.

`IGNITE 35: A Year of Ideas' ಎಂಬ ಘೋಷ ವಾಕ್ಯವು ವಿಶ್ವ ವಿದ್ಯಾಲಯದ ಜ್ಞಾನ, ನವೀನತೆ ಮತ್ತು ಸಾಮಾಜಿಕ ಪರಿವರ್ತನೆಯತ್ತ ಇರುವ ವಿಶ್ವ ವಿದ್ಯಾಲಯದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ. 35 ವಿಶೇಷ ಉಪನ್ಯಾಸಗಳ ಸರಣಿಯ ಮೊದಲ ಕಾರ್ಯಕ್ರಮವಾಗಿ ಗೋಪಿನಾಥ್ಮ ತುಕಾಡ್ ಅವರು `Stay Curious, Stay Ahead: The Secret Behind Every Breakthrough' ಎಂಬ ವಿಷಯ ಕುರಿತು ಪ್ರೇರಣಾ ದಾಯಕ ಉಪನ್ಯಾಸ ನೀಡಿದರು. ತಮ್ಮ ಜಾದೂ ಪ್ರದರ್ಶನದ ಆರಂಭದ ದಿನಗಳನ್ನು ಮೆಲುಕು ಹಾಕಿ, ಮನಮೋಹಕ ಜಾದೂ ಪ್ರದರ್ಶನಗಳ ಮೂಲಕ ವಿದ್ಯಾರ್ಥಿಗಳಿಗೆ ಆತ್ಮವಿಶ್ವಾಸ, ವಿಫಲತೆಯಿಂದ ಕಲಿಯುವ ಮನೋಭಾವ ಮತ್ತು ನಿರಂತರ ಕುತೂಹಲದ ಮಹತ್ವವನ್ನುತಿಳಿಸಿದರು.

`IGNITE 35' ಮುಖಾಂತರ ಗಾರ್ಡನ್‌ಸಿಟಿ ವಿಶ್ವವಿದ್ಯಾಲಯವು ತನ್ನ ಪರಂಪರೆಯನ್ನು ಮುಂದುವರೆಸುವುದರ ಜೊತೆಗೆ, ಭವಿಷ್ಯದಲ್ಲಿ ಹೊಣೆಗಾರಿಕೆಯುಳ್ಳ ಜಾಗತಿಕ ನಾಗರಿಕರನ್ನು ರೂಪಿಸುವ ತನ್ನ ಬದ್ಧತೆಯನ್ನು ಮತ್ತೊಮ್ಮೆ ದೃಢಪಡಿಸಿದೆ.

### ಕ್ಯಾಮ್ಸ್ ಪ್ರಧಾನ ಕಾರ್ಯದರ್ಶಿ ಶಶಿಕುಮಾರ್ ಮುನ್ಸೂಚನೆ

## ಶೈಕ್ಷಣಿಕ ವರ್ಷದಿಂದ ಖಾಸಗಿ ಶಾಲೆಗಳಲ್ಲಿ ಶೇ.15ರವರೆಗೆ ಶುಲ್ಕ ಹೆಚ್ಚಳ

**ಬೆಂಗಳೂರು, ಮಾ.3:** ಬೆಲೆ ಏರಿಕೆಯಿಂದ ಈಗಾಗಲೇ ತತ್ತರಿಸಿರುವ ಜನಸಾಮಾನ್ಯರಿಗೆ ಮತ್ತೊಂದು ಬರೆ ಬೀಳಲಿದ್ದು, ಖಾಸಗಿ ಶಾಲೆಗಳು ಶೈಕ್ಷಣಿಕ ಶುಲ್ಕವನ್ನು ಗಣನೀಯವಾಗಿ ಹೆಚ್ಚಳ ಮಾಡಲು ಮುಂದಾಗಿವೆ.

ವಾರ್ಷಿಕವಾಗಿ ಶೇ. 8ರಿಂದ 10 ರಷ್ಟು ಶುಲ್ಕ ಏರಿಕೆ ಸ್ವಾಭಾವಿಕ ಎನ್ನಲಾಗುತ್ತಿದೆ. ಆದರೆ ಈ ಭಾರಿ ಶೇ.15ರ ವರೆಗೂ ಶುಲ್ಕ ಹೆಚ್ಚಿಸಲು ಖಾಸಗಿ ಶಾಲೆಗಳು ಮುಂದಾಗಿರುವುದು ಜನ ಸಾಮಾನ್ಯರ ಪೇಚಾಟಕ್ಕೆ ಕಾರಣವಾಗಿದೆ.

ಕ್ಯಾಮ್ಸ್ ಪ್ರಧಾನ ಕಾರ್ಯದರ್ಶಿ ಶಶಿಕುಮಾರ್ ಅವರು ಶುಲ್ಕ ಹೆಚ್ಚಳದ ಮುನ್ಸೂಚನೆ ನೀಡಿದ್ದಾರೆ. ಮುಂದಿನ ಶೈಕ್ಷಣಿಕ ವರ್ಷದಿಂದ ಶುಲ್ಕ ಹೆಚ್ಚಳ ಜಾರಿಗೆ ಬರಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.



ಪ್ರತಿವರ್ಷ ಶೇ.8ರಿಂದ 10ರಷ್ಟು ಶುಲ್ಕ ಹೆಚ್ಚಳ ಮಾಡಲಾಗುತ್ತಿತ್ತು. 2026–27ನೇ ಸಾಲಿಗೆ ಶೇ. 15 ರಷ್ಟು ಶುಲ್ಕ ಹೆಚ್ಚಳ ಮಾಡುತ್ತಿರುವುದಾಗಿ ತಿಳಿಸಲಾಗಿದೆ. ಕೆಲವು ಶಾಲೆಗಳು ತಮ ಅನುಕೂಲಕ್ಕೆ ತಕ್ಕಂತೆ ಶುಲ್ಕ ಏರಿಕೆ ಮಾಡಲಿವೆ. ಕನಿಷ್ಠ ಶೇ. 8 ರಿಂದ ಗರಿಷ್ಠ 15ರ ವರೆಗೂ ಶುಲ್ಕ ಹೆಚ್ಚಳವಾಗಲಿದೆ ಎಂದು ತಿಳಿಸಿದ್ದಾರೆ. ಸರ್ಕಾರ ಮನಸ್ಸೋ ಇಚ್ಛೇ ಖಾಸಗಿ ಶಾಲೆಗಳಿಗೆ ಅನುಮತಿ ನೀಡುತ್ತಿದೆ. ಇದರಿಂದ ಶಾಲೆಗಳಿಗೆ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆಯಾಗುತ್ತಿದೆ. 30 ರಿಂದ 40 ಲಕ್ಷ ರೂ.ಗಳಷ್ಟು ಮೂಲ ಸೌಕರ್ಯ ಬಳಕೆಯಾಗದೆ ನಿರ್ವಹಣಾ ವೆಚ್ಚ ದುಬಾರಿಯಾಗುತ್ತಿದೆ. ಶಿಕ್ಷಕರ ವೇತನವೂ ಹೆಚ್ಚಾಗುತ್ತಿದೆ. ಹೀಗಾಗಿ ಶುಲ್ಕ ಏರಿಕೆ ಅನಿವಾರ್ಯ ಎಂದು ಸಮರ್ಥಿಸಿಕೊಂಡಿದ್ದಾರೆ.

ಕರ್ನಾಟಕದಲ್ಲಷ್ಟೇ ಅಲ್ಲ, ದೇಶಾದ್ಯಂತ ಖಾಸಗಿ ಶಾಲೆಗಳಿಗೆ ಅನುಮತಿ ನೀಡುವ ಪ್ರಕ್ರಿಯೆ ನಿರಂತರವಾಗಿ ನಡೆಯುತ್ತಿದೆ. ರಾಜ್ಯದಲ್ಲಿಯೇ 700 ರಿಂದ 800 ಖಾಸಗಿ ಶಾಲೆಗಳಿಗೆ ವರ್ಷ ಒಂದರಲ್ಲೇ ಅನುಮತಿ ನೀಡಲಾಗುತ್ತಿದೆ.

ಇದರ ಮಧ್ಯೆ ಬಹು ರಾಷ್ಟ್ರೀಯ ಕಂಪನಿಗಳು, ದೊಡ್ಡದೊಡ್ಡ ಸಂಸ್ಥೆಗಳು ಶೈಕ್ಷಣಿ ಕ್ಷೇತ್ರಕ್ಕೆ ಕಾಲಿಟ್ಟಿವೆ. ಕೋಟ್ಯಂತರ ರೂ. ಬಂಡವಾಳ ಹೂಡಿಕೆ ಮಾಡಿ ಶಾಲೆ ಆರಂಭಿಸುತ್ತಿವೆ. ಅದಕ್ಕನುಗುಣವಾಗಿಯೇ ಶುಲ್ಕವೂ ಹೆಚ್ಚಳವಾಗುತ್ತಿದೆ ಎಂದು ಹೇಳಿದರು.

ಶಿಕ್ಷಣಕ್ಕೆ ಸಂಬಂಧಪಟ್ಟಂತೆ ಎಲ್ಲವೂ ವಾಣಿಜೀಕರಣವಾಗಿದೆ. ಯಾವುದು ಸೇವೆಯಾಗಿ ಉಳಿದಿಲ್ಲ. ಪ್ರಸಕ್ತ ಸನ್ನಿವೇಶದಲ್ಲಿ ಖಾಸಗಿ ಶಾಲೆಗಳನ್ನು ನಡೆಸುವುದು ನಷ್ಟದ ಕೆಲಸ. ಇದರ ಜೊತೆಗೆ ಅನಧಿಕೃತ ಶಾಲೆಗಳ ಹಾವಳಿಯೂ ಇದೆ ಎಂದು ಹೇಳಿದರು.



ಬೆಂಗಳೂರು ದಕ್ಷಿಣ ಜಿಲ್ಲೆಯ ಮಾಗಡಿ ತಾಲ್ಲೂಕಿನ ಸುಗ್ಗನಹಳ್ಳಿ ಗ್ರಾಮದ ಪ್ರಸಿದ್ಧ ಲಕ್ಷ್ಮೀನರಸಿಂಹ ಸ್ವಾಮಿ ದೇವಸ್ಥಾನಕ್ಕೆ ಎಚ್.ಎಂ.ರೇವಣ್ಣ ಭೇಟಿನೀಡಿ ಪೂಜೆ ಸಲ್ಲಿಸಿದರು. ಬ್ರಹ್ಮರಥೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ದೇಶದ ಕಲ್ಯಾಣಕ್ಕಾಗಿ ಪ್ರಾರ್ಥನೆ ಸಲ್ಲಿಸಲಾಯಿತು.

# ಡಯಾಲಿಸಿಸ್ ರೋಗಿಗೆ 1,500 ರೂ. ಸರ್ಕಾರದಿಂದ ಭರಿಸಲು ಕ್ರಮ: ಸಚಿವ ಡಾ.ಶರಣಪ್ರಕಾಶ ಪಾಟೀಲ

**ಕಲಬುರಗಿ, ಮಾ. 3:** ಪೂರ್ಣಿಮಾ ಡಯಾಲಿಸಿಸ್ ಕೇಂದ್ರದಲ್ಲಿ ಪ್ರತಿ ರೋಗಿಯ ಡಯಾಲಿಸಿಸ್‌ಗೆ ಸರ್ಕಾರದಿಂದ 1,500 ಚಿಕಿತ್ಸಾ ವೆಚ್ಚ ಭರಿಸಲಾಗುವುದು. ಈ ಬಗ್ಗೆ ಶೀಘ್ರದಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ ಭರವಸೆ ನೀಡಿದರು.



ಸೇಡಂ ರಸ್ತೆಯ ಎಂಆರ್‌ಎಂಸಿ ಸ್ಯಾಕ್ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ನಗರದ ಏಷ್ಯನ್ ಬಿಜಿನೆಸ್ ಸೆಂಟರ್‌ನಲ್ಲಿರುವ ಪೂರ್ಣಿಮಾ ಪಿ.ಎಂ.ಬಿರಾದಾರ ಡಯಾಲಿಸಿಸ್ ಕೇಂದ್ರದ 5ನೇ ವಾರ್ಷಿಕೋತ್ಸವ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಸಚಿವರು, ಕಿಡ್ನಿ ಸಮಸ್ಯೆಯಿಂದ ಬಳಲುವ ರೋಗಿಗಳಿಗೆ ಉಚಿತ ಚಿಕಿತ್ಸೆ ನೀಡುವುದೆಂದರೆ ಕಠಿಣ ಕೆಲಸ. ಟ್ರಸ್ಟ್‌ನ ಪರೋಪಕಾರ ಕೆಲಸ ನಿಜಕ್ಕೂ ಅಭಿನಂದನಾರ್ಹ. ಈ ವಿಷಯದಲ್ಲಿ ಹಿರಿಯ ವೈದ್ಯ ಡಾ. ಪಿ.ಎಂ. ಬಿರಾದಾರ ಅವರ ಪಾತ್ರವೂ ಹಿರಿದಾಗಿದೆ ಎಂದರು.

ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷೆ ಹಾಗೂ ಶರಣಬಸವ ವಿವಿ ಕುಲಾಧಿಪತಿ ಡಾ. ದಾಕ್ಷಾಯಣಿ ಎಸ್. ಅಪ್ಪ ಮಾತನಾಡಿ, ಒಬ್ಬರನ್ನು ಬದುಕುಳಿಸುವ ಕೆಲಸ ಅಷ್ಟು ಸುಲಭವಲ್ಲ. ಬಡವರ ಸೇವೆ ಮಾಡಿದರೆ, ದೇವರ ಸೇವೆ ಮಾಡಿದಂತಾಗುತ್ತದೆ. ಪ್ರತಿಯೊಬ್ಬರೂ ಇಂಥ ಸಮಾಜ ಕಾರ್ಯದ ಮೂಲಕ ದೇವರ ಸೇವೆ ಮಡಿ ದೇವರ ಪ್ರೀತಿಗೆ ಪಾತ್ರರಾಗಬೇಕು ಎಂದು ಹೇಳಿದರು.

ಡಾ.ಪಿ.ಎಸ್.ಶಂಕರ ಪ್ರತಿಷ್ಠಾನದ ಸಂಸ್ಥಾಪಕ ಅಧ್ಯಕ್ಷ ಡಾ. ಪಿ.ಎಸ್. ಶಂಕರ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಮಾದನಹಿಪ್ಪರಗಾದ ಅಭಿನವ ಶಿವಲಿಂಗ ಸ್ವಾಮೀಜಿ, ಗದ್ದುಗೆ ಮಠದ ಚರಲಿಂಗ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು.

# ಅಂಬಿಗರ ಚೌಡಯ್ಯ ನಿಗಮಕ್ಕೆ 500 ಕೋಟಿ ಮೀಸಲಿಡಿ: ಚೌಡಯ್ಯ ಯುವಸೇನೆ ಮನವಿ



**ಬೀದರ್, ಮಾ. 3:** ಬಜೆಟ್‌ನಲ್ಲಿ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮಕ್ಕೆ 500 ಕೋಟಿ ಹಣ ಮೀಸಲಿಡುವಂತೆ ಆಗ್ರಹಿಸಿ ಅಂಬಿಗರ ಚೌಡಯ್ಯ ಯುವಸೇನೆ ಸಂಸ್ಥಾಪಕ ಅಧ್ಯಕ್ಷ ಸುನೀಲ ಭಾವಿಕಟ್ಟಿ ನೇತೃತ್ವದಲ್ಲಿ ಪೌರಾಡಳಿತ ಹಾಗೂ ಹಜ್ ಸಚಿವ ರಹೀಂಖಾನ್ ಅವರಿಗೆ ಸಲ್ಲಿಸಿದರು.

ರಾಜ್ಯದಲ್ಲಿ 50 ಲಕ್ಷಕ್ಕೂ ಅಧಿಕ ಜನಸಂಖ್ಯೆ ಹೊಂದಿರುವ ಕೋಳಿ, ಕಬ್ಬಲಿಗ, ಅಂಬಿಗ, ಬೆಸ್ತ, ಬಾರಿಕ್ ಸೇರಿದಂತೆ ಇನ್ನಿತರ ಹೆಸರುಗಳಿಂದ ಕರೆಯಲ್ಪಡುವ ಸಮುದಾಯದ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮಕ್ಕೆ 500 ಕೋಟಿ ಮೀಸಲಿಡಬೇಕು ಎಂದು ಒತ್ತಾಯಿಸಿದರು.

ನಮ್ಮ ಸಮುದಾಯ ಅತಿ ಹಿಂದುಳಿದಿದ್ದು, ಆರ್ಥಿಕ, ಶೈಕ್ಷಣಿಕ, ರಾಜಕೀಯವಾಗಿ ವಂಚಿತವಾಗಿದೆ. ಅನೇಕ ವರ್ಷಗಳಿಂದ ನಮ್ಮ ಸಮುದಾಯವನ್ನು ಸರ್ಕಾರಗಳು ಕಡೆಗಣಿಸುತ್ತ ಬಂದಿದೆ.

ಈಗಾದರೂ ನಮ್ಮ ನಿಗಮಕ್ಕೆ ಹಣ ಮೀಸ ಲಿಡಬೇಕು ಎಂದು ಆಗ್ರಹಿಸಿದರು. ಸೇನೆ ಪ್ರಧಾನ ಕಾರ್ಯದರ್ಶಿ ಚಂದ್ರಕಾಂತ ಹಳ್ಳಿಖೇಡಕರ್, ಬಿ.ರಾಮಣ್ಣಾ, ಶರಣಪ್ಪಾ ಕಾಶೆಂಪುರ ಸೇರಿದಂತೆ ಇತರರು ಇದ್ದರು.

**ಬೇಡಿಕೆಗಳು:** ರಾಜ್ಯದ ಪ್ರತಿಯೊಂದು ಜಿಲ್ಲಾ ಕೇಂದ್ರದಲ್ಲಿ ನಿಜ ಶರಣ ಅಂಬಿಗರ ಚೌಡಯ್ಯನವರ ಹೆಸರಿನಲ್ಲಿ ಸಮುದಾಯ ಭವನ ನಿರ್ಮಾಣಕ್ಕೆನ 1 ಎಕರೆ ಭೂಮಿ ಹಾಗೂ ಕಟ್ಟಡಕ್ಕೆ ಹಣ ಘೋಷಿಸಬೇಕು. ರಾಜ್ಯದ ಕೆರೆಗಳು ಮತ್ತು ಜಲಾಶಯಗಳಲ್ಲಿ ಮೀನುಗಾರಿಕೆ ನಡೆಸಲು ನಿಗಮಕ್ಕೆ ಅವಕಾಶ ಮತ್ತು ಅನುಮತಿ ನೀಡಬೇಕು.


ವಿಧಾನಸೌಧದ ಆವರಣದಲ್ಲಿ ನಿಜಶರಣ ಅಂಬಿಗರ ಚೌಡಯ್ಯನವರ ಪ್ರತಿಮೆ ಸ್ಥಾಪನೆ ಮಾಡಬೇಕು. ಪ್ರತಿಯೊಂದು ಜಿಲ್ಲಾಕೇಂದ್ರದಲ್ಲಿ ಚೌಡಯ್ಯನವರ ಪ್ರತಿಮೆ ಸ್ಥಾಪಿಸಲು ಸ್ಥಳಾವಕಾಶ ಕೊಡಬೇಕು. ಬೀದರ್ ಜಿಲ್ಲೆಯ ಬಸವಕಲ್ಯಾಣದ ತ್ರಿಪುರಾಂತ ಕೆರೆಯಲ್ಲಿ ನಿಜಶರಣ ಅಂಬಿಗರ ಚೌಡಯ್ಯನವರ ಮೂರ್ತಿ ಪ್ರತಿಷ್ಠಾಪಿಸಬೇಕು.

ಹಾವೇರಿ ಜಿಲ್ಲೆಯ ನರಸಿಪೂರದಲ್ಲಿರುವ ನಿಜಶರಣ ಅಂಬಿಗರ ಚೌಡಯ್ಯನವರ ಐಕ್ಯಸ್ಥಳವನ್ನು ಕೂಡಲಸಂಗಮ ಮಾದರಿಯಲ್ಲಿ ಅಭಿವೃದ್ಧಿ ಪಡಿಸಲು 50 ಕೋಟಿ ಪ್ಯಾಕೇಜ್ ಘೋಷಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

### ಬಿಎಸ್‌ವೈ ವಿರುದ್ಧ ಸ್ವಪಕ್ಷೀಯ ಮುಖಂಡರು, ಹೇಳಿಕೆ ಹಿಂಪಡೆಯುವಂತೆ ಒತ್ತಾಯ

# ಮುಂದಿನ ವಿಧಾನಸಭೆ ಚುನಾವಣೆಗೆ ಅಭ್ಯರ್ಥಿ ಘೋಷಿಸಿದ್ದಕ್ಕೆ ಅಸಮಾಧಾನ

**ದಾವಣಗೆರೆ, ಫೆ.3:** ಮುಂಬರುವ ವಿಧಾನಸಭಾ ಚುನಾವಣೆಗೆ ಜಿಲ್ಲೆಯ ಹಲವು ಕ್ಷೇತ್ರಗಳ ಸಂಭವನೀಯ ಅಭ್ಯರ್ಥಿಗಳ ಹೆಸರು ಘೋಷಣೆ ಮಾಡಿದ ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್.ಯಡಿಯೂರಪ್ಪ ವಿರುದ್ಧ ಸ್ವಪಕ್ಷೀಯ ಮುಖಂಡರು ತಿರುಗಿಬಿದ್ದಿದ್ದಾರೆ. ಹೊನ್ನಾಳಿಯಲ್ಲಿ ನೀಡಿದ ಹೇಳಿಕೆಯನ್ನು ಕೂಡಲೇ ಹಿಂಪಡೆಯುವಂತೆ ಒತ್ತಾಯಿಸಿದ್ದಾರೆ.



ಇತ್ತೀಚೆಗೆ ಹೊನ್ನಾಳಿಯಲ್ಲಿ ನಡೆದ ಸಮಾರಂಭದಲ್ಲಿ ಮಾತನಾಡಿದ ಯಡಿಯೂರಪ್ಪ, ಜಿಲ್ಲೆಯ ಹಲವು ಕ್ಷೇತ್ರಗಳ ಬಿಜೆಪಿಯ ಸಂಭವನೀಯ ಅಭ್ಯರ್ಥಿಗಳ ಹೆಸರು ಪ್ರಕಟಿಸಿದ್ದಾರೆ. ಪಕ್ಷದ ಅಭ್ಯರ್ಥಿಗಳನ್ನು ಗೆಲ್ಲಿಸುವ ಮೂಲಕ ಎಂ.ಪಿ. ರೇಣುಕಾಚಾರ್ಯ ಅವರನ್ನು ಸಚಿವರನ್ನಾಗಿ ಮಾಡುವಂತೆ ಕೋರಿದ್ದಾರೆ. ಪಕ್ಷದ ಶಿಷ್ಟಾಚಾರವನ್ನು ಉಲ್ಲಂಘಿಸುವಂತಹ ಹೇಳಿಕೆಯನ್ನು ಯಡಿಯೂರಪ್ಪ ಅವರಿಂದ ನಿರೀಕ್ಷಿಸಿರಲಿಲ್ಲ ಎಂದು ಬಿಜೆಪಿ ಜಿಲ್ಲಾ ಮಾಜಿ ಪ್ರಧಾನ ಕಾರ್ಯದರ್ಶಿ ಶಾಂತರಾಜ್ ಪಾಟೀಲ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಆಕ್ರೋಶ ವ್ಯಕ್ತಪಡಿಸಿದರು.

ಬಿ.ಎಸ್. ಯಡಿಯೂರಪ್ಪ ಅವರು ಪಕ್ಷದ ಪ್ರಶ್ನಾತೀತ ನಾಯಕ. ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ತಂದಿರುವ ಅವರ ಬಗ್ಗೆ ಅಪಾರ ಗೌರವವಿದೆ. ಭಾಷಣದಲ್ಲಿ ಅವರು ಆಡಿರುವ ಮಾತುಗಳ ಬಗ್ಗೆ ಮಾತ್ರ ಆಕ್ಷೇಪವಿದೆ. ಇದು ಅವರಿಗೆ ಶೋಭೆ ತರುವುದಿಲ್ಲ. ಪಕ್ಷದ ಕಾರ್ಯಕರ್ತರ ಉತ್ಸಾಹ ಕುಗ್ಗಿಸುವ ಪ್ರಯತ್ನವನ್ನು ಯಡಿಯೂರಪ್ಪ ಅವರು ಮಾಡಬಾರದು' ಎಂದು ಅಸಮಾಧಾನ ಹೊರಹಾಕಿದರು.

ಬಿಜೆಪಿ ಇತರ ಪಕ್ಷಕ್ಕಿಂತ ಭಿನ್ನ. ಕ್ಷೇತ್ರದ ಅಭ್ಯರ್ಥಿ ಆಯ್ಕೆಗೆ ಶಿಷ್ಟಾಚಾರವಿದೆ. ಕೇಂದ್ರ ಸಂಸದೀಯ ಮಂಡಳಿಯು ಅಭ್ಯರ್ಥಿ ಆಯ್ಕೆ ಮಾಡುತ್ತದೆ. ಏಕಾಏಕಿ ಜಿಲ್ಲೆಯ ಏಳು ಕ್ಷೇತ್ರಗಳಲ್ಲಿ ಇಂತಹವರನ್ನೇ ಗೆಲ್ಲಿಸುವಂತೆ ಅವರು ಮಾಡಿಕೊಂಡ ಮನವಿ ಸರಿಯಲ್ಲ. ಪಕ್ಷದಿಂದ ಹೊರನಡೆದು ಪ್ರಾದೇಶಿಕ ಪಕ್ಷವೊಂದನ್ನು ಸಂಘಟಿಸುವ ಹುನ್ನಾರ ಅವರಲ್ಲಿ ಇರುವಂತೆ ಕಾಣುತ್ತಿದೆ' ಎಂದು ದೂರಿದರು.

ಬಿ.ವೈ. ವಿಜಯೇಂದ್ರ ಅವರು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷರಾದ ಬಳಿಕ ಪ್ರತಿ ಜಿಲ್ಲೆಯಲ್ಲಿ ಅಸಮಾಧಾನ ಹೊಗೆಯಾಡುತ್ತಿದೆ. ವಿಬಿ–ಜಿರಾಮ್‌ಜಿ ಕುರಿತು ಇತ್ತೀಚೆಗೆ ಹೊನ್ನಾಳಿಯಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮಕ್ಕೆ ಪಕ್ಷದ ಶಾಸಕ ಬಿ.ಪಿ. ಹರೀಶ್, ಕೇಂದ್ರದ ಮಾಜಿ ಸಚಿವ ಜಿ.ಎಂ. ಸಿದ್ದೇಶ್ವರ ಅವರಿಗೆ ಆಹ್ವಾನ ನೀಡಿರಲಿಲ್ಲ. ಗುಂಪುಗಾರಿಕೆ ಮಾಡುವವರ ಜೊತೆ ಸೇರಿದ ವಿಜಯೇಂದ್ರ ಅವರು ಪಕ್ಷವನ್ನು ದುರ್ಬಲಗೊಳಿಸುತ್ತಿದ್ದಾರೆ' ಎಂದು ಆರೋಪಿಸಿದರು.ಬಿಜೆಪಿ ಮುಖಂಡರಾದ ಅಣಬೇರು ಜೀವನಮೂರ್ತಿ, ಎಂ.ಆರ್.ಮಹೇಶ್, ಮಂಜಾ ನಾಯ್ಕ, ದೇವೇಂದ್ರಪ್ಪ, ಶ್ಯಾಮ್ ಹಾಜರಿದ್ದರು.ಎಚ್.ಪಿ. ರಾಜೇಶ್, ಮಾಜಿ ಶಾಸಕಬಿಜೆಪಿ ತತ್ವ, ಸಿದ್ಧಾಂತದಡಿ ಕೆಲಸ ಮಾಡುತ್ತಿದ್ದೇನೆ. ಮುಂಬರುವ ಚುನಾವಣೆಯಲ್ಲಿ ಜಗಳೂರು ಕ್ಷೇತ್ರದ ಟಿಕೆಟ್ ಆಕಾಂಕ್ಷಿಯಾಗಿದ್ದೇನೆ. ನಾನು ಬೇರೆ ಯಾವುದೇ ಪಕ್ಷಕ್ಕೆ ಹೋಗುವುದಿಲ್ಲ ಶಿವಕುಮಾರ್ ಎಚ್.ಎಸ್, ಅಧ್ಯಕ್ಷ ತುಮ್ಕೋಸ್, ಚನ್ನಗಿರಿಪಕ್ಷದಲ್ಲಿ ಕೆಲಸ ಮಾಡಲು ಎಲ್ಲರಿಗೂ ಅವಕಾಶ ಮಾಡಿಕೊಡಿ. ಚುನಾವಣೆಯಲ್ಲಿ ಗೆಲ್ಲುವ ಸಾಮರ್ಥ್ಯ ಇರುವವರಿಗೆ ಟಿಕೆಟ್ ಕೊಡಿ. ಏಕಾಏಕಿ ಅಭ್ಯರ್ಥಿ ಘೋಷಣೆ ಮಾಡುವುದು ಸರಿಯಲ್ಲ ವಿಧಾನಸಭಾ ಕ್ಷೇತ್ರಗಳಿಗೆ ಸಂಭವನೀಯ ಅಭ್ಯರ್ಥಿಗಳ ಹೆಸರು ಘೋಷಣೆ ಮಾಡಿದ ಯಡಿಯೂರಪ್ಪ ಅವರ ಹೇಳಿಕೆಯಿಂದ ಬೇಸರಗೊಂಡ ಪಕ್ಷದ ನಾಯಕರು ಹಾಗೂ ಕಾರ್ಯಕರ್ತರ ಸಭೆಯನ್ನು ಜಿಎಂಐಟಿ ಅತಿಥಿಗೃಹದಲ್ಲಿ ಮಾರ್ಚ್ 5ರಂದು ಕರೆಯಲಾಗಿದೆ ಎಂದು ಶಾಂತರಾಜು ತಿಳಿಸಿದರು.

ಕೇಂದ್ರದ ಮಾಜಿ ಸಚಿವ ಜಿ.ಎಂ. ಸಿದ್ದೇಶ್ವರ ಹಾಗೂ ಹರಿಹರ ಶಾಸಕ ಬಿ.ಪಿ. ಹರೀಶ್ ಅವರನ್ನು ಸಭೆಗೆ ಆಹ್ವಾನಿಸಿದ್ದೇವೆ. ಜಿಲ್ಲೆಯ ನೂರಕ್ಕೂ ಹೆಚ್ಚು ಮುಖಂಡರು ಹಾಗೂ ಸಾವಿರಕ್ಕೂ ಹೆಚ್ಚು ಕಾರ್ಯಕರ್ತರು ಆಗಮಿಸಲಿದ್ದಾರೆ. ಇಲ್ಲಿ ನಡೆಯುವ ಚರ್ಚೆಯನ್ನು ಪಕ್ಷದ ರಾಜ್ಯ ಮತ್ತು ರಾಷ್ಟ್ರ ನಾಯಕರ ಗಮನಕ್ಕೆ ತರಲಿದ್ದೇವೆ ಎಂದರು.

# ನಿತ್ಯ ಕೋರ್ಟ್‌ಗೆ ಅಲೆದಾಡುವ ಸ್ಥಿತಿ ನಿರ್ಮಿಸಿದ್ದಾರೆ: ಕಣ್ಣೀರಿಟ್ಟ ಶೃಂಗೇರಿ ಶಾಸಕ ರಾಜೇಗೌಡ

**ಚಿಕ್ಕಮಗಳೂರು, ಮಾ.3:** ಎನ್. ಆರ್. ಪುರ ತಾಲೂಕಿನ ಬಾಳೆಹೊನ್ನೂರಿನಲ್ಲಿ ನಡೆದ ಜನಾಂದೋಲನ ಸಮಾವೇಶದಲ್ಲಿ ಶೃಂಗೇರಿ ಶಾಸಕ ಟಿ.ಡಿ. ರಾಜೇಗೌಡ, ತಮ್ಮ ಕುಟುಂಬವನ್ನು ಬೀದಿಗೆ ತಂದು ನಿತ್ಯ ಕೋರ್ಟ್‌ಗೆ ಅಲೆದಾಡುವ ಸ್ಥಿತಿ ನಿರ್ಮಿಸಿದ್ದಾರೆ ಎಂದು ಆರೋಪಿಸಿ ಕಣ್ಣೀರಿಟ್ಟಿದ್ದಾರೆ.



ನನ್ನ ಮನೆಯನ್ನು ಹಾಳು ಮಾಡಿದ್ದೀರಿ, ಅನ್ಯಾಯ ಮಾಡಿದ್ದೀರಿ, ನಾನು ಸಾಲ ಮಾಡಿದ್ದೇನೆ, ನಾನು ಜನಕ್ಕೆ ಅನ್ಯಾಯವನ್ನು ಮಾಡಿಲ್ಲ. ನಾನು ಈ ಸಭೆ ಮೂಲಕ ಒಂದು ಘೋಷಣೆ ಮಾಡುತ್ತೇನೆ, ನಾನು ಚುನಾವಣೆಗೆ ಸ್ಪರ್ಧಿಸಲ್ಲ, ಯಾರಾದರೂ ನಿಲ್ಲಲಿ. ಆದರೆ ಕೆಟ್ಟ ಮನಸ್ಥಿತಿಯ ವ್ಯಕ್ತಿ ಮತ್ತೆ ಶಾಸಕನಾಗಬಾರದು, ಶಾಸಕರಾದರೆ ಈ ಕ್ಷೇತ್ರಕ್ಕೆ ದೊಡ್ಡ ಮಾರಕ, ಯಾರ ಮನೆ ಹೆಣ್ಣು ಮಕ್ಕಳನ್ನು ಏನ್ ಮಾಡ್ತಾರೋ ಗೊತ್ತಿಲ್ಲ ಎಂದು ಹೆಸರು ಹೇಳದೆಯೇ ಪರೋಕ್ಷವಾಗಿ ತಮ್ಮ ವಿರೋಧಿ ವಿರುದ್ಧ ಹರಿಹಾಯ್ದರು.

ನನ್ನ ಹೆಂಡತಿ, ಮಗನಿಗೆ ತೊಂದರೆ ಕೊಡುತ್ತಿದ್ದಾರೆ. ನಾನು ಈ ಸಮಾವೇಶದ ಮೂಲಕ ಒಂದು ಘೋಷಣೆ ಮಾಡುತ್ತಿದ್ದೇನೆ, ಈ ಕ್ಷೇತ್ರದಲ್ಲಿ ಜನರಿಗೆ ವಿನಾಕಾರಣ ತೊಂದರೆ ಕೊಡುತ್ತಾ, ಮಹಿಳೆಯರಿಗೆ ತೊಂದರೆ ಕೊಟ್ಟಿರುವುದನ್ನು ಮನದಟ್ಟು ಮಾಡಿಕೊಂಡು ಚುನಾವಣೆಗೆ ಸ್ಪರ್ಧಿಸಲ್ಲ ಅಂತ ಘೋಷಣೆ ಮಾಡಲಿ ಎಂದು ಶಾಸಕ ರಾಜೇಗೌಡ ಸವಾಲು ಹಾಕಿದರು. ನಾನು ಕೂಡ ಘೋಷಣೆ ಮಾಡುತ್ತೇನೆ, ನೀವು ಸ್ಪರ್ಧಿಸಲ್ಲ ಅಂದ್ರೆ ನಾನು ಸ್ಪರ್ಧಿಸಲ್ಲ. ನನ್ನ ಬದಲಿಗೆ ಕಾರ್ಯಕರ್ತರು ನಿಲ್ಲಲಿ ಎಂದರು.

ಮಲೆನಾಡಿನಲ್ಲಿ ನಿರಂತರವಾಗಿ ಕಾಡಾನೆ ಹಾವಳಿ ವಿರೋಧಿಸಿ ನಡೆದಿದ್ದ ಪ್ರತಿಭಟನೆಯಲ್ಲಿ ಮಾಜಿ ಶಾಸಕ ಜೀವರಾಜ್ ಹಾಲಿ ಶಾಸಕ ಟಿ.ಡಿ. ರಾಜೇಗೌಡ ವಿರುದ್ಧ ಕಿಡಿಕಾರಿದ್ದರು. ಕಾಡಾನೆ ದಾಳಿ ಆಗುತ್ತಿದ್ದು, ಇದಕ್ಕೆ ಶಾಶ್ವತ ಪರಿಹಾರ ಹುಡುಕಿಕೊಡಿ ಹಾಗೂ ರೈಲ್ವೆ ಬ್ಯಾರಿಕೇಡ್ ಗೇಟ್ ಹಾಕಿ ಕೊಡಿ ಹಾಗೂ ಮೃತಪಟ್ಟ ಮಹಿಳೆ ಕೂಲಿ ಕಾರ್ಮಿಕರು ಆಗಿರುವ ಕಾರಣ ಆ ಕುಟುಂಬಕ್ಕೆ 50 ಲಕ್ಷ ರೂಪಾಯಿ ಹಣ ಹಾಗೂ ಆ ಕುಟುಂಬದ ಸದಸ್ಯರೊಬ್ಬರಿಗೆ ಉದ್ಯೋಗವನ್ನು ನೀಡಿ ಎಂದು ಆಗ್ರಹಿಸಿದ್ದವು. 'ಈ ಹಿಂದೆ ಎನ್. ಆರ್. ಪುರ ತಾಲೂಕಿನ ಸೀತೂರಿನಲ್ಲಿ ಕಾಡಾನೆ ದಾಳಿಗೆ ಹಾಗೂ ಶೃಂಗೇರಿಯ ಕೆರೆ ಕಟ್ಟೆಯಲ್ಲಿ ಮೃತಪಟ್ಟ ವ್ಯಕ್ತಿಗೆ ತಲಾ 25 ಲಕ್ಷ ಹಣ ನೀಡಿದ್ದೀರಿ. ಆದರೆ, ಇವರಿಗೆ 20 ಲಕ್ಷ ಮಾತ್ರ ನೀಡುತ್ತಿದ್ದೀರಿ. ಇದನ್ನು ಕೇಳಿದ್ದಕ್ಕೆ ನಮ್ಮ ಮೇಲೆ ಲಾಠಿಚಾರ್ಜ್ ಮಾಡಿಸಿದ್ದೀರಿ ಎಂದಿದ್ದರು.

ಅಂದು ನಡೆದಿದ್ದ ಪ್ರತಿಭಟನಾ ಸಭೆಯಲ್ಲಿ ಬಿಜೆಪಿ ಕಾರ್ಯಕರ್ತರು ಶಾಸಕರ ವಿರುದ್ಧ ಆರೋಪದ ಸುರುಮಳೆಗೈದಿದ್ದರು. ಇದಕ್ಕೆ ಪ್ರತಿಯಾಗಿ ಕಾಂಗ್ರೆಸ್ ಪಕ್ಷದಿಂದ ಜನಾಂದೋಲನ ಸಮಾವೇಶವನ್ನು ಹಮ್ಮಿಕೊಳ್ಳಲಾಗಿತ್ತು. ಈ ವೇಳೆ ಶಾಸಕ ಟಿ.ಡಿ. ರಾಜೇಗೌಡ ಆಕ್ರೋಶ ವ್ಯಕ್ತಪಡಿಸಿ ಕಣ್ಣೀರು ಹಾಕಿದರು.

### ಪುಟ್ಟರಾಜ ಗವಾಯಿಗಳ ಪುಣ್ಯತಿಥಿ

# ಬೀದರ್‌ನಲ್ಲಿ ರಾಜ್ಯಮಟ್ಟದ ಸಂಗೀತ ಸಮ್ಮೇಳನ: ಪ್ರೊ.ಎಸ್.ಕೆ. ಪಾಟೀಲ್ ಅಧ್ಯಕ್ಷ



**ಬೀದರ್, ಮಾ. 3:** ಪಂಡಿತ್ ಪಂಚಾಕ್ಷರ ಗವಾಯಿ ಅವರ 81ನೇ ಪುಣ್ಯತಿಥಿ, ಪಂಡಿತ ಪುಟ್ಟರಾಜ ಕವಿ ಗವಾಯಿ ಅವರ 15ನೇ ಪುಣ್ಯತಿಥಿ ಹಾಗೂ ಗಾನಯೋಗಿ ಪಂಚಾಕ್ಷರ ಗವಾಯಿ ಸೇವಾಸಂಘದ 23ನೇ ವಾರ್ಷಿಕೋತ್ಸವದ ಅಂಗವಾಗಿ ರಾಜ್ಯಮಟ್ಟದ ಸಂಗೀತ ಸಮ್ಮೇಳನ, ಪ್ರಶಸ್ತಿ ಪ್ರದಾನ ಸಮಾರಂಭ ಮಾರ್ಚ್ 6ರಂದು ಚನ್ನಬಸವ ಪಟ್ಟದ್ದೇವರು ಜಿಲ್ಲಾ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಅಧ್ಯಕ್ಷ ಚಂದ್ರಶೇಖರ್ ಹೆಬ್ಬಾಳೆ ತಿಳಿಸಿದರು.

ಗಾನಯೋಗಿ ಪಂಚಾಕ್ಷರ ಗವಾಯಿ ಸೇವಾ ಸಂಘ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದೆ. ಭಾಲ್ಕಿಯ ಹಿರಿಯ ಸಂಗೀತ ಶಿಕ್ಷಕ ಪ್ರೊ. ಎಸ್.ಕೆ. ಪಾಟೀಲ್ ಅವರನ್ನು ಸಮ್ಮೇಳನದ ಸರ್ವಾಧ್ಯಕ್ಷರಾಗಿ ಆಯ್ಕೆ ಮಾಡಲಾಗಿದೆ ಎಂದು ನಗರದಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ವಿವರಿಸಿದರು.

ಅಂದು ಬೆಳಗ್ಗೆ 10.30ಕ್ಕೆ ಕರ್ನಾಟಕ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಕೆ.ಸಿ. ವೀರಣ್ಣ ಉದ್ಘಾಟಿಸುವರು. ನಿವೃತ್ತ ಪ್ರಾಧ್ಯಾಪಕ ಎಸ್.ವಿ. ಕಲ್ಮಠ ರಚಿತ 'ಕುಮಾರ ಕೃಪಾ ಕೋವಿಡ್ ಗೆದ್ದವರ ಕೈತೋಟ ಕೈಪಿಡಿ' ಕೃತಿ ಬಿಡುಗಡೆಗೊಳ್ಳಲಿದೆ. ಮಧ್ಯಾಹ್ನ 2ರಿಂದ ಸಂಜೆ 6ರ ವರೆಗೆ ಸಂಗೀತ ಸಮ್ಮೇಳನ ನಡೆಯಲಿದೆ. ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ಸುಗಮ ಸಂಗೀತ, ಭಜನಾ ಸಂಗೀತ ಹಾಗೂ ಭರತನಾಟ್ಯ ಕಾರ್ಯಕ್ರಮಗಳು ಜರುಗಲಿವೆ. ಪಂಡಿತ್ ರಾಮಲು ಗಾದಗಿ ಸೇರಿದಂತೆ ಹಲವಾರು ಕಲಾವಿದರು ಭಾಗವಹಿಸಲಿದ್ದಾರೆ ಎಂದು ಮಾಹಿತಿ ಹಂಚಿಕೊಂಡರು.

ಸಂಜೆ 6ರಿಂದ 7ರ ವರೆಗೆ ಸಮಾರೋಪ ಸಮಾರಂಭ ಹಾಗೂ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ನಡೆಯಲಿದೆ. 2025–26ನೇ ಸಾಲಿನ ಪಂಚಾಕ್ಷರ ಪ್ರಶಸ್ತಿಯನ್ನು ತಬಲಾ ವಾದಕ ಮಡಿವಾಳಯ್ಯ ಸಾಲಿ ಅವರಿಗೆ ಹಾಗೂ ಪುಟ್ಟರಾಜ ಪ್ರಶಸ್ತಿಯನ್ನು ಅಂಧ ಕಲಾವಿದ ಏಕನಾಥ ಸಿದ್ದಸುರೆ ಅವರಿಗೆ ಪ್ರದಾನ ಮಾಡಲಾಗುವುದು. ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದವರಿಗೆ ಸನ್ಮಾನ ನಡೆಯಲಿದೆ ಎಂದು ತಿಳಿಸಿದರು.

ಸಂಘದ ಗೌರವಾಧ್ಯಕ್ಷ ಎಸ್.ವಿ ಕಲ್ಮಠ ಮಾತನಾಡಿ, ಗಾನಯೋಗಿ ಪಂಚಾಕ್ಷರ ಗವಾಯಿ ಅವರ ಪುಣ್ಯತಿಥಿಯನ್ನು ಕಳೆದ 40 ವರ್ಷಗಳಿಂದ ಆಚರಿಸಿಕೊಂಡು ಬರಲಾಗುತ್ತಿದೆ. ಪ್ರತಿವರ್ಷ ತಪ್ಪದೇ ರಾಜ್ಯಮಟ್ಟದ ಸಂಗೀತ ಸಮ್ಮೇಳನಗಳನ್ನು ನಿರಂತರವಾಗಿ ಆಯೋಜಿಸಲಾಗುತ್ತಿದೆ ಎಂದು ವಿವರಿಸಿದರು.

# ಅಧ್ಯಾತ್ಮ ಅಂದರೆ ಚರ್ಮಶುದ್ಧಿ ಅಲ್ಲ, ಅಂತರಂಗದ ಶುದ್ಧಿ ಎಂದು ಬದುಕಿ ತೋರಿಸಿದವರು ತಾತಯ್ಯ: ಕೆ.ವಿ.ಪ್ರಭಾಕರ್

**ಕೋಲಾರ, ಫೆ.3:** ಮನುಷ್ಯನ ಶ್ರೇಷ್ಠತೆಯ ವ್ಯಸನಕ್ಕೆ ತಮ್ಮ ಅನುಭಾವದ ಮೂಲಕ ಮದ್ದು ಅರೆದವರು ಕೈವಾರ ತಾತಯ್ಯ ಅವರು, ಅದ್ಯಾತ್ಮ ಅಂದರೆ ಚರ್ಮಶುದ್ಧಿ ಅಲ್ಲ: ಅಂತರಂಗದ ಶುದ್ಧಿ ಎಂದು ಬದುಕಿ ತೋರಿಸಿದವರು ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅವರು ಅಭಿಪ್ರಾಯಪಟ್ಟರು.

ಕೈವಾರ ತಾತಯ್ಯ ಅವರ 300ನೇ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿ, ಜಾತಿ, ಧರ್ಮ, ಲಿಂಗ ಹಣ, ಅಂತಸ್ತು ಎಲ್ಲದರ ಶ್ರೇಷ್ಠತೆಯ ವ್ಯಸನವನ್ನು ನಿವಾಳಿಸಿದ ಕೈವಾರದ ಶ್ರೀ ಯೋಗಿ ನಾರೇಯಣ ಯತೀಂದ್ರರು "ತಾತಯ್ಯ" ಅಂತಲೇ ಜನಮಾನಸದಲ್ಲಿ ನೆಲೆಯಾಗಿದ್ದಾರೆ. ಅಧ್ಯಾತ್ಮ ಎಂದರೆ ಬಹಳ ಕಠಿಣ, ಎಲ್ಲರ ಪಾಲಿನ ಪ್ರಸಾದ ಅಲ್ಲ ಎನ್ನುವ ಶ್ರೇಷ್ಠತೆಯನ್ನು ಅಳಿಸಿ, "ಕಠಿಣವಾದ ಅಧ್ಯಾತ್ಮದ ಸಾರವನ್ನು ಸರಳ ಭಾಷೆಯಲ್ಲಿ ಸಮಾಜದ ಕಟ್ಟಕಡೆಯವರಿಗೂ ತಲುಪಿಸಿದ ಸಂತ ಶ್ರೇಷ್ಠರು ತಾತಯ್ಯ.

ಕರ್ನಾಟಕದ ಶ್ರೇಷ್ಠ ಸಂತರು ದಾರ್ಶನಿಕರು ಮತ್ತು ಸಮಾಜ ಸುಧಾರಕರಲ್ಲಿ ಒಬ್ಬರಾದ ತಾತಯ್ಯ ತೆಲುಗು ಮತ್ತು ಕನ್ನಡ ಎರಡೂ ಭಾಷೆಗಳಲ್ಲಿ ತಮ್ಮ ಅನುಭಾವವನ್ನೇ ತತ್ವಪದಗಳನ್ನಾಗಿ ರಚಿಸಿ ಹಾಡಿದರು. ಜನಸಾಮಾನ್ಯರಿಗೆ ಅಧ್ಯಾತ್ಮದ ದಾರಿಯನ್ನು ತೋರಿಸಿದ ಸೂಫಿಗಳು, ಸಂತರ ಪರಂಪರೆಯನ್ನು ಮುಂದುವರೆಸಿದರು. ಅಧ್ಯಾತ್ಮ ಅಂದರೆ ಚರ್ಮಶುದ್ಧಿಯ ಸಂಪ್ರದಾಯವಲ್ಲ, ಅಂತರಂಗ ಶುದ್ಧಿಯ ಹಾದಿ ಎನ್ನುವುದನ್ನು ಬದುಕಿ ತೋರಿಸಿದರು.



ಮನುಷ್ಯ ನಿರ್ಮಿಸಿದ ಎಲ್ಲವೂ ಕಡೆ ಗಾಲಕ್ಕೆ, ಕೇಡುಗಾಲಕ್ಕೆ ಜಾರುವ ನೈತಿಕ ಅವನತಿಯನ್ನು ತಾತಯ್ಯ 300 ವರ್ಷಗಳ ಹಿಂದೆಯೇ ಹಾಡಿ ಮನುಕುಲವನ್ನು ಎಚ್ಚರಿಸಿದರು. ಈ ಕಾರಣಕ್ಕೇ ತಾತಯ್ಯ ಬರೆದಿರುವ 'ಕಾಲಜ್ಞಾನ' ಇಂದಿಗೂ ಪ್ರಸ್ತುತವಾಗಿದೆ. ಮಾನವೀಯತೆ ಮತ್ತು ಭಕ್ತಿಯೇ ಮುಕ್ತಿಗೆ ದಾರಿ ಎಂದು ಬೋಧಿಸಿ, ತಾತಯ್ಯ ಬರೆದ 'ಕಾಲಜ್ಞಾನ' ಕೇವಲ ಭವಿಷ್ಯವಾಣಿಯಲ್ಲ, ಅದು ಅಧ್ಯಾತ್ಮ ಮತ್ತು ಸಮಾಜದ ಅಂಕುಡೊಂಕುಗಳನ್ನು ತಿದ್ದುವ ಒಂದು ದರ್ಶನ ಎಂದರು.

ಇವತ್ತಿನ ಮನುಷ್ಯನ ನೈತಿಕ ಅವನತಿಯನ್ನು, ನಡವಳಿಕೆ ಹೇಗೆ ಬದಲಾಗುತ್ತದೆ ಎಂಬುದನ್ನು 250 ವರ್ಷಗಳ ಹಿಂದೆಯೇ ವಿವರಿಸಿದ್ದಾರೆ.

ಶ್ರೇಷ್ಠತೆಯ ವ್ಯಸನ ಮತ್ತು ದ್ವೇಷ, ಸಣ್ಣತನಗಳಿಂದ ಮನುಷ್ಯ ಧರ್ಮವನ್ನು ಬಿಟ್ಟು ಅಧರ್ಮದ ಹಾದಿ ಹಿಡಿಯುತ್ತಾನೆ. ಸತ್ಯಕ್ಕೆ ಬೆಲೆ ಇಲ್ಲದಂತಾಗುತ್ತದೆ. ತಂದೆ–ತಾಯಿ ಮತ್ತು ಮಕ್ಕಳ ನಡುವಿನ ಗೌರವ ಕಡಿಮೆಯಾಗುತ್ತದೆ. ಗುರು–ಶಿಷ್ಯರ ಸಂಬಂಧ ಕೇವಲ ವ್ಯವಹಾರವಾಗುತ್ತದೆ. ಮನುಷ್ಯ ಹಣಕ್ಕಾಗಿ ಏನು ಬೇಕಾದರೂ ಮಾಡಲು ಸಿದ್ಧನಾಗುತ್ತಾನೆ, ಹಸಿವು ಮತ್ತು ಬಡತನ ಹೆಚ್ಚಾದರೂ ಶ್ರೀಮಂತರು ಉದಾರಿಗಳಾಗುವುದಿಲ್ಲ ಎನ್ನುವ ಇವತ್ತಿನ ಸತ್ಯವನ್ನು ಅವತ್ತೇ ದಾಖಲಿಸಿದ್ದಾರೆ.

ಪ್ರಕೃತಿಯ ಮೇಲೆ ಮನುಷ್ಯನ ದಬ್ಬಾಳಿಕೆಯಿಂದ ಆಗುವ ಅನಾಹುತಗಳಿಗೆ 250 ವರ್ಷಗಳ ಹಿಂದೆಯೇ ಕನ್ನಡಿ ಹಿಡಿದಿದ್ದಾರೆ.

ಅಕಾಲಿಕ ಮಳೆ ಮತ್ತು ಭೀಕರ ಬರಗಾಲ, ಭೂಕಂಪಗಳು ಮತ್ತು ಜಲಪ್ರಳಯದಂತಹ ನೈಸರ್ಗಿಕ ವಿಕೋಪಗಳು ಸಂಭವಿಸುತ್ತವೆ. ಗಾಳಿ ಮತ್ತು ನೀರು ವಿಷಪೂರಿತವಾಗಿ ಹರಡುವ ರೋಗಗಳ ಬಗ್ಗೆಯೂ ಅವತ್ತೇ ಎಚ್ಚರಿಸಿದ್ದಾರೆ.

ತಮ್ಮ ಅಧ್ಯಾತ್ಮ ಮತ್ತು ತತ್ವ ಪದಗಳ ಮೂಲಕ ಬ್ರಿಟಿಷರ ವಿರುದ್ಧದ ಹೋರಾಟಕ್ಕೂ ಸ್ಫೂರ್ತಿ ಯಾಗಿದ್ದ ತಾತಯ್ಯ, ರಾಜಕೀಯ ಮತ್ತು ಆಡಳಿತಗಾರರು ಪ್ರಜೆಗಳ ಹಿತ ಮರೆತು ಸ್ವಾರ್ಥಿಗಳಾಗುತ್ತಾರೆ. ನ್ಯಾಯಾಲಯಗಳಲ್ಲಿ ನ್ಯಾಯ ಸಿಗುವುದು ಕಷ್ಟವಾಗುತ್ತದೆ. ಗಡಿಗಳಲ್ಲಿ ಯುದ್ಧದ ಭೀತಿ ಮತ್ತು ಅಶಾಂತಿ ನೆಲೆಸುತ್ತದೆ ಎನ್ನುವ ಭವಿಷ್ಯವಾಣಿಯನ್ನೂ ದಾಖಲಿಸಿದ್ದಾರೆ.

*ತಾತಯ್ಯನವರು ವಿಜ್ಞಾನದ ಬೆಳವಣಿಗೆಯನ್ನು "ಕಬ್ಬಿಣದ ಕುದುರೆಗಳು ಓಡುತ್ತವೆ", "ಆಕಾಶದಲ್ಲಿ ಪಕ್ಷಿಗಳಂತೆ ಮನುಷ್ಯ ಹಾರುತ್ತಾನೆ" ಎಂಬ ರೂಪಕಗಳ ಮೂಲಕ ವರ್ಣಿಸಿದ್ದರು. ಇಂದು ನಾವು ಬಳಸುವ ರೈಲು ಮತ್ತು ವಿಮಾನಗಳನ್ನು ಅವರು ಅಂದೇ ಊಹಿಸಿದ್ದರು. ತಾತಯ್ಯನವರು ಕೇವಲ ಭಯ ಹುಟ್ಟಿಸಲು ಕಾಲಜ್ಞಾನ ಬರೆಯಲಿಲ್ಲ. "ಕಾಲ ಬದಲಾದರೂ ಮನುಷ್ಯ ತನ್ನ ಅಂತರಾತ್ಮವನ್ನು ಶುದ್ಧವಾಗಿಟ್ಟುಕೊಂಡು, ಭಕ್ತಿಯ ಹಾದಿಯಲ್ಲಿ ನಡೆದರೆ ಎಂತಹ ಕಠಿಣ ಕಾಲವನ್ನೂ ಸುಲಭವಾಗಿ ದಾಟಬಹುದು ಎನ್ನುವ ಸಂದೇಶ ನೀಡಿದ್ದಾರೆ" ಕೈವಾರ ತಾತಯ್ಯನವರ ಪದಗಳು ಇಂದಿಗೂ ಸಮಾಜಕ್ಕೆ ದಾರಿದೀಪವಾಗಿವೆ ಎಂದರು.

# ಮಾತೋಶ್ರೀ ರಮಾಬಾಯಿ ಅಂಬೇಡ್ಕರ್ ಭಾರತದ ಸ್ಫೂರ್ತಿಯ ಚಿಲುಮೆ: ಡಾ.ಶಿವಕುಮಾರ್

**ಬೀದರ್, ಮಾ. 3:** ಮಾತೋಶ್ರೀ ರಮಾಬಾಯಿ ಅಂಬೇಡ್ಕರ್ ಅವರು ಭಾರತದ ಸ್ಫೂರ್ತಿಯ ಚಿಲುಮೆ ಎಂದು ಅಕ್ಕಾ ಐಎಎಸ್ ಅಕಾಡೆಮಿ ಸಂಸ್ಥಾಪಕ ಡಾ. ಶಿವಕುಮಾರ್ ಅವರು ಹೇಳಿದರು.

ನಗರದ ಜಿಲ್ಲಾ ರಂಗಮಂದಿರದಲ್ಲಿ ಬುದ್ಧ ಬೆಳಕು ಸಾಮಾಜಿಕ, ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್ ಹಾಗೂ ಮನೆ ಮನೆಗೆ ಅಂಬೇಡ್ಕರ್ ಅಭಿಯಾನ ಅನುಷ್ಠಾನ ಸಮಿತಿ ವತಿಯಿಂದ ಮಾತೋಶ್ರೀ ರಮಾಬಾಯಿ ಅಂಬೇಡ್ಕರ್ ಅವರ 128ನೇ ಜಯಂತ್ಯೋತ್ಸವ ಅಂಗವಾಗಿ ಜರುಗಿದ ಐ.ಎ.ಎಸ್./ಕೆ.ಎ.ಎಸ್ ಪರೀಕ್ಷಾ ಸಿದ್ಧತಾ ಕಾರ್ಯಾಗಾರ, ಕಾನೂನು ಅರಿವು ಕಾರ್ಯಕ್ರಮ ಹಾಗೂ ಜಿಲ್ಲಾ ಮಟ್ಟದ ಸಾಂಸ್ಕೃತಿಕ ಸಂಭ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಾತೋಶ್ರೀ ರಮಾಬಾಯಿ ಅಂಬೇಡ್ಕರ್ ಅವರು ಬಾಲ್ಯದಿಂದ ಮುಪ್ಪಿನವರೆಗೆ ಅನೇಕ ಸಂಕಷ್ಟ, ಅನಾರೋಗ್ಯ, ಅವಮಾನಗಳ ನಡುವೆ ಕುಂದದೆ ತಮ್ಮ ಪತಿ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರಿಗೆ ಬೆಂಬಲ ನೀಡಿ ಭವ್ಯ ಭಾರತ ನಿರ್ಮಾಣಕ್ಕೆ ಸ್ಫೂರ್ತಿಯ ಚಿಲುಮೆಯಾಗಿದ್ದಾರೆ ಎಂದರು.



ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಕನಸು ಮಹಿಳೆಯರು, ಕಾರ್ಮಿಕರು, ಶೋಷಿತರು ಹಾಗೂ ಹಿಂದುಳಿದ ವರ್ಗದವರು ಆಳುವ ವರ್ಗವಾಗಬೇಕು ಎನ್ನುವುದಾಗಿತ್ತು. ಆದರೆ ಇಂದು ನಾವು ಶಿಕ್ಷಣ ಮತ್ತು ಜ್ಞಾನಾಭ್ಯಾಸದಲ್ಲಿ ನಿರಂತರ ಪ್ರಯತ್ನದ ಕೊರತೆಯಿಂದ ವಿವಿಧ ಕ್ಷೇತ್ರಗಳಲ್ಲಿ ನಿರೀಕ್ಷಿತ ಸಾಧನೆ ಮಾಡಲು ವಿಫಲರಾಗುತ್ತಿದ್ದೇವೆ. ಎಲ್ಲ ಕ್ಷೇತ್ರಗಳಲ್ಲಿ ಸಾಧನೆ ಮಾಡಿದಾಗ ಮಾತ್ರ ಮಹಾಪುರುಷರಿಗೆ ನಿಜವಾದ ಗೌರವ ಸಲ್ಲಿಸಿದಂತಾಗುತ್ತದೆ ಎಂದು ಅವರು ಹೇಳಿದರು.

ಬೌದ್ಧ ಸಾಹಿತಿ ಗಂಗಾಧರ ಸೋಸಲೆ ಅವರು ಮಾತನಾಡಿ, ರಮಾಬಾಯಿ ಅಂಬೇಡ್ಕರ್ ಅವರ ತ್ಯಾಗ ಮತ್ತು ದಿವ್ಯಶಕ್ತಿಯ ಬಗ್ಗೆ ಸಮಾಜದಲ್ಲಿ ಅರಿವು ಮೂಡಿಸಬೇಕೆಂದರು. ನ್ಯಾಯವಾದಿ ಕೇಶವ ಶ್ರೀಮಾಳೆ ಅವರು ಸಂವಿಧಾನದ ಮಹತ್ವ ಹಾಗೂ ಪೋಕ್ಸೋ ಮತ್ತು ಬಾಲ್ಯವಿವಾಹ ವಿರೋಧಿ ಕಾನೂನುಗಳ ಕುರಿತು ಮಾಹಿತಿ ನೀಡಿದರು.

ಸಂಯೋಜಕ ಮಹೇಶ ಗೋರನಾಳಕರ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಎಲ್ಲ ವರ್ಗದ ಮಕ್ಕಳ ಶೈಕ್ಷಣಿಕ, ಸಾಮಾಜಿಕ ಹಾಗೂ ಆರ್ಥಿಕ ಪ್ರಗತಿಗೆ ಈ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು. ಅಭಿಯಾನ ಸಮಿತಿ ಅಧ್ಯಕ್ಷ ಡಾ. ಕಾಶಿನಾಥ ಚೆಲ್ವಾ ಜಿಲ್ಲಾದ್ಯಂತ 50ಕ್ಕೂ ಹೆಚ್ಚು ಕಡೆ ಅಭಿಯಾನ ನಡೆಸಲಾಗುವುದಾಗಿ ತಿಳಿಸಿದರು.

# ಮಲ್ಲಿಕಾರ್ಜುನ ಮುತ್ಯಾ ಜಾಮೀನು ಅರ್ಜಿ ವಿಚಾರಣೆ ಮಾ.6ಕ್ಕೆ ಮುಂದೂಡಿಕೆ

**ಯಾದಗಿರಿ, ಮಾ.3:** ಮಲ್ಲಿ ಕಾರ್ಜುನ ಮುತ್ಯಾ ವಿರುದ್ಧ ದಾಖಲಾಗಿರುವ ಪೋಕ್ಸೊ ಪ್ರಕರಣಕ್ಕೆ ಸಂಬಂಧಿಸಿದ ನಿರೀಕ್ಷಣಾ ಜಾಮೀನು ಅರ್ಜಿಯ ವಿಚಾ ರಣೆ ವಾದ–ಪ್ರತಿವಾದ ಸಲುವಾಗಿ ಮಾ.6ಕ್ಕೆ ಮುಂದೂಡಲಾಗಿದೆ ಎಂದು ಸಾರ್ವಜನಿಕ ಅಭಿಯೋಜಕ ಗುರು ಲಿಂಗಪ್ಪ ತೇಲಿ ತಿಳಿಸಿದ್ದಾರೆ.



ಯಾದಗಿರಿ ಜಿಲ್ಲಾ ಪ್ರಧಾನ ಸತ್ರ ನ್ಯಾಯಾಲಯದಲ್ಲಿ ನಡೆದ ವಿಚಾರಣೆಯ ವೇಳೆ, ಸರಕಾರದ ಪರ ವಕೀಲರಿಂದ ಆಕ್ಷೇಪಣೆ ಸಲ್ಲಿಕೆಯಾಗಿರುವ ಹಿನ್ನೆಲೆಯಲ್ಲಿ, ನ್ಯಾಯಾಲಯವು ಮುಂದಿನ ವಾದ ಮಂಡನೆಗಾಗಿ ಮಾ.6ರಂದು ದಿನಾಂಕ ನಿಗದಿ ಮಾಡಿದೆ.

## ಒಳಮೀಸಲಾತಿ ಜಾರಿಯಾಗದಿದ್ದರೆ ರಾಜೀನಾಮೆ: ಮುನಿಯಪ್ಪ

ರಾಜ್ಯದಲ್ಲಿ ಎಸ್ಸಿ, ಎಸ್ಟಿ ಸಮುದಾಯ ಗಳಿಗೆ ಒಳಮೀಸಲಾತಿ ಜಾರಿಗಾಗಿ ಒತ್ತಾಯ ಹೆಚ್ಚಾಗಿದೆ. ಈ ಮಸೂದೆಗೂ ಕೆಲ ದಿನಗಳ ಹಿಂದಷ್ಟೇ ರಾಜ್ಯಪಾಲರು ಅಂಕಿತ ಸೂಚಿಸಿದ್ದರು. ಮಾ.15 ಒಳಗಾಗಿ ಒಳಮೀಸಲಾತಿ ಜಾರಿಗೊಳಿಸದೇ ಇದ್ದರೇ ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವುದಾಗಿ ಆಹಾರ ಸಚಿವ ಕೆ.ಎಚ್ ಮುನಿಯಪ್ಪ ಘೋಷಿಸಿದ್ದಾರೆ. ಇಂದು ಬೆಂಗಳೂರಿನ ರಾಜ್ಯಮಟ್ಟದ ಹೋರಾಟಗಾರರ ಸಭೆಯಲ್ಲಿ ಪಾಲ್ಗೊಂಡ ಅವರು, ರಾಜ್ಯ ಸರ್ಕಾರ ದಿಂದ ಎಸ್ಸಿ ಎಸ್ಟಿ ಸಮುದಾಯದವರಿಗೆ ಒಳಮೀಸಲಾತಿ ಜಾರಿಗೊಳಿಸೋ ಸಂಬಂಧ ಅಂತಿಮ ಹಂತದ ಪ್ರಕ್ರಿಯೆ ನಡೆಯುತ್ತಿದೆ. ಈಗಾಗಲೇ ರಾಜ್ಯಪಾಲರು ಮಸೂದೆಗೆ ಅಂಕಿತ ಹಾಕಿರೋದನ್ನು ಸಭೆಯಲ್ಲಿದ್ದವರ ಗಮನಕ್ಕೆ ತಂದರು.

# ಮಲ್ಲಿಕಾರ್ಜುನ ಮುತ್ಯಾ ವಿರುದ್ಧ ಪೋಕ್ಸೋ ಪ್ರಕರಣ ರದ್ದತಿಗೆ ಆಗ್ರಹಿಸಿ ಹೋರಾಟ

**ಕಲಬುರಗಿ, ಮಾ. 3:** ಯಾದಗಿರಿ ಜಿಲ್ಲೆಯ ಮಹಲ್ ರೋಜಾದ ಮಲ್ಲಿಕಾರ್ಜುನ್ ಮುತ್ಯಾ ಅವರ ಮೇಲಿನ ಪೋಕ್ಸೋ ಪ್ರಕರಣ ರದ್ದು ಪಡಿಸಲು ಆಗ್ರಹಿಸಿ ಕೋಲಿ ಕಬ್ಬಲಿಗ ಎಸ್.ಟಿ.ಹೋರಾಟ ಸಮಿತಿ ಹಾಗೂ ಮಲ್ಲಿಕಾರ್ಜುನ ಅಪ್ಪಾಜಿಯವರ ಅಭಿಮಾನಿ ಬಳಗದ ನೇತೃತ್ವದಲ್ಲಿ ಕೋಲಿ ಸಮಾಜ ಕಾರ್ಯಕರ್ತರು ಜಿಲ್ಲಾಧಿಕಾರಿ ಕಚೇರಿ ಮುಂದೆ ಬೃಹತ್ ಪ್ರತಿಭಟನೆ ನಡೆಸಿದರು.

ನಗರದ ಜಗತ್ ವೃತ್ತದಲ್ಲಿ ಸಾವಿರಾರು ಸಂಖ್ಯೆಯಲ್ಲಿ ಸೇರಿದ ಕಾರ್ಯಕರ್ತರು ರಸ್ತೆ ತಡೆ ಚಳುವಳಿ ಮಾಡಿದರು. ನಂತರ ಮೆರವಣಿಗೆಯಲ್ಲಿ ಜಿಲ್ಲಾಧಿಕಾಯಿರಿಗಳ ಕಚೇರಿಯ ವರೆಗೆ ತೆರಳಿರು. ಈ ಸಂದರ್ಭದಲ್ಲಿ ನ್ಯಾಯ ಬೇಕು, ನ್ಯಾಯ ಸಿಗುವವರೆಗೂ ಹೋರಾಟ ನಿಲ್ಲದು ಎಂದು ಪ್ರತಿಭಟನೆಕಾರರು ಘೋಷಣೆ ಹಾಕಿದರು.

ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ನಡೆದ ಪ್ರತಿಭಟನಾ ಸಭೆಯಲ್ಲಿ ರಾಜ್ಯ ವಿಧಾನ ಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರ್ ಅವರು ಮಾತನಾಡಿ, ನಡೆದಾಡುವ ದೇವರು ಮಲ್ಲಿಕಾರ್ಜುನ್ ಮುತ್ಯಾ ಅವರ ವಿರುದ್ಧ ಪೋಕ್ಸೋ ಪ್ರಕರಣ ಹಾಕಿರುವುದಕ್ಕೆ ಮುಖ್ಯಮಂತ್ರಿ, ಗೃಹ ಸಚಿವರು ಹಾಗೂ ಬಿಜೆಪಿ ಸೇರಿದಂತೆ ಸರ್ವ ಪಕ್ಷಗಳ ಶಾಸಕರು ಖಂಡಿಸಿದ್ದಾರೆ. ಕೇವಲ ವಾಟ್ಸಪ್ ಮತ್ತು ಫೇಸ್‌ಬುಕ್ ಮೂಲಕ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ್ ಕೋಸಂಬೆ ಅವರು ಪೋಕ್ಸೋ ಪ್ರಕರಣ ದಾಖಲಿಸಲು ಸೂಚನೆ ನೀಡಿದ್ದು ಖಂಡನಾರ್ಹ. ಅವರು ಆ ಹುದ್ದೆಗೆ ಸೂಕ್ತ ಅಲ್ಲ. ಕೂಡಲೇ ಅವರನ್ನು ಆ ಹುದ್ದೆಯಿಂದ ತೆಗೆದುಹಾಕಬೇಕೆಂದು ಒತ್ತಾಯಿಸಿದರು.



ಭಕ್ತ ದಂಪತಿಯು ತಮ್ಮ ಪುತ್ರಿಯ ಹುಟ್ಟುಹಬ್ಬದ ಆಶೀರ್ವಾದ ಪಡೆಯಲು ಹೋದಾಗ ಮುತ್ಯಾ ಮಗುವನ್ನು ಮುದ್ದು ಮಾಡಿದ್ದಾರೆ. ಅದು ಅಪರಾಧ ಆಗದು. ಮನೆಯವರು ಯಾರೂ ದೂರು ಸಹ ಸಲ್ಲಿಸಿಲ್ಲ. ಒಂದು ವೇಳೆ ಆ ರೀತಿ ಘಟನೆ ಸಂಭವಿಸಿದ್ದರೆ ಕೂಡಲೇ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದವರು ಸ್ಥಳಕ್ಕೆ ಭೇಟಿ ನೀಡಿ ಖುದ್ದು ಪರಿಶೀಲನೆ ಮಾಡಬೇಕಿತ್ತು. ಅದಾವುದನ್ನೂ ಶಶಿಧರ್ ಕೋಸಂಬೆ ಅವರು ಮಾಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಕೋಲಿ ಸಮಾಜದವರು ಎದ್ದರೆ ರಾಷ್ಟ್ರ, ರಾಜ್ಯ ಹಾಗೂ ಜಿಲ್ಲೆ ಉಳಿಯುವುದಿಲ್ಲ. ಬರುವ ಬಜೆಟ್ ಅಧಿವೇಶನದಲ್ಲಿ ಈ ಕುರಿತು ಚರ್ಚೆ ಮಾಡುವೆ. ಕೂಡಲೇ ಮುಖ್ಯಮಂತ್ರಿಗಳು ಸಚಿವ ಸಂಪುಟದ ಸಭೆಯಲ್ಲಿ ಮಲ್ಲಿಕಾರ್ಜುನ ಮುತ್ಯಾ ಅವರ ವಿರುದ್ಧದ ಸುಳ್ಳು ಪ್ರಕರಣ ರದ್ದುಗೊಳಿಸಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಸಾಮಾಜಿಕ ಜಾಲತಾಣಗಳೂ ಸಹ ತಮ್ಮ ಜವಾಬ್ದಾರಿಯನ್ನು ಮರೆಯುತ್ತಿವೆ. ಒಳ್ಳೆಯ ಸಂಗತಿಯನ್ನು ಕೆಟ್ಟ ರೀತಿಯಲ್ಲಿ ಬಿಂಬಿಸುತ್ತಿವೆ. ಇದು ಸರಿಯಲ್ಲ. ಹಣದಾಸೆಗಾಗಿಯೋ ಇಲ್ಲವೇ ಯಾರನ್ನೋ ಮೆಚ್ಚಿಸಲು ಈ ರೀತಿಯ ಸುಳ್ಳು ಪ್ರಚಾರವನ್ನು ಸಾಮಾಜಿಯಿಕ ಜಾಲತಾಣಗಳಲ್ಲಿ ಹರಿಬಿಡಲಾಗುತ್ತಿದೆ. ಆ ಕುರಿತೂ ಸಹ ರಾಜ್ಯ ಸರ್ಕಾರವು ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದರು.

ರಾಜ್ಯ ಕೋಲಿ ಕಬ್ಬಲಿಗ ಎಸ್‌ಟಿ ಹೋರಾಟ ಸಮಿತಿಯ ರಾಜ್ಯಾಧ್ಯಕ್ಷ ಲಚ್ಚಪ್ಪ ಎಸ್. ಜಮಾದಾರ್ ಅವರು ಮಾತನಾಡಿ, ಮಲ್ಲಿಕಾರ್ಜುನ್ ಮುತ್ಯಾ ಅವರ ಜನಪ್ರೀಯತೆಯನ್ನು ಸಹಿಸದೇ ದೂರುದಾರರು ಅಪಪ್ರಚಾರ ಮಾಡುತ್ತಿದ್ದಾರೆ. ಕೂಡಲೇ ಅಂತವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ನಂತರ ಪ್ರತಿಭಟನೆಕಾರರು ಅಪರ ಜಿಲ್ಲಾಧಿಕಾರಿಗಳ ಮೂಲಕ ರಾಜ್ಯಪಾಲಯಿರಿಗೆ ಮನವಿ ಪತ್ರ ಸಲ್ಲಿಸಿ, ಮಲ್ಲಿಕಾರ್ಜುನ್ ಮುತ್ಯಾ ಅವರ ವಿರುದ್ಧ ಸೂಕ್ತ ತನಿಖೆ ಕೈಗೊಳ್ಳದೆ ದುರುದ್ದೇಶದಿಂದ ದೂರು ದಾಖಲಿಸಿದವರ ವಿರುದ್ಧ ಸೂಕ್ತ ತನಿಖೆ ಮಾಡಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಮಲ್ಲಿಕಾರ್ಜುನ್ ಮುತ್ಯಾ ಅವರ ತಂದೆ ದಿ. ಹಣಮಂತರಾಯ ಅವರಿಗೆ ಕಲ್ಯಾಣ ಕರ್ನಾಟಕ ಭಾಗದ ದೇವರೆಂದು ಅಸಂಖ್ಯಾತ ಭಕ್ತರು ಪೂಜಿಸುತ್ತಿದ್ದು, ಅವರ ನಿಧನದ ನಂತರ ಅವರ ಎರಡನೇ ಪುತ್ರ ಮಲ್ಲಿಕಾರ್ಜುನ್ ಮುತ್ಯಾ ರವರಿಗೂ ಸಹ ಅವರ ತಂದೆಯಂತೆಯೇ ಅಪಾರ ಸಂಖ್ಯೆಯಲ್ಲಿ ಭಕ್ತರು ನಂಬಿದ್ದು, ಈ ಭಾಗದ ನಡೆದಾಡುವ ದೇವರೆಂದೇ ಅವರನ್ನು ಪೂಜಿಸುತ್ತಾರೆ. ಶಹಾಪುರ ತಾಲ್ಲೂಕಿನ ಮಹಲ್ ರೋಜ್ ರಾಜಾಭಾಗಸವರ ಚಾಂಗದೇವ, ಯಮನೂರಪ್ಪ ಮುತ್ಯಾ ಸಂಸ್ಥಾನ ಮಠದಲ್ಲಿ ಪ್ರತಿ ವರ್ಷ ಮೊಹರಂ ಆಚರಣೆ ಅತೀ ವಿಜೃಂಭಣೆಯಿಂದ ನಡೆಯುತ್ತಿದ್ದು, ಲಕ್ಷಾಂತರ ಭಕ್ತರು ತೆಲಂಗಾಣ ಆಂಧ್ರ ದಿಂದಲೂ ಬರುತ್ತಾರೆ. ಅದೆ ರೀತಿ ಪ್ರತಿ ವರ್ಷ ಮಾರ್ಚ ತಿಂಗಳಲ್ಲಿ ಜಾತ್ರಾ ಮಹೋತ್ಸವ ಕೂಡ ನಡೆಯುತ್ತದೆ. ಈ ಸಂಧರ್ಭದಲ್ಲಿ ಆ ಭಾಗದ ರೈತರಿಗೆ ಅನುಕೂಲವಾಗಲೆಂದು ದೊಡ್ಡ ಪ್ರಮಾಣದಲ್ಲಿ ಎತ್ತುಗಳ ಜಾತ್ರೆ ನಡೆಯುತ್ತದೆ ಎಂದು ಅವರು ಮುತ್ಯಾ ಕುರಿತು ಶ್ಲಾಘಿಸಿದರು.

ಅದೇ ರೀತಿ ಬಡವರಿಗೆ ಅನುಕೂಲವಾಗಲೆಂದು ಪ್ರತಿ ವರ್ಷ ಸಾಮೂಹಿಕ ವಿವಾಹವನ್ನು ಸಹ ಉಚಿತವಾಗಿ ಮಠದ ವತಿಯಿಂದ ನಡೆಸಿಕೊಂಡು ಬರುತ್ತಿದ್ದು, ಅನೇಕ ಸಾಮಾಜಿಕ, ಧಾರ್ಮಿಕ ಕಾರ್ಯಕ್ರಮಗಳು ಸಹ ಮಠದ ವತಿಯಿಂದ ನಡೆಯುತ್ತಿದ್ದು, ಕಲ್ಯಾಣ ಕರ್ನಾಟಕ ಭಾಗದಲ್ಲಿಯೇ ಪ್ರಸಿದ್ಧ ಮಠವಾಗಿದೆ. ಇದನ್ನು ಸಹಿಸದ ಪಟ್ಟಭದ್ರ ಹಿತಾಸಕ್ತಿಗಳು ಕುತಂತ್ರ ಮಾಡಿ ಮಲ್ಲಿಕಾರ್ಜುನ್ ಮುತ್ಯಾ ಏಳಿಗೆಯನ್ನು ಸಹಿಸದೆ ಅವರ ಹೆಸರನ್ನು ಕೆಡಿಸಿ ತೇಜೋವಧೆ ಮಾಡಿ ಅವರ ಗೌರವಕ್ಕೆ ಧಕ್ಕೆ ತರುವ ಪ್ರಯತನ್ನವನ್ನು ಷಡ್ಯಂತ್ರ ಮಾಡಿ ಸಾಮಾಜಿಕ ಜಾಲತಾಣದಲ್ಲಿ ಅವರ ವಿರುದ್ಧ ಅಪಪ್ರಚಾರ ಮಾಡುತ್ತಾ ಬರುತ್ತಿದ್ದಾರೆ ಎಂದು ಅವರು ದೂರಿದರು.

## ಒಗ್ಗಟ್ಟಿನಿಂದ ಎಸ್‌ಐಆರ್ ಪ್ರತಿರೋಧಿಸಿ: ಶಿವಸುಂದರ್ ಕರೆ


ಕಲಬುರಗಿ, ಮಾ. 3: ಚುನಾವಣಾ ಆಯೋಗ ನಡೆಸುತ್ತಿರುವ ಎಸ್‌ಐಆರ್ ಎಂದರೆ ಸಾಮಾನ್ಯ ಪರಿಷ್ಕರಣೆ ಅಲ್ಲ. ಇದು ಅಲ್ಪಸಂಖ್ಯಾತರು, ಆದಿವಾಸಿಗಳು, ದಲಿತರು, ಮಹಿಳೆ ಯರು ಮತ್ತು ಇತರೆ ಹಿಂದುಳಿದ ವರ್ಗಗಳ ಮೇಲೆ ನಡೆಸುತ್ತಿರುವ ವ್ಯವಸ್ಥಿತ ಯುದ್ಧ. ಈ ಯುದ್ಧಕ್ಕೆ ಒಗ್ಗಟ್ಟಿನಿಂದ ಪ್ರತಿರೋಧ ತೋರಿಸದಿ ದ್ದರೆ, ನಮ್ಮದೇ ದೇಶದಲ್ಲಿ ನಾವು ದ್ವಿತೀಯ ದರ್ಜೆ ನಾಗರಿಕರಾಗಿ ಬದುಕಬೇಕಾದ ಪರಿಸ್ಥಿತಿ ಬರುತ್ತದೆ ಎಂದು ಚಿಂತಕ ಶಿವಸುಂದರ್ ಎಚ್ಚರಿಕೆ ನೀಡಿದರು.




ನಗರದ ಕನ್ನಡ ಭವನದಲ್ಲಿ ಸಂವಿಧಾನ ರಕ್ಷಣಾ ಸಮಿತಿ ಹಾಗೂ ಎದ್ದೇಳು ಕರ್ನಾಟಕ ಸಂಸ್ಥೆ ಹಮ್ಮಿ ಕೊಂಡಿದ್ದ ಎಸ್‌ಐಆರ್ ಪರಿಣಾಮ–ಸವಾಲು ಸಂವಾದ ಗೋಷ್ಠಿಯಲ್ಲಿ ಮಾತನಾಡಿದ ಅವರು, ಚುನಾವಣಾ ಆಯೋಗ ಕೈಗೊಂಡಿರುವ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಬಡವರ ವಿರುದ್ಧದ ಅಘೋಷಿತ ಯುದ್ಧವಾಗಿದೆ. ಇದು ದಲಿತರು, ಹಿಂದುಳಿದವರು, ಅಲ್ಪಸಂಖ್ಯಾತರು ಮತ್ತು ಮಹಿಳೆಯರನ್ನು ಗುರಿಯಾಗಿಸಿಕೊಂಡಿದೆ. ಎಸ್‌ಐಆರ್ ಕೇವಲ ಮತದಾರರ ಪಟ್ಟಿಯ ಪರಿಷ್ಕರಣೆ ಅಲ್ಲ, ಬದಲಿಗೆ ಅಂಚಿನ ಸಮುದಾಯಗಳ ವಿರುದ್ಧ ನಡೆಸುತ್ತಿರುವ ಸಂಚಿನ ಭಾಗವಾಗಿದೆ ಎಂದು ದೂರಿದರು.

ಎಸ್‌ಐಆರ್ ಹಿಂದೆ ರಾಜಕೀಯ ಉದ್ದೇಶಗಳಿವೆ ಎಂದು ಆರೋಪಿಸಿದ ಅವರು, ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಸಾಂವಿಧಾನಿಕ ಸಂಸ್ಥೆಗಳನ್ನು ಚುನಾ ವಣಾ ಲಾಭಕ್ಕಾಗಿ ಬಳಸಿಕೊಳ್ಳುತ್ತಿದೆ. ಎಸ್‌ಐಆರ್ ಪ್ರಕ್ರಿಯೆ ಮತದಾರರ ಪಟ್ಟಿಯನ್ನು ನವೀಕರಿಸುವುದಕ್ಕಿಂತ ಹೆಚ್ಚಾಗಿ ನಾಗರಿಕತ್ವವನ್ನು ಪರೀಕ್ಷಿಸುವ ಕ್ರಮವಾಗಿ ಪರಿಣಮಿಸಿದೆ. ಸಾಮಾನ್ಯ ಪರಿಷ್ಕರಣೆಯಲ್ಲಿ ಬೂತ್ ಮಟ್ಟದ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ ಯಾರಾದರೂ ಮತದಾರರು ನಿಧನರಾಗಿದ್ದಾರೆಯೇ? ಸ್ಥಳಾಂತರ ಗೊಂಡಿದ್ದಾರೆಯೇ? ಅಥವಾ ಹೊಸ ಮತದಾರ ಅರ್ಹರಾಗಿದ್ದಾರೆಯೇ ಎಂಬುದನ್ನು ಪರಿಶೀಲಿಸುತ್ತಾರೆ. ಆದರೆ, ಎಸ್‌ಐಆರ್‌ನಲ್ಲಿ ನೀವು ಭಾರತೀಯ ನಾಗರಿಕರೇ ಎಂಬ ಪ್ರಶ್ನೆಯನ್ನು ಆರಂಭದಲ್ಲೇ ಕೇಳಲಾ ಗುತ್ತಿದೆ. ಬಹುತೇಕ ಆದಿವಾಸಿಗಳು, ಅಲ್ಪಸಂಖ್ಯಾ ತರು, ಬಡವರು ಮತ್ತು ಮಹಿಳೆಯರ ಬಳಿ ಕೇಳಲಾಗುತ್ತಿರುವ ದಾಖಲೆಗಳು ಇಲ್ಲ. ಇದು ಮುಂದು ವರಿದರೆ ಅನೇಕರ ಮತ ಹಕ್ಕು ಕಳೆದುಹೋಗುವ ಸಾಧ್ಯತೆ ಇದೆ. ಭಾರತದ ಸಂವಿಧಾನ ರೂಪಿಸಿದ ಮಹನೀಯರು ಸಮಾನತೆ ಮತ್ತು ಸ್ವಾತಂತ್ರ್ಯವನ್ನು ಖಾತ್ರಿ ಮಾಡುವ ಪ್ರಜಾಸತ್ತಾತ್ಮಕ, ಸಮಾಜವಾದಿ ಗಣರಾಜ್ಯದ ಕನಸು ಕಂಡಿದ್ದರು. ಎಸ್‌ಐಆರ್ ಈ ಸಂವಿಧಾನಿಕ ಮೌಲ್ಯಗಳನ್ನು ದುರ್ಬಲಗೊಳಿಸುವ ಸಂಚಾಗಿದೆ. ಎಸ್‌ಐಆರ್ ಕೇವಲ ಮತದಾರರ ಪಟ್ಟಿಯ ಪರಿಷ್ಕರಣೆ ಅಲ್ಲ. ಇದು ಪ್ರಜಾಸತ್ತಾತ್ಮಕ ಹಾಗೂ ನಾಗರಿಕ ಹಕ್ಕುಗಳ ಹತ್ಯೆ. ಇತರೆ ರಾಜ್ಯಗಳ ಅಂಕಿ ಅಂಶಗಳನ್ನು ಉಲ್ಲೇಖಿಸಿದ ಅವರು, ಬಿಹಾರದಲ್ಲಿ 65 ಲಕ್ಷ, ತಮಿಳುನಾಡಿನಲ್ಲಿ 74 ಲಕ್ಷ ಹಾಗೂ ಉತ್ತರ ಪ್ರದೇಶದಲ್ಲಿ ಸುಮಾರು 3 ಕೋಟಿ ಮತದಾರರನ್ನು ಎಸ್‌ಐಆರ್ ಮೂಲಕ ಮತದಾರರ ಪಟ್ಟಿಯಿಂದ ಹೊರಗಿಡ ಲಾಗಿದೆ. ಇವರಲ್ಲಿ ಬಹುತೇಕರು ಮುಸ್ಲಿಮರು ಅಥವಾ ಆಡಳಿತ ಪಕ್ಷದ ವಿರೋಧಿಗಳು ಎಂದು ವಿವರಿಸಿದರು.

ಎಸ್‌ಐಆರ್ ಮೂಲಕ ಆಡಳಿತ ಪಕ್ಷ ತನ್ನ ವಿರೋಧಿಗಳನ್ನು ಮತದಾರರ ಪಟ್ಟಿಯಿಂದ ಅಳಿಸಿ ಚುನಾವಣೆಯಲ್ಲಿ ಸುಲಭವಾಗಿ ಗೆಲ್ಲಲು ಯತ್ನಿಸುತ್ತಿದೆ. ಇದು ಹಗಲಿನಲ್ಲಿ ನಡೆಯುತ್ತಿರುವ ಪ್ರಜಾಪ್ರಭುತ್ವದ ಹತ್ಯೆಯಾಗಿದೆ. ಸಂವಿಧಾನ ಮತ್ತು ಪ್ರಜಾಸತ್ತಾತ್ಮಕ ವ್ಯವಸ್ಥೆಯನ್ನು ರಕ್ಷಿಸಲು ಇದಕ್ಕೆ ತೀವ್ರ ವಿರೋಧ ವ್ಯಕ್ತಪಡಿಸಬೇಕು. ನಾಗರಿಕ ಸಮಾಜ ಸಂಸ್ಥೆಗಳು, ವಿದ್ಯಾರ್ಥಿಗಳು, ಯುವಜನರು ಹಾಗೂ ಪ್ರಗತಿಪರ ಸಂಘಟನೆಗಳು ಒಗ್ಗಟ್ಟಿನಿಂದ ಜನರನ್ನು ಜಾಗೃತಿಗೊಳಿಸಿ ಹೋರಾಟ ನಡೆಸಬೇಕು ಎಂದು ಅವರು ಮನವಿ ಮಾಡಿದರು.



ಚಿಕ್ಕಮಗಳೂರಿನ ಚಂದ್ರದ್ರೋಣ ಬೆಟ್ಟದ ಶ್ರೇಣಿಯಲ್ಲಿರುವ ಸೀತಾಳಯ್ಯನಗಿರಿ ಎಂದು ಸಾಮಾನ್ಯವಾಗಿ ಕರೆಯಲ್ಪಡುವ ಸೀತಾಳ ಮಲ್ಲಿಕಾರ್ಜುನ ಸ್ವಾಮಿ ದೇವಾಲಯದ ರಥೋತ್ಸವ ಮಂಗಳವಾರ ಭಕ್ತರನ್ನು ಆಕರ್ಷಿಸಿತು.

## 40 ಬಾಲ ಗರ್ಭಿಣಿಯರು ಪತ್ತೆ: ರೇವತಿ ಹೊಸಮಠ




**ಹಾವೇರಿ, ಮಾ. 3:** ಜಿಲ್ಲೆಯಲ್ಲಿ 2025ರ ಏಪ್ರಿಲ್‌ನಿಂದ 2026ರ ಜನವರಿ ವರೆಗೆ 40 ಬಾಲಗರ್ಭಿಣಿಯರು ಪತ್ತೆಯಾಗಿದ್ದಾರೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ರೇವತಿ ಎಸ್. ಹೊಸಮಠ ತಿಳಿಸಿದರು.

ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ 52 ಬಾಲ್ಯ ವಿವಾಹಗಳನ್ನು ತಡೆಯಲಾಗಿದೆ. ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ತಡೆ (ಪೋಕ್ಸೊ) ಕಾಯ್ದೆ ಹಾಗೂ ಬಾಲ್ಯ ವಿವಾಹಕ್ಕೆ ಸಂಬಂಧಪಟ್ಟಂತೆ, 35 ಪ್ರಕರಣ ಕಂಡುಬಂದಿದೆ. ಬಾಲ್ಯ ವಿವಾಹ ಹಾಗೂ ಪೋಕ್ಸೊ ಪ್ರಕರಣಗಳ ತಡೆಗೆ ಸೇರಿದಂತೆ ಮಕ್ಕಳ ರಕ್ಷಣೆ ಕಾಯ್ದೆಗಳ ಕುರಿತು ಗ್ರಾಮ ಪಂಚಾಯಿತಿ ಅಧಿಕಾರಿ, ಅಂಗನವಾಡಿ ಕಾರ್ಯಕರ್ತೆ ಯರು, ಶಾಲಾ ಶಿಕ್ಷಕರಿಗೆ ಈ ಕಾರ್ಯಾಗಾರ ಮಾಡಲಾಗಿದೆ. ಮಕ್ಕಳ ರಕ್ಷಣೆಯಲ್ಲಿ ವಸತಿ ನಿಲಯಗಳ ಮೇಲ್ವಿಚಾರಕರ ಜವಾಬ್ದಾರಿ ಹೆಚ್ಚಿದೆ ಎಂದರು.

ಕಾರ್ಯಾಗಾರ ಉದ್ಘಾಟಿಸಿದ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶೇಖರಗೌಡ ರಾಮತ್ನಾಳ, ಮಕ್ಕಳ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸು ವವರು, ಮಕ್ಕಳ ರಕ್ಷಣೆಗೆ ಪ್ರಮುಖ ಆದ್ಯತೆ ನೀಡಬೇಕು. ರಾಜ್ಯ ಮಕ್ಕಳ ರಕ್ಷಣಾ ನೀತಿ ತಿಳಿದುಕೊಂಡು ಸಂಪೂರ್ಣ ಅನುಷ್ಠಾನ ಮಾಡಿದಾಗ ಮಾತ್ರ ಮಕ್ಕಳ ರಕ್ಷಣೆ ಹಾಗೂ ಮಕ್ಕಳ ಕ್ಷೇತ್ರದಲ್ಲಿ ಕೆಲಸ ಮಾಡುವವರ ರಕ್ಷಣೆ ಸಾಧ್ಯ ಎಂದರು.

ಇಂದಿನ ಪೋಕ್ಸೊ ಪ್ರಕರಣಗಳಲ್ಲಿ ಆರೋಪಿಗಳು, 25 ವರ್ಷದಿಂದ 75 ವರ್ಷ ವಯಸ್ಸಿನವರಿದ್ದಾರೆ. ಮಕ್ಕಳ ಕಾಯ್ದೆಗಳೂ ದುರುಪಯೋಗವಾಗುತ್ತಿರುವ ಆರೋಪಗಳೂ ಇವೆ. ಮಕ್ಕಳ ರಕ್ಷಣೆಗೆ ಎಲ್ಲರೂ ಸಮನ್ವಯದೊಂದಿಗೆ ಕಾರ್ಯನಿರ್ವಹಿಸಬೇಕು. ಮಕ್ಕಳ ಶಿಕ್ಷಣ, ಬಿಸಿಯೂಟದ ಆದ್ಯತೆ ಜೊತೆಗೆ ಮಕ್ಕಳ ರಕ್ಷಣೆಗೆ ಆದ್ಯತೆ ನೀಡುವುದು ಅತ್ಯಗತ್ಯವಾಗಿದೆ ಎಂದರು.

## ನಾಟಕಗಳು ವ್ಯಕ್ತಿಯ ಭಾವನೆಗಳಿಗೆ ಜೀವ ತುಂಬುತ್ತವೆ-ಜನಾರ್ದನ



**ಬಳ್ಳಾರಿ ಮಾ 03.** ನಾಟಕವು ವ್ಯಕ್ತಿಯ ಭಾವನೆಗಳಿಗೆ ಜೀವ ತುಂಬುತ್ತದೆ. ಇಂತಹ ನಾಟಕಗಳಿಗೆ ಸಹಾಯ ಸಹಾಕಾರ ಅವಶ್ಯಕತೆಯಿದೆ ಎಂದು ಜನಾರ್ದನ, ಸರ್ಕಾರಿ ವಕೀಲರು ನುಡಿದರು.

ಯಾವುದೇ ಕಾರ್ಯಕ್ರಮ ಯಶಸ್ವಿಯಾಗಲು ಪ್ರೇಕ್ಷಕರ ಸಹಕಾರ ಬಹುಮುಖ್ಯ ಉತ್ತಮ ಗುಣಮಟ್ಟದ ನಾಟಕ ಪ್ರದರ್ಶನವಾದರೆ ಖಂಡಿತವಾಗಿ ಪ್ರೇಕ್ಷಕರು ರಂಗ ಮಂದಿರದ ಕಡೆ ಬರುತ್ತಾರೆ ಎಂದರು.

ನಮ್ಮ ಸಂಸ್ಕೃತಿಯನ್ನು ಉಳಿಸಿ ಬೆಳಸುವಲ್ಲಿ ವಿದ್ಯಾರ್ಥಿಗಳ ಪಾಲು

ಬಹು ದೊಡ್ಡದು ನಾಟಕದಲ್ಲಿ ಅಭಿನಯಿಸುವುದರಿಂದ ವಿದ್ಯಾರ್ಥಿಗಳ ಕೌಶಲ್ಯ ಬೆಳೆಯುತ್ತದೆ.

45 ವರ್ಷ ಹಿಂದೆ ಸ್ಥಾಪನೆಯಾದ ಈ ಸಂಸ್ಥೆಯು ಈಗ ಉನ್ನತ ಮಟ್ಟದಲ್ಲಿದೆ ನಾಟಕ ಕಲೆಯನ್ನು ಜೀವಂತವಾಗಿ ಉಳಿಸುವಲ್ಲಿ ಇದರ ಪಾತ್ರ ಸಾಕಷ್ಟಿದೆ ಎಂದು ಸಮತಾ ಸಾಹಿತಿ ಟ್ರಸ್ಟ್ ಅಧ್ಯಕ್ಷ ಡಾಕ್ಟರ್ ಕೆ.ಸುರೇಂದ್ರ ಬಾಬು ನುಡಿದರು.

### ಸ್ವಾತಂತ್ರ್ಯ ಹೋರಾಟಗಾರರ ಉಪನ್ಯಾಸ

## ರಜಾಕಾರರಿಗೆ ಕುಳಗೇರಿಯವರು ಸಿಂಹಸ್ವಪ್ನ: ಡಾ.ಸತ್ಯಂಪೇಟೆ ಸ್ಮರಣೆ




**ಕಲಬುರಗಿ, ಮಾ. 3:** ಸ್ವಾತಂತ್ರ್ಯ ಹೋರಾಟಗಾರರು, ಸಹಕಾರಿ ಧುರೀಣರೂ ಆಗಿದ್ದ ದಿವಂಗತ ಚನ್ನಬಸಪ್ಪ ಕುಳಗೇರಿ ಅವರು, ಹೈದರಾಬಾದ ರಜಾಕಾರರ ವಿರುದ್ಧ ಹೇಗೆ ಹೋರಾಡಿದರೋ ಅದೇರೀತಿ ಸ್ವಜನಪಕ್ಷಪಾತ, ವಂಚನೆ, ಭ್ರಷ್ಟಾಚಾರ, ಕಾಳಸಂತೆ ಮಾರಾಟಗಳ ವಿರುದ್ಧವೂ ಸಿಡಿದೆದ್ದಿರು. ಸ್ವಾತಂತ್ರ್ಯ ಹೋರಾಟದಲ್ಲಿ ರಜಾಕರರಿಗೆ ಅವರು ಸಿಂಹಸ್ವಪ್ನವಾಗಿದ್ದರು ಎಂದು ಹಿರಿಯ ಪತ್ರಕರ್ತ–ಲೇಖಕ ಡಾ. ಶಿವರಂಜನ್ ಸತ್ಯಂಪೇಟೆ ಹೇಳಿದರು.

ನಗರದ ಹೈದ್ರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಮಹಿಳಾ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಮಹಿಳಾ ವಿಜ್ಞಾನ, ವಾಣಿಜ್ಯ ಕಾಲೇಜಿನ ಸಹಯೋಗದಲ್ಲಿ ಆಯೋಜಿಸಿದ್ದ ಸ್ವಾತಂತ್ರ್ಯ ಹೋರಾಟಗಾರರ ಉಪನ್ಯಾಸ ಮಾಲಿಕೆಯಲ್ಲಿ ಹೈದ್ರಾಬಾದ್ ಸಂಸ್ಥಾನ ವಿಮೋಚನಾ ಹೋರಾಟಗಾರ ಚನ್ನಬಸಪ್ಪ ಕುಳಗೇರಿ ಕುರಿತು ಮಾತನಾಡಿದ ಅವರು, ಕುಳಗೇರಿಯವರು ಹೈದ್ರಾಬಾದ್ ಶಿಕ್ಷಣ ಸಂಸ್ಥೆಯ ಬೆಳವಣಿಗೆಗೂ ಕಾರಣರಾಗಿದ್ದರು ಎಂದು ತಿಳಿಸಿದರು.

ನಿಜಾಮ್ ಅರಸು ಮೀರ್ ಉಸ್ಮಾನ ಅಲಿ ಖಾನ್ ಸಂಸ್ಥಾನದ ರಜಾಕಾರರ 'ಕಾಟೋ, ಲೂಟೋ, ಬಾಟೋ' ವಿರುದ್ಧ ಕ್ವಿಟ್ ಕಾಲೇಜ್, ಟಿಟ್ ಫಾರ್ ಟ್ಯಾಟ್ ಚಳವಳಿ ರೂಪಿಸಿ ಕರ್ನಾಟಕದ ಚಂದ್ರಶೇಖರ ಆಜಾದ್ ಎಂದೇ ಗುರುತಿಸಿ ಕೊಂಡಿದ್ದರು. ರಜಾಕಾರರಿಗೆ ಸಿಂಹಸ್ವಪ್ನವಾಗಿದ್ದರು ಎಂದು ಆ ಸಂದರ್ಭದ ರೋಚಕ ಇತಿಹಾಸವನ್ನು ಅವರು ವಿವರಿಸಿದರು.

ಮುಖ್ಯ ಅತಿಥಿಗಳಾಗಿದ್ದ ಅಮರನಾಥ ಪಾಟೀಲ್ ಕುಳಗೇರಿ ಅವರು ಮಾತನಾಡಿ, ಹೈದ್ರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಮಹಾದೇವಪ್ಪ ರಾಂಪುರೆ ಯವರ ಸಲಹೆಗಾರರಾಗಿದ್ದ ಜಿ.ಆರ್. ಪಾಟೀಲ,ಸೂರಜ್ ಮಲ್ಲ ಲಾಹೋಟಿ, ಗಂಗಸಿರಿ, ಸಿದ್ದಪ್ಪ ಮರಗೋಳ್, ಭೂಮರೆಡ್ಡಿ, ಹೋಮಿ ಇರಾಣಿ ಮುಂತಾದ ಮುಖ್ಯರಲ್ಲಿ ನಮ್ಮ ತಂದೆ ಚನ್ನಬಸಪ್ಪ ಕುಳಗೇರಿ ಕೂಡ ಒಬ್ಬರಾಗಿದ್ದರು. ವಿ.ಜಿ. ಮಹಿಳಾ ಕಾಲೇಜು, ಮೆಡಿಕಲ್ ಕಾಲೇಜಿನ ವಸತಿ ಗೃಹ ಆರಂಭಿಸಲು ಅವರು ಸಲಹೆ ನೀಡಿದ್ದರು ಎಂಬುದನ್ನು ಸ್ಮರಿಸಿಕೊಂಡರು.

## ವೈದ್ಯಕೀಯ ಸೇವಾ ಕ್ಷೇತ್ರ ಬೆಳೆದಂತೆ, ನರ್ಸಿಂಗ್ ಸೇವೆಗೂ ಬೇಡಿಕೆ ಹೆಚ್ಚಳ: ಸಚಿವ ಡಾ.ಶರಣಪ್ರಕಾಶ

**ಯಾದಗಿರಿ, ಮಾ. 3:** ಆಧುನಿಕ ಜಗತ್ತಿನಲ್ಲಿ ವೈದ್ಯಕೀಯ ಸೇವಾ ಕ್ಷೇತ್ರ ಬೆಳೆದಂತೆ ಭಾರತ ಸೇರಿದಂತೆ ವಿದೇಶದಲ್ಲೂ ನರ್ಸಿಂಗ್ ಸೇವೆಗೆ ಹೆಚ್ಚಿನ ಬೇಡಿಕೆ ಇದೆ ಎಂದು ವೈದ್ಯಕಿಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ್ ಹೇಳಿದರು.



ನಗರದ ವೈದ್ಯಕಿಯ ವಿಜ್ಞಾನಗಳ ಸಂಸ್ಥೆ ವ್ಯಾಪ್ತಿಯಲ್ಲಿ 2025–26ನೇ ಸಾಲಿನ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಅನುದಾನದಡಿ ಒಟ್ಟು 9.86 ಕೋ.ರೂ ವೆಚ್ಚದ ನೂತನ ನರ್ಸಿಂಗ್ ಕಾಲೇಜು ಕಟ್ಟಡ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ರಾಜ್ಯದಲ್ಲಿರುವ ಸರ್ಕಾರಿ ವೈದ್ಯಕಿಯ ಕಾಲೇಜುಗಳ ವ್ಯಾಪ್ತಿಯಲ್ಲಿ ನರ್ಸಿಂಗ್ ಕಾಲೇಜು ಸ್ಥಾಪಿಸುವ ಉದ್ದೇಶ ರಾಜ್ಯ ಸರ್ಕಾರ ಹೊಂದಿದೆ.

ಭಾರತ ಸೇರಿ ವಿದೇಶದಲ್ಲಿ ನರ್ಸಿಂಗ್ ಸೇವೆಗೆ ಹೆಚ್ಚಿನ ಬೇಡಿಕೆ ಇರುವುದನ್ನು ಮನಗಂಡು ಎಲ್ಲೆಲ್ಲಿ ವೈದ್ಯಕಿಯ ಕಾಲೇಜುಗಳವೆಯೋ ಅಲ್ಲಿ ನರ್ಸಿಂಗ್ ಕಾಲೇಜು ಸ್ಥಾಪನೆಗೆ ನಮ್ಮ ಸರ್ಕಾರ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.ಮಕ್ಕಳಿಗೆ ಇದೊಂದು ಅತ್ಯುತ್ತಮ ತರಬೇತಿ, ಮೂಲಸೌಕರ್ಯ ಹಾಗೂ ಆಸ್ಪತ್ರೆಗಳಿಗೂ ನೆರವಾಗಲಿದೆ. ಈ ಹಿನ್ನೆಲೆಯಲ್ಲಿ ಜೇವರ್ಗಿ, ಸೇಡಂಗಳಲ್ಲೂ ಸಹ ಆರಂಭಿಸಿದ್ದು, ಇಂದು ಯಾದಗಿರಿಯಲ್ಲೂ ಕಾಮಗಾರಿಗೆ ಚಾಲನೆ ನೀಡಲಾಗಿದೆ ಎಂದರು.

ರಾಜ್ಯ ಸರ್ಕಾರ ಆರೋಗ್ಯ ?ತ್ರದಲ್ಲಿ ದೊಡ್ಡ ಬದಲಾವಣೆ ತರುತ್ತಿದೆ. ಕಳೆದ 2013ರಲ್ಲಿ ತಾವು ವೈದ್ಯಕಿಯ ಶಿಣ ಸಚಿವರಾಗಿದ್ದ ಜಿಲ್ಲೆಗೊಂದು ಸರ್ಕಾರಿ ವೈದ್ಯಕಿಯ ಕಾಲೇಜು ಸ್ಥಾಪನೆಗೆ ನಿರ್ಣಯ ಕೈಗೊಳ್ಳಲಾಯಿತು. ಇದರಿಂದ ಬಡ, ಸಾಮಾನ್ಯ, ಗ್ರಾಮೀಣ ಪ್ರದೇಶದ ಮಕ್ಕಳಿಗೆ ವೈದ್ಯಕಿಯ ಕ್ಷೇತ್ರದಲ್ಲಿ ಅಪಾರ ಅವಕಾಶ ಕಲ್ಪಿಸಲಾಯಿತು. ರಾಜ್ಯದಲ್ಲಿ 22 ವೈದ್ಯಕಿಯ ಕಾಲೇಜು ಸ್ಥಾಪಿಸಲಾಗಿದೆ. ಕಳೆದ ವರ್ಷ ಬಾಗಲಕೋಟೆ ಹಾಗೂ ರಾಮನಗರದಲ್ಲಿ ಸ್ಥಾಪನೆಗೆ ಕ್ರಮಕೈಗೊಂಡು, ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ಇಂತಹ ಕಾಲೇಜುಗಳ ಸ್ಥಾಪನೆಗೆ ಕ್ರಮಕೈಗೊಳ್ಳಲಾಗಿದೆ ಎಂದು ಹೇಳಿದರು.

ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರ ಅಧ್ಯತೆ ವಹಿಸಿ ಮಾತನಾಡಿದರು. ಡೀನ್ ಡಾ.ಸಂದೀಪ್ ಎಚ್.ವಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯ ಬಾಬುರಾವ ಕಾಡ್ಲೂರ, ಡಾ. ನಿರಂಜನ್, ಉಪ ಪ್ರಾಚಾರ್ಯ ಬಸವರಾಜ ಬಿರಾದಾರ್, ಯಿಮ್ಸ್‌ನ ವೈದ್ಯರು, ಸಿಬ್ಬಂದಿ ಭಾಗವಹಿಸಿದ್ದರು. ಉಪನ್ಯಾಸಕಿ ದೀರಾ ಮೀಸ್ಮಾ ನಿರೂಪಿಸಿದರು. ಪ್ರಭಾರಿ ಪ್ರಾಚಾರ್ಯ ಸಿದ್ದರಾಮಪ್ಪ ಸಜ್ಜನ್ ವಂದಿಸಿದರು.

ವಿದೇಶಿ ಭಾಷೆಗಳ ಕಲಿಕೆಗೆ ಅವಕಾಶ ಭಾರತ ಸೇರಿ ವಿದೇಶಗಳಲ್ಲಿ ನರ್ಸಿಂಗ್ ಸೇವೆಗೆ ಅಪಾರ ಬೇಡಿಕೆ ಇದೆ. ವಿಶೇಷವಾಗಿ ಜರ್ಮನಿ, ಜಪಾನ್, ಇಟಲಿ ಹಾಗೂ ಆಸ್ಟ್ರೇಲಿಯಾಗಳಲ್ಲಿ ಅಪಾರ ಬೇಡಿಕೆಯಿದ್ದು, ಆದರೆ ಆಯಾ ದೇಶಗಳ ಭಾಷೆಗಳ ಜ್ಞಾನ ಹಾಗೂ ಇಂಗ್ಲೀಷ್ ಜ್ಞಾನ ಹೊಂದುವುದು ಬಹಳ ಮುಖ್ಯವಾಗಿದೆ. ಕೆಲವು ವೈದ್ಯಕಿಯ ಕಾಲೇಜುಗಳಲ್ಲಿ ಲಾಂಗ್ವೇಜ್ ಲ್ಯಾಬ್ ಸ್ಥಾಪಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ನರ್ಸಿಂಗ್ ವಿದ್ಯಾರ್ಥಿಗಳು ಈಗಿನಿಂದಲೇ ಭಾಷಾಜ್ಞಾನ, ಕೌಶಲ ಮತ್ತು ಉತ್ತಮ ಸಂವಹನ ಹಾಗೂ ರೋಗಿಗಳೊಂದಿಗೆ ಉತ್ತಮ ವರ್ತನೆ, ಸೇವಾ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಡಾ.ಪಾಟೀಲ್ ಕಿವಿಮಾತು ಹೇಳಿದರು.

ಐದು ವರ್ಷಗಳಲ್ಲಿ ವಿವಿಧ ಆಸ್ಪತ್ರೆಗಳ ಸ್ಥಾಪನೆಮುಂದಿನ ಐದು ವರ್ಷಗಳ ಯೋಜನೆ ರೂಪಿಸಿ ಪ್ರತಿ ಜಿಲ್ಲೆಯಲ್ಲಿ ಸೂಪರ್ ಸ್ಪೆಷಾಲಿಟಿ, ಟ್ರಾಮಾ ಸೆಂಟರ್ ಹಾಗೂ ಕ್ಯಾನ್ಸರ್ ಆಸ್ಪತ್ರೆ ಸ್ಥಾಪಿಸಲು ಕ್ರಮ ಕೈಗೊಳ್ಳಲಾಗಿದೆ. ಕಲಬುರಗಿ, ಮೈಸೂರು, ಬೆಳಗಾವಿ, ಕೊಪ್ಪಳ, ಬಳ್ಳಾರಿ, ಹುಬ್ಬಳ್ಳಿ, ಶಿವಮೊಗ್ಗ ಮತ್ತು ಚಿಕ್ಕಮಗಳೂರುಗಳಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಸ್ಥಾಪಿಸಲಾಗಿದೆ. ಇನ್ನೂ ಕೆಲವು ಉದ್ಘಾಟನೆ ಹಂತದಲ್ಲಿವೆ ಎಂದು ವೈದ್ಯಕಿಯ ಸಚಿವ ಡಾ.ಶರಣಪ್ರಕಾಶ ಪಾಟೀಲ್ ಹೇಳಿದರು.

ಯಾದಗಿರಿ, ಕಾರವಾರ, ಗದಗಗಳಲ್ಲಿ ಹಣಕಾಸು ಲಭ್ಯತೆ ಮೇಲೆ ನಿರ್ಣಯ ಕೈಗೊಳ್ಳಲಾಗುತ್ತದೆ. ಕಲಬುರಗಿ, ಮೈಸೂರು, ತುಮಕೂರು, ಮಂಡ್ಯ ಹಾಗೂ ಬೀದರ್, ರಾಯಚೂರು ಹಾಗೂ ಕಾರವಾರಗಳಲ್ಲಿ ಕ್ಯಾನ್ಸರ್ ಆಸ್ಪತ್ರೆಗಳ ಸ್ಥಾಪನೆಗೂ ಕ್ರಮ ಕೈಗೊಂಡಿದೆ. ಕಲಬುರಗಿ, ಹಾವೇರಿ ಮತ್ತು ಹುಬ್ಬಳ್ಳಿಗಳಲ್ಲಿ ಟ್ರಾಮಾ ಸೆಂಟರ್ ಸಹ ಸ್ಥಾಪಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು.

## ಮಹನೀಯರ ಆದರ್ಶ ಮಕ್ಕಳಿಗೆ ತಲುಪಿಸಿ: ಡಾ.ಹಂಪಣ್ಣ ಸಜ್ಜನ್ ಸಲಹೆ

**ರಾಯಚೂರು, ಮಾ. 3:** ಇಂದಿನ ಯುವ ಪೀಳಿಗೆಗೆ ಸಾಮಾಜಿಕ ಮೌಲ್ಯ, ನೀತಿ, ಉತ್ತಮ ಸಂಸ್ಕಾರ ನೀಡಿ ಒಳ್ಳೆಯ ನಾಗರಿಕರನ್ನಾಗಿ ರೂಪಿಸಬೇಕಿದೆ. ಮಹನೀಯರ ಜಯಂತಿಗಳ ಆಚರಣೆಯ ಉದ್ದೇಶವೂ ಇದೇ ಆಗಿದೆ ಎಂದು ರಾಯಚೂರು ಉಪವಿಭಾಗಾಧಿಕಾರಿ ಡಾ.ಹಂಪಣ್ಣ ಸಜ್ಜನ್ ಅಭಿಪ್ರಾಯಪಟ್ಟರು.



ಇಲ್ಲಿನ ವೀರಶೈವ ಕಲ್ಯಾಣ ಮಂಟಪದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಆಯೋಜಿಸಲಾಗಿದ್ದ ರೇಣುಕಾಚಾರ್ಯ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಶರಣರು, ದಾರ್ಶನಿಕರು, ಸೂಫಿ–ಸಂತರು ಸಮಾಜದಲ್ಲಿರುವ ಅಂಕು–ಡೊಂಕು ತಿದ್ದಲು ನೀಡಿದ ಸಂದೇಶಗಳು, ವಿಚಾರಧಾರೆಗಳು ಇಂದಿಗೂ ಪ್ರಸ್ತುತವಾಗಿವೆ. ಈ ದಿಸೆಯಲ್ಲಿ ರೇಣುಕಾಚಾರ್ಯರೂ ಪ್ರಮುಖರಾಗಿದ್ದು, ಅವರ ಆದರ್ಶಗಳನ್ನು ನಾವು ಅರ್ಥೈಸಿಕೊಂಡು ಮೈಗೂಡಿಸಿಕೊಳ್ಳಬೇಕು ಎಂದು ಹೇಳಿದರು.

ಕಲಬುರಗಿ ಜಿಲ್ಲೆಯ ಕಾಳಗಿ ತಾಲ್ಲೂಕಿನ ಬಣಮಗಿಯ ರಾಚೋಟೇಶ್ವರ ಶಿವಾಚಾರ್ಯರು ಮಾತನಾಡಿ, ಎಲ್ಲ ಧರ್ಮಗಳಿಗೆ ಆಶ್ರಯ ನೀಡಿದ ಧರ್ಮ ವೀರಶೈವ ಧರ್ಮವಾಗಿದೆ. ಮಕ್ಕಳಿಗೆ ಸಂಸ್ಕಾರ, ಲಿಂಗ ಪೂಜೆ ಕಲಿಸಬೇಕು. ಎಲ್ಲ ಧರ್ಮಗಳಿಂತ ವೀರಶೈವ ಧರ್ಮ ದೊಡ್ಡದಾಗಿದೆ. ಪಂಚ ಪೀಠಗಳನ್ನು ಸ್ಥಾಪಿಸಿ ಪಂಚ ಪೀಠಾಧಿಕಾರಿಗಳನ್ನು ನೇಮಿಸಿದರು. ರೇಣುಕಾಚಾರ್ಯರು ಕೇವಲ ಒಂದು ಸಮಾಜದವರನ್ನು ಪ್ರೀತಿಯಿಂದ ಕಾಣದೆ ಎಲ್ಲ ಸಮಾಜದವರನ್ನು ಪ್ರೀತಿ ವಿಶ್ವಾಸದಿಂದ ನೋಡಿದ್ದಾರೆ ಎಂದರು.

**ಮೆರವಣಿಗೆಗೆ ಚಾಲನೆ:** ಇದಕ್ಕೂ ಮುಂಚೆ, ನಗರದ ಹೈದರಾಬಾದ್ ಬೈಪಾಸ್ ರಸ್ತೆ ಬಳಿರುವ ರೇಣುಕಾಚಾರ್ಯ ವೃತ್ತದಲ್ಲಿ ರೇಣುಕಾಚಾರ್ಯರ ಭಾವಚಿತ್ರ ಮೆರವಣಿಗೆಗೆ ಶಾಸಕ ಡಾ.ಶಿವರಾಜ ಎಸ್.ಪಾಟೀಲ ಅವರು ಚಾಲನೆ ನೀಡಿದರು. ಶಾಂತಮಲ್ಲ ಶಿವಾಚಾರ್ಯರು, ಅಭಿನವ ರಾಚೋಟಿವೀರ ಶಿವಾಚಾರ್ಯರು, ವೀರ ಸಂಗಮೇಶ್ವರ ಶಿವಾಚಾರ್ಯರು ಮಾತನಾಡಿದರು.

# ದೀರ್ಘಾವಧಿಯ ಯುದ್ಧದ ಬಗ್ಗೆ ಟ್ರಂಪ್ ಸುಳಿವು: ಶಸ್ತ್ರಾಸ್ತ್ರ ದಾಸ್ತಾನುಗಳ ಪರಿಶೀಲನೆ

**ನವದೆಹಲಿ, ಮಾ.3:** ಇರಾನ್ ಜೊತೆಗಿನ ದೀರ್ಘಾವಧಿಯ ಯುದ್ಧದ ಬಗ್ಗೆ ಸುಳಿವು ನೀಡುತ್ತಾ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಂಗಳವಾರ ಶಸ್ತ್ರಾಸ್ತ್ರ ಮತ್ತು ಮದ್ದುಗುಂಡುಗಳ ದಾಸ್ತಾನುಗಳನ್ನು ಪರಿಶೀಲಿಸಿದರು, ಅಮೆರಿಕ ಮಧ್ಯಮ ಮತ್ತು ಉನ್ನತ ದರ್ಜೆಯ ಶಸ್ತ್ರಾಸ್ತ್ರಗಳ ವಾಸ್ತವಿಕವಾಗಿ ಅನಿಯಮಿತ ಪೂರೈಕೆಯನ್ನು ಹೊಂದಿದೆ ಎಂದು ಹೇಳಿದರು.

ಅಮೆರಿಕ ಯುದ್ಧಸಾಮಗ್ರಿಗಳ ದಾಸ್ತಾನುಗಳು, ಮಧ್ಯಮ ಮತ್ತು ಉನ್ನತ ಮಧ್ಯಮ ದರ್ಜೆಯಲ್ಲಿ, ಎಂದಿಗೂ ಉತ್ತಮವಾಗಿಲ್ಲ. ನಮಗೆ ಈ ಶಸ್ತ್ರಾಸ್ತ್ರಗಳ ವಾಸ್ತವಿಕವಾಗಿ ಅನಿಯಮಿತ ಪೂರೈಕೆ ಇದೆ. ಅಮೆರಿಕವು ದೊಡ್ಡದನ್ನು ಗೆಲ್ಲಲು ಸಿದ್ಧವಾಗಿದೆ," ಎಂದು ಟ್ರಂಪ್ ತಮ್ಮ ಸಾಮಾಜಿಕ ಮಾಧ್ಯಮ ವೇದಿಕೆಯಲ್ಲಿ ಹೇಳಿದರು. ಟ್ರಂಪ್ ಆರಂಭದಲ್ಲಿ ಯುದ್ಧವು ನಾಲ್ಕರಿಂದ ಐದು ವಾರಗಳವರೆಗೆ ಮುಂದುವರಿಯಬಹುದು ಎಂದು ಹೇಳಿದ್ದರು ಮತ್ತು ಇರಾನ್ ತನ್ನ ಪರಮಾಣು ಮಹತ್ವಾಕಾಂಕ್ಷೆಗಳನ್ನು ಅನುಸರಿಸುವುದನ್ನು ತಡೆಯುವುದು ಅವರ ಏಕೈಕ ಗುರಿಯಾಗಿದೆ. ಆದಾಗ್ಯೂ, ಇರಾನಿನ ಪ್ರತಿದಾಳಿಗಳ ಹಿನ್ನೆಲೆಯಲ್ಲಿ, ಅದು ಹೆಚ್ಚುಕಾಲ ಮುಂದುವರಿಯಬಹುದು ಎಂದು ಟ್ರಂಪ್ ಹೇಳಿದರು.

"ನಾವು ನಾಲ್ಕರಿಂದ ಐದು ವಾರಗಳ ಕಾಲ ಯುದ್ಧ ಮಾಡಬಹುದೆಂದು ಅಂದಾಜಿಸಿದ್ದೇವೆ, ಆದರೆ ಅದಕ್ಕಿಂತ ಹೆಚ್ಚು ಸಮಯ ಯುದ್ಧ ಮಾಡಬಹುದು. ನಾವು ಅದನ್ನು ಮಾಡುತ್ತೇವೆ" ಎಂದು ಅವರು ಹೇಳಿದರು. ಯುದ್ಧಗಳನ್ನು ಶಾಶ್ವತವಾಗಿ ಹೋರಾಡಬಹುದು ಮತ್ತು ಬಹಳ ಯಶಸ್ವಿಯಾಗಿ, ಇತರ ದೇಶಗಳ ಅತ್ಯುತ್ತಮ ಶಸ್ತ್ರಾಸ್ತ್ರಗಳಿಗಿಂತ ಉತ್ತಮವಾದ ಈ ಸರಬರಾಜುಗಳನ್ನು ಮಾತ್ರ ಬಳಸಿ ಎಂದು ಅವರು ಹೇಳಿದರು. "ಉನ್ನತ ಮಟ್ಟದಲ್ಲಿ, ನಮಗೆ ಉತ್ತಮ ಪೂರೈಕೆ ಇದೆ, ಆದರೆ ನಾವು ಇರಲು ಬಯಸುವ ಸ್ಥಳದಲ್ಲಿ ನಾವು ಇಲ್ಲ. ಹೊರಗಿನ ದೇಶಗಳಲ್ಲಿ ನಮಗಾಗಿ ಹೆಚ್ಚಿನ ಉನ್ನತ ದರ್ಜೆಯ ಶಸ್ತ್ರಾಸ್ತ್ರಗಳನ್ನು ಸಂಗ್ರಹಿಸಲಾಗಿದೆ" ಎಂದು ಅವರು ಹೇಳಿದರು.

ಮಾರ್ಚ್ 2, 2026 ರಂದು, ಟ್ರಂಪ್ ಈ ಕಾರ್ಯಾಚರಣೆಯು ಪ್ರಸ್ತುತ ವೇಳಾಪಟ್ಟಿಗಿಂತ "ಗಣನೀಯವಾಗಿ ಮುಂದಿದ್ದರೂ", ಅಗತ್ಯವಿದ್ದರೆ ಯುಎಸ್ ಆರಂಭಿಕ 'ನಾಲ್ಕರಿಂದ ಐದು ವಾರಗಳ' ಅವಧಿಗಿಂತ "ಹೆಚ್ಚು ಮುಂದೆ ಹೋಗುವ ಸಾಮರ್ಥ್ಯವನ್ನು" ಹೊಂದಿದೆ ಎಂದು ಹೇಳಿದರು. ಆದಾಗ್ಯೂ, ಕಾಂಗ್ರೆಸ್‌ಗೆ ಔಪಚಾರಿಕ ಯುದ್ಧ ಅಧಿಕಾರ ಅಧಿಸೂಚನೆಯಲ್ಲಿ, ಈ ಸಮಯದಲ್ಲಿ ಕಾರ್ಯಾಚರಣೆಗಳ ಪೂರ್ಣ ವ್ಯಾಪ್ತಿ ಮತ್ತು ಅವಧಿಯನ್ನು ತಿಳಿದುಕೊಳ್ಳಲು ಸಾಧ್ಯವಿಲ್ಲ ಎಂದು ಟ್ರಂಪ್ ಒಪ್ಪಿಕೊಂಡರು. ಸಂಭಾವ್ಯವಾಗಿ ದೀರ್ಘವಾದ ಸಂಘರ್ಷದತ್ತ ಸಾಗುವಿಕೆಯು ಟ್ರಂಪ್ ವ್ಯಕ್ತಪಡಿಸಿದ ಮಿಲಿಟರಿ ಗುರಿಗಳ ವಿಸ್ತೃತ ಪಟ್ಟಿಯೊಂದಿಗೆ ಹೊಂದಿಕೆಯಾಗುತ್ತದೆ. ಆರು ಯುಎಸ್ ಸೇವಾ ಸದಸ್ಯರು ಕಾರ್ಯಾಚರಣೆಯಲ್ಲಿ ಕೊಲ್ಲಲ್ಪಟ್ಟರು ಎಂದು ದೃಢಪಡಿಸಲಾಗಿದೆ. ಇರಾನ್ ಹಾರ್ಮುಜ್ ಜಲಸಂಧಿಯನ್ನು ಮುಚ್ಚುವ ಮೂಲಕ ಪ್ರತೀಕಾರ ತೀರಿಸಿಕೊಂಡಿದೆ.

ಇಸ್ರೇಲ್ ಮೊದಲು ದಾಳಿ ಮಾಡಿದ್ದರೆ ಇರಾನ್



ಅಮೆರಿಕದ ಪಡೆಗಳ ಮೇಲೆ ದಾಳಿ ಮಾಡುತ್ತಿತ್ತು ಎಂದು ಗುಪ್ತಚರ ವರದಿಗಳು ತೋರಿಸಿವೆ ಎಂದು ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ಮತ್ತು ಇತರ ಅಧಿಕಾರಿಗಳು "ಗ್ಯಾಂಗ್ ಆಫ್ ಏಯ್ಟ್"ಗೆ ವಿವರಿಸಿದರು. ಸೆನೆಟರ್ ಮಾರ್ಕ್ ವಾರ್ನರ್ ಸೇರಿದಂತೆ ವಿಮರ್ಶಕರು, ಇದು "ಸನ್ನಿಹಿತ ಬೆದರಿಕೆ"ಗೆ ಕಾನೂನು ಮಾನದಂಡವನ್ನು ಪೂರೈಸುವುದಿಲ್ಲ ಮತ್ತು ಆಡಳಿತದ ಗುರಿಗಳು ಹಲವು ಬಾರಿ ಬದಲಾಗಿವೆ ಎಂದು ಹೇಳಿದರು.

(ಗ್ಯಾಂಗ್ ಆಫ್ ಏಯ್ಟ್ ಎಂಬುದು ಅಮೆರಿಕ ಕಾಂಗ್ರೆಸ್‌ನೊಳಗಿನ ಎಂಟು ನಾಯಕರ ಗುಂಪಿಗೆ ಆಡುಮಾತಿನ ಪದವಾಗಿದ್ದು, ಅವರಿಗೆ ಕಾರ್ಯಾಂಗವು ವರ್ಗೀಕೃತ ಗುಪ್ತಚರ ವಿಷಯಗಳ ಕುರಿತು ವಿವರಿಸುತ್ತದೆ. ನಿರ್ದಿಷ್ಟವಾಗಿ ಹೇಳುವುದಾದರೆ, 'ಗ್ಯಾಂಗ್ ಆಫ್ ಏಯ್ಟ್' ಸೆನೆಟ್ ಮತ್ತು ಹೌಸ್ ಆಫ್ ರೆಪ್ರೆಸೆಂಟೇಟಿವ್ಸ್ ಎರಡರಿಂದಲೂ ಎರಡೂ ಪಕ್ಷಗಳ ನಾಯಕರು ಮತ್ತು ಸೆನೆಟ್ ಸಮಿತಿ ಮತ್ತು ಸದನ ಸಮಿತಿಯ ಅಧ್ಯಕ್ಷರು ಮತ್ತು ಶ್ರೇಯಾಂಕಿತ ಅಲ್ಪಸಂಖ್ಯಾತ ಸದಸ್ಯರನ್ನು ಒಳಗೊಂಡಿದೆ.)

ಅಮೆರಿಕದ ಸಾರ್ವಜನಿಕ ಅಭಿಪ್ರಾಯವೂ ಯುದ್ಧದ ವಿರುದ್ಧವಾಗಿದೆ. ಮಾರ್ಚ್ ಆರಂಭದ ಸಮೀಕ್ಷೆಯು ಕೇವಲ 21 ಪ್ರತಿಶತದಷ್ಟು ಅಮೆರಿಕನ್ನರು ದಾಳಿಗಳನ್ನು ಬೆಂಬಲಿಸುತ್ತಾರೆ ಎಂದು ಸೂಚಿಸಿದರೆ, ಶೇಕಡಾ 49 ರಷ್ಟು ಜನರು ಅವುಗಳನ್ನು ಅನಗತ್ಯ ಮತ್ತು ದುಬಾರಿ ಎಂದು ಪರಿಗಣಿಸುತ್ತಾರೆ. ಅಮೆರಿಕನ್ ಸೇವಾ ಸದಸ್ಯರ ಸಾವುನೋವುಗಳು ಮತ್ತು ಇರಾನ್‌ನಲ್ಲಿ ಗಮನಾರ್ಹ ನಾಗರಿಕ ಸಾವುನೋವುಗಳ ವರದಿಗಳ ದೃಢೀಕರಣದ ನಂತರ ಚರ್ಚೆ ತೀವ್ರಗೊಂಡಿದೆ.

ಗಲ್ಫ್ ದೇಶಗಳಿಂದ ಹಣ ರವಾನೆ ಕೂಡ ತೀವ್ರವಾಗಿ ಪರಿಣಾಮ ಬೀರಬಹುದು. 2025 ರ ಆರಂಭದ ವೇಳೆಗೆ, ಆರು ಗಲ್ಫ್ ಸಹಕಾರ ಮಂಡಳಿ (ಜಿಸಿಸಿ) ದೇಶಗಳಲ್ಲಿ 8.5 ರಿಂದ 9.7 ದಶಲಕ್ಷಕ್ಕಿಂತಲೂ ಹೆಚ್ಚು ಭಾರತೀಯ ಪ್ರಜೆಗಳು ವಾಸಿಸುತ್ತಿದ್ದಾರೆ, ಇದು ಈ ಪ್ರದೇಶದ ಅತಿದೊಡ್ಡ ಸಾಗರೋತ್ತರ ಸಮುದಾಯಗಳಲ್ಲಿ ಒಂದಾಗಿದೆ.

ಅವು ವಿದೇಶಿ ವಿನಿಮಯದ ನಿರ್ಣಾಯಕ ಮೂಲವಾಗಿದ್ದು, ಗಲ್ಫ್ ಪ್ರದೇಶವು ಭಾರತದ ಒಟ್ಟು ಹಣ ರವಾನೆಯಲ್ಲಿ ಸರಿಸುಮಾರು ಶೇಕಡಾ 38–40 ರಷ್ಟನ್ನು ಕೊಡುಗೆ ನೀಡುತ್ತದೆ. ಹಣ ರವಾನೆ ಈಜ25 ರಲ್ಲಿ ದಾಖಲೆಯ 135 ಶತಕೋಟಿಯಿಂದ 136 ಶತಕೋಟಿ ಡಾಲರ್ ವರೆಗೆ ತಲುಪಿದೆ. ದೇಶೀಯ ರಸಗೊಬ್ಬರ ಸ್ಥಾವರಗಳಿಗೆ ಫೀಡ್‌ಬ್ಯಾಕ್ ಆಗಿ ಭಾರತ ಕತಾರಿ LNG ಅನ್ನು ಅವಲಂಬಿಸಿದೆ. ಪೂರೈಕೆ ಸ್ಥಗಿತಗೊಂಡರೆ ದೇಶದ ಅರ್ಧದಷ್ಟು ಕೃಷಿಭೂಮಿಗೆ ಮಣ್ಣಿನ ಪೋಷಕಾಂಶಗಳು ಅಪಾಯದಲ್ಲಿರುತ್ತವೆ. ಇರಾನ್ ಮತ್ತು ಇರಾಕ್ಗೆ ಬಾಸ್ಮತಿ ಅಕ್ಕಿ ಮತ್ತು ಚಹಾ ಸೇರಿದಂತೆ ಪ್ರಮುಖ ಕೃಷಿ ರಫ್ತುಗಳು ಈಗಾಗಲೇ ತೊಂದರೆಗಳನ್ನು ಎದುರಿಸುತ್ತಿವೆ. ದುಬೈನಲ್ಲಿನ ಲಾಜಿಸ್ಟಿಕ್ ಅಡಚಣೆಗಳು ವಜ್ರ ಸಾಗಣೆಯನ್ನು ವಿಳಂಬಗೊಳಿಸಬಹುದು, ಇದು ಭಾರತದ ವಜ್ರ ಉದ್ಯಮದ ಮೇಲೆ ಪರಿಣಾಮ ಬೀರುತ್ತದೆ.

**ಭಾರತ ಕೂಡ ದೀರ್ಘಾವಧಿಯ ಯುದ್ಧದ ತೀವ್ರ ಬಹು ಆಯಾಮದ ಅಪಾಯಗಳನ್ನು ಎದುರಿಸಬೇಕಾಗುತ್ತದೆ. ಭಾರತವು ತನ್ನ ಕಚ್ಚಾ ತೈಲ ಆಮದಿನ ಸರಿಸುಮಾರು ಶೇಕಡಾ 55 ರಷ್ಟು ಮತ್ತು ಅದರ ಎಲ್‌ಎನ್‌ಜಿಯ ಗಮನಾರ್ಹ ಭಾಗವು ಹಾರ್ಮುಜ್ ಜಲಸಂಧಿಯ ಮೂಲಕ ಹಾದುಹೋಗುವುದರಿಂದ ಹೆಚ್ಚು ದುರ್ಬಲವಾಗಿದೆ. ದೀರ್ಘಕಾಲದ ಮುಚ್ಚುವಿಕೆ ಅಥವಾ ಅಡಚಣೆಯು ತೈಲ ಆಮದು ಬಿಲ್ ಗಣನೀಯವಾಗಿ ಹೆಚ್ಚಾಗಲು ಕಾರಣವಾಗುತ್ತದೆ. ಹೆಚ್ಚಿನ ಇಂಧನ ಮತ್ತು ಸಾರಿಗೆ ವೆಚ್ಚಗಳು ಚಿಲ್ಲರೆ ಬೆಲೆಗಳನ್ನು ಹೆಚ್ಚಿಸುತ್ತವೆ. ರಕ್ಷಣಾ ಮತ್ತು ರಸಗೊಬ್ಬರ ಸಬ್ಸಿಡಿಗಳ ಮೇಲಿನ ಹೆಚ್ಚಿದ ಖರ್ಚು ಭಾರತದ ಹಣಕಾಸಿನ ಕೊರತೆಯನ್ನು ಹೆಚ್ಚಿಸುತ್ತದೆ**

## ಇದು ಇರಾಕ್ ಅಲ್ಲ, ಇರಾನ್ ಜೊತೆಗಿನ ಸಂಘರ್ಷ ಅಂತ್ಯವಿಲ್ಲದ ಯುದ್ಧವಲ್ಲ: ಅಮೆರಿಕ ರಕ್ಷಣಾ ಕಾರ್ಯದರ್ಶಿ

**ನವದೆಹಲಿ,ಮಾ.3:** ಇಸ್ರೇಲ್ ಜೊತೆಗೂಡಿ ಇರಾನ್ ಮೇಲೆ ಅಮೆರಿಕ ನಡೆಸುತ್ತಿರುವ ಜಂಟಿ ದಾಳಿಯು ಅಂತ್ಯವಿಲ್ಲದ್ದು ಅಥವಾ ಸುದೀರ್ಘವಾದುದ್ದಲ್ಲ ಎಂದು ಅಮೆರಿಕದ ರಕ್ಷಣಾ ಕಾರ್ಯದರ್ಶಿ ಪೀಟ್ ಹೆಗ್ಸೆತ್ ತಿಳಿಸಿದ್ದಾರೆ. ಈ ಸಂಘರ್ಷವು ಅನಿರ್ದಿಷ್ಟಾವಧಿಯವರೆಗೆ ಮುಂದುವರಿಯುವುದಿಲ್ಲ ಎಂಬ ಅಂಶವನ್ನು ಅವರು ಈ ಮೂಲಕ ಸ್ಪಷ್ಟಪಡಿಸಿದ್ದಾರೆ.

ಇದು ಇರಾಕ್ ಅಲ್ಲ, ಇದು ಅಂತ್ಯವಿಲ್ಲದ ಯುದ್ಧವೂ ಅಲ್ಲ ಎಂದು ಹೇಳಿದ ಹೆಗ್ಸೆತ್, ಅಂತ್ಯವಿಲ್ಲದ ಯುದ್ಧಗಳ ಬಗ್ಗೆ ಕಳವಳ ವ್ಯಕ್ತಪಡಿಸುತ್ತಿರುವವರ ವಾದವು ತಪ್ಪಾಗಿದೆ ಎಂದು ಪ್ರತಿಪಾದಿಸಿದ್ದಾರೆ.

ಪೆಂಟಗನ್ನಲ್ಲಿ ಮಾತನಾಡಿದ ಹೆಗ್ಸೆತ್, ಅಮೆರಿಕದ ಈ ಕಾರ್ಯಾಚರಣೆಯು ಸ್ಪಷ್ಟವಾದ, ವಿನಾಶಕಾರಿಯಾದ ಮತ್ತು ನಿರ್ಣಾಯಕವಾದ ಕಾರ್ಯಾಚರಣೆಯಾಗಿದೆ ಎಂದು ಹೇಳಿದ್ದು, ಇರಾನ್ನ ಕ್ಷಿಪಣಿ ಬೆದರಿಕೆಯನ್ನು ನಿರ್ಮೂಲನೆ ಮಾಡುವುದು, ನೌಕಾಪಡೆಯನ್ನು ನಾಶಪಡಿಸುವುದು ಮತ್ತು ಯಾವುದೇ ಪರಮಾಣು ಅಸ್ತ್ರಗಳಿಲ್ಲದಂತೆ ಮಾಡುವುದು ಈ ಯೋಜನೆಯ ಗುರಿಯಾಗಿದೆ



ಎಂದು ಅವರು ತಿಳಿಸಿದ್ದಾರೆ.

ಅಂತಾರಾಷ್ಟ್ರೀಯ ಸಂಸ್ಥೆಗಳು ಏನೇ ಹೇಳಿದರೂ, ಅಮೆರಿಕವು ಇತಿಹಾಸದಲ್ಲೇ ಅತ್ಯಂತ ವಿನಾಶಕಾರಿ ಮತ್ತು ನಿಖರವಾದ ವಾಯುಪಡೆ ಕಾರ್ಯಾಚರಣೆಯನ್ನು ಪ್ರಾರಂಭಿಸುತ್ತಿದೆ. ಇದೆಲ್ಲವೂ ನಮ್ಮದೇ ಷರತ್ತುಗಳ ಮೇಲೆ ಮತ್ತು ಪೂರ್ಣ ಅಧಿಕಾರದೊಂದಿಗೆ ನಡೆಯುತ್ತಿದೆ ಎಂದು ಹೆಗ್ಸೆತ್ ಹೇಳಿದ್ದಾರೆ.

ಇರಾನ್ ಆಡಳಿತವು ಕಳೆದ ಸುಮಾರು ಐದು ದಶಕಗಳಿಂದ ಅಮೆರಿಕದ ವಿರುದ್ಧ ಕ್ರೂರ ಮತ್ತು ಏಕಪಕ್ಷೀಯ ಯುದ್ಧ ನಡೆಸುತ್ತಿದೆ ಎಂದ ರಕ್ಷಣಾ ಕಾರ್ಯದರ್ಶಿ, ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ನೇತೃತ್ವದಲ್ಲಿ ಅಮೆರಿಕವು ಇದಕ್ಕೆ ಅಂತ್ಯ ಹಾಡಲಿದೆ ಎಂದು ತಿಳಿಸಿದ್ದಾರೆ.

ಇದು ಆಡಳಿತ ಬದಲಾವಣೆಗಾಗಿ ಮಾಡುತ್ತಿರುವ ಯುದ್ಧವಲ್ಲ. ಆದರೆ ಆಡಳಿತವಂತೂ ಖಂಡಿತವಾಗಿಯೂ ಬದಲಾಯಿತು ಮತ್ತು ಇದರಿಂದ ಜಗತ್ತಿಗೆ ಒಳ್ಳೆಯದೇ ಆಗಿದೆ ಎಂದು ಹೆಗ್ಸೆತ್ ಹೇಳಿದ್ದಾರೆ.

ಜಂಟಿ ಮುಖ್ಯಸ್ಥರ ಅಧ್ಯಕ್ಷರಾದ ಜನರಲ್ ಡ್ಯಾನ್ ಕೇನ್ ಅವರು ಸುದ್ದಿಗೋಷ್ಠಿಯಲ್ಲಿ ಭಾಗವಹಿಸಿ, ಕಾರ್ಯಾಚರಣೆಯ ವಿವರಗಳನ್ನು ನೀಡಿದರು. ಇದೇ ವೇಳೆ ಪ್ರಸ್ತುತ ನಡೆಯುತ್ತಿರುವ ಸಂಘರ್ಷದಲ್ಲಿ ಪ್ರಾಣ ಕಳೆದುಕೊಂಡ ನಾಲ್ವರು ಅಮೆರಿಕನ್ ಸೈನಿಕರ ಕುಟುಂಬಗಳಿಗೆ ಅವರು ಸಂತಾಪ ಸೂಚಿಸಿದರು.

ನಾಲ್ಕನೇ ಅಮೆರಿಕನ್ ಸೈನಿಕನ ಸಾವನ್ನು ಅಮೆರಿಕದ ಸೆಂಟ್ರಲ್ ಕಮಾಂಡ್ ಸೋಮವಾರ ದೃಢಪಡಿಸಿದೆ. ಮೃತರ ಕುಟುಂಬದವರಿಗೆ ಮಾಹಿತಿ ನೀಡಿದ 24 ಗಂಟೆಗಳ ನಂತರವಷ್ಟೇ ಅವರ ಹೆಸರು ಮತ್ತು ಗುರುತನ್ನು ಬಹಿರಂಗಪಡಿಸಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ವರ್ಷಾನುಗಟ್ಟಲೆ ಸಂಚಾರಿ ಕ್ಯಾಮೆರಾ ಹ್ಯಾಕ್, ಮೊಬೈಲ್ ನೆಟ್‌ವರ್ಕ್ ಟ್ರ್ಯಾಕ್: ಖಮೇನಿ ಹತ್ಯೆಗೆ ಇಸ್ರೇಲ್ ರಣತಂತ್ರ

**ಟೆಹ್ರಾನ್,ಮಾ.3:** ಇಸ್ರೇಲ್–ಅಮೆರಿಕ ನಡೆಸಿದ ಜಂಟಿ ದಾಳಿಯಲ್ಲಿ ಇರಾನ್ನ ಸರ್ವೋಚ್ಚ ನಾಯಕ ಆಯತೋಲ್ಲಾ ಅಲಿ ಖಮೇನಿ ಹತ್ಯೆಯಾಗಿದ್ದಾರೆ. ಖಮೇನಿ ಹತ್ಯೆ ಬಳಿಕವೂ ಇರಾನ್ ತನ್ನ ಪ್ರತೀಕಾರದ ದಾಳಿ ಮುಂದುವರಿಸಿದೆ. ಈ ಮಧ್ಯೆ ಖಮೇನಿ ಹತ್ಯೆಗೆ ಇಸ್ರೇಲ್ ರೂಪಿಸಿದ್ದ ದೀರ್ಘ ಕಾಲದ ರಣತಂತ್ರಗಳು ಬಹಿರಂಗವಾಗಿದೆ. ಖಮೇನಿ ಹತ್ಯೆಗೆ ಪ್ಲ್ಯಾನ್ ರೂಪಿಸಲು ಇಸ್ರೇಲ್‌ನ ಗುಪ್ತಚರ ಸಂಸ್ಥೆ ವರ್ಷಾನುಗಟ್ಟಲೆ ಖಮೇನಿಯ ಪ್ರತಿ ಹೆಜ್ಜೆಯನ್ನೂ ಹಿಂಬಾಲಿಸುತ್ತಿತ್ತು. ಟೆಹ್ರಾನ್ನ ಎಲ್ಲಾ ಟ್ರಾಫಿಕ್ ಕ್ಯಾಮೆರಾಗಳನ್ನ ಹ್ಯಾಕ್ ಮಾಡಿದ್ದ ಇಸ್ರೇಲ್, ಆ ದೃಶ್ಯಗಳನ್ನು ಎನ್ಕ್ರಿಪ್ಟ್ ಮಾಡಿ ಸರ್ವರ್‌ಗಳಿಗೆ ರವಾನಿಸುತ್ತಿತ್ತು. ಈ ಮೂಲಕ ಅಮೆರಿಕನ್ ಪಡೆಗಳಿಗೆ ಖಮೇನಿ ಇರುವ ನಿಖರ ಸ್ಥಳಗಳನ್ನು ಗುರುತಿಸಲು ಅವಕಾಶ ಮಾಡಿಕೊಟ್ಟಿತು.

ಅಷ್ಟೇ ಅಲ್ಲ ಖಮೇನಿ ಮತ್ತು ಅವರ ಭದ್ರತಾ ವಿವರಗಳನ್ನ ಮೇಲ್ವಿಚಾರಣೆ ಮಾಡಲು ಮೊಬೈಲ್ ನೆಟ್ವರ್ಕ್ ಪ್ರವೇಶಿಸಿ, ನಿರಂತರವಾಗಿ ಟ್ರ್ಯಾಕ್ ಮಾಡುತ್ತಿತ್ತು. ಈ ಮೂಲಕ ಮೊಸಾದ್ (ಇಸ್ರೇಲ್ ಗುಪ್ತಚರ ಸಂಸ್ಥೆ) ಖಮೇನಿಯ ಪ್ರತಿದಿನದ ಕಾರ್ಯ ಚಟುವಟಿಕೆಗಳನ್ನು ಚೆನ್ನಾಗಿ ತಿಳಿದುಕೊಂಡಿತ್ತು. ಈ ಬಗ್ಗೆ



ಅಮೆರಿಕಕ್ಕೆ ಮಾಹಿತಿ ನೀಡುತ್ತಿದ್ದದ್ದು, ನಿಖರ ದಾಳಿಯಲ್ಲಿ ಖಮೇನಿ ಹತ್ಯೆಗೈಯಲು ಕಾರಣವಾಯಿತು.

### ರಾತ್ರಿ ನಡೆಸಬೇಕಿದ್ದ ದಾಳಿ ಬೆಳಗ್ಗೆ ಮಾಡಿದ್ದೇಕೆ ಇಸ್ರೇಲ್–ಅಮೆರಿಕ

ಹಲವು ತಿಂಗಳಿಂದ ಸಿಐಎ (ಕೇಂದ್ರೀಯ ಗುಪ್ತಚರ ಸಂಸ್ಥೆ ಇದು ವಿದೇಶಿ ಗುಪ್ತಚರ ಸಂಸ್ಥೆ) ಖಮೇನಿಯನ್‌ನ ಟ್ರ್ಯಾಕ್ ಮಾಡಿತ್ತು. ಶನಿವಾರ (ಫೆ.28) ಬೆಳಗ್ಗೆ ಖಮೇನಿ ಪ್ರಮುಖರೊಂದಿಗೆ ಸಭೆ ಸೇರುತ್ತಾರೆ ಎಂಬುದನ್ನ ತಿಳಿದಿದ್ದ ಸಿಐಎ, ಇಸ್ರೇಲ್‌ಗೆ ಮಾಹಿತಿ ರವಾನೆ ಮಾಡಿತ್ತು.

ಈ ಬೆನ್ನಲ್ಲೇ ಅಲರ್ಟ್ ಆದ ಇಸ್ರೇಲ್, ಅಮೆರಿಕ ಸಮಯ ನಿಗದಿಪಡಿಸಿ ಇರಾನ್ ಮೇಲೆ ಜಂಟಿಯಾಗಿ ವಾಯುದಾಳಿ ನಡೆಸಿದವು. ಇಸ್ರೇಲ್‌ನ ಜೆಟ್ ವಿಮಾನವು ಖಮೇನಿ ಮನೆಯ ಕಾಂಪೌಂಡ್ ಮೇಲೆ 30 ಬಾಂಬ್‌ಗಳ ಪ್ರಬಲ ದಾಳಿ ನಡೆಸಿತು. ಯುದ್ಧ ವಿಮಾನವು ಭಾರತೀಯ ಕಾಲಮಾನ ಬೆಳಗ್ಗೆ 9:30 ಕ್ಕೆ ಹೊರಟಿತ್ತು. ಅದು ಇಸ್ರೇಲ್‌ನಿಂದ ಹೊರಟ 2 ಗಂಟೆ 20 ನಿಮಿಷಕ್ಕೆ (ಮಧ್ಯಾಹ್ನ 12:10 ಗಂಟೆಗೆ) ಖಮೇನಿ ಕಾಂಪೌಂಡ್ ಅನ್ನು ಉಡೀಸ್ ಮಾಡಿತು. ಈ ವೇಳೆ ಸಭೆಯಲ್ಲಿದ್ದ ಇರಾನ್ ಪ್ರಮುಖ ನಾಯಕರು ಜಂಟಿ ಕಾರ್ಯಾಚರಣೆಯಲ್ಲಿ ಬಲಿಯಾಗಿದ್ದಾರೆ.

### ದಾಳಿ ಸಮರ್ಥಿಸಿಕೊಂಡ ಇಸ್ರೇಲ್ ಪ್ರಧಾನಿ

ಈ ನಡುವೆ ಪ್ರತಿಕ್ರಿಯೆ ನೀಡಿರುವ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು, ಇರಾನ್ ಮೇಲಿನ ದಾಳಿಗಳನ್ನು ಸಮರ್ಥಿಸಿಕೊಂಡಿದ್ದಾರೆ. ಇರಾನ್ 47 ವರ್ಷಗಳಿಂದ ಅಮೆರಿಕಕ್ಕೆ ಸಾವಿನ ಘೋಷಣೆ ಕೂಗುತ್ತಿದೆ. 2 ಬಾರಿ ಟ್ರಂಪ್ ಹತ್ಯೆಗೆ ಪ್ರಯತ್ನಿಸಿದ್ದರು. ಅಲ್ಲದೇ ನಮ್ಮ ರಾಯಭಾರ ಕಚೇರಿಗಳ ಮೇಲೂ ಬಾಂಬ್ ದಾಳಿ ನಡೆಸಿದ್ದರು. ಅನೇಕ ನಾಗರಿಕರನ್ನು ಕೊಂದಿದ್ದು, ಮಾತ್ರವಲ್ಲದೇ ವಿಶ್ವಾದ್ಯಂತ ಭಯೋತ್ಪಾದನೆಯ ಜಾಲವನ್ನ ಹರಡಿದರು. ಹಾಗಾಗಿ ಇರಾನ್ ನಾಶಮಾಡಲು ಅಮೆರಿಕ ಮತ್ತು ಇಸ್ರೇಲ್ ಬದ್ಧವಾಗಿವೆ ಎಂದು ನುಡಿದಿದ್ದಾರೆ.

## ಅಮೆರಿಕ–ಇಸ್ರೇಲ್ ದಾಳಿ ಸಂದರ್ಭದಲ್ಲಿ ನಟಾಂಜ್ ಯುರೇನಿಯಂ ಪುಷ್ಟೀಕರಣ ಘಟಕದ ಪ್ರವೇಶದ್ವಾರಕ್ಕೆ ಹಾನಿ: IAEA

**ಟೆಹ್ರಾನ್, ಮಾ.3:** ಹಿಂದಿನ ದಾಳಿಗಳಲ್ಲಿ ಹಾನಿಗೊಳಗಾದ ನಟಾಂಜ್ನಲ್ಲಿರುವ ಇರಾನ್ನ ಭೂಗತ ಯುರೇನಿಯಂ–ಪುಷ್ಟೀಕರಣ ತಾಣದ ಪ್ರವೇಶದ್ವಾರಗಳು ಇತ್ತೀಚಿನ ಅಮೆರಿಕ–ಇಸ್ರೇಲಿ ಮಿಲಿಟರಿ ಕಾರ್ಯಾಚರಣೆಗಳ ಸಂದರ್ಭದಲ್ಲಿ ಮತ್ತೆ ದಾಳಿಗೊಳಗಾದವು ಎಂದು UN ಪರಮಾಣು ಕಾವಲು ಸಂಸ್ಥೆ ಮಂಗಳವಾರ ದೃಢಪಡಿಸಿದೆ. ಕಳೆದ ಜೂನ್‌ನಲ್ಲಿ ಇಸ್ರೇಲ್ ಮತ್ತು ಅಮೆರಿಕ ಇರಾನಿನ ಪರಮಾಣು ತಾಣಗಳ ಮೇಲೆ ದಾಳಿ ಮಾಡಿದಾಗ ಕಾರ್ಯನಿರ್ವಹಿಸುತ್ತಿದ್ದ ಇರಾನ್‌ನಲ್ಲಿರುವ ಮೂರು ಯುರೇನಿಯಂ–ಪುಷ್ಟೀಕರಣ ಸೌಲಭ್ಯಗಳಲ್ಲಿ ಭೂಗತ ಇಂಧನ ಪುಷ್ಟೀಕರಣ ಸ್ಥಾವರ ಒಂದಾಗಿದೆ.

"ಲಭ್ಯವಿರುವ ಇತ್ತೀಚಿನ ಉಪಗ್ರಹ ಚಿತ್ರಣವನ್ನು ಆಧರಿಸಿ, ಐಎಇಎ ಈಗ ಇರಾನ್ ಭೂಗತ ನಟಾಂಜ್ ಇಂಧನ ಪುಷ್ಟೀಕರಣ ಸ್ಥಾವರದ ಪ್ರವೇಶ ಕಟ್ಟಡಗಳಿಗೆ ಕೆಲವು ಇತ್ತೀಚಿನ ಹಾನಿಯನ್ನು ದೃಢಪಡಿಸಬಹುದು" ಎಂದು ಅಂತಾರಾಷ್ಟ್ರೀಯ ಪರಮಾಣು ಶಕ್ತಿ ಸಂಸ್ಥೆ ನಲ್ಲಿ ಹೇಳಿದೆ. "ಜೂನ್ ಸಂಘರ್ಷದಲ್ಲಿ ತೀವ್ರವಾಗಿ ಹಾನಿಗೊಳಗಾದ ಈಇಕ ನಲ್ಲಿ ಯಾವುದೇ ವಿಕಿರಣಶೀಲ ಪರಿಣಾಮಗಳನ್ನು ನಿರೀಕ್ಷಿಸಲಾಗಿಲ್ಲ ಮತ್ತು ಯಾವುದೇ ಹೆಚ್ಚುವರಿ ಪರಿಣಾಮ ಪತ್ತೆಯಾಗಿಲ್ಲ" ಎಂದು ಅದು ಹೇಳಿದೆ. ಇನ್ಸ್ಟಿಟ್ಯೂಟ್ ಫಾರ್ ಸೈನ್ಸ್ ಅಂಡ್ ಇಂಟರ್ನ್ಯಾಷನಲ್ ಸೆಕ್ಯುರಿಟಿ ಸೋಮವಾರ ಬಿಡುಗಡೆ ಮಾಡಿದ ಸಂಶೋಧನೆಗಳೊಂದಿಗೆ ಏಜೆನ್ಸಿಯ ಮೌಲ್ಯಮಾಪನವು ಹೊಂದಿಕೆಯಾಗುತ್ತದೆ. ನಟಾನ್ಜ್ ಅನ್ನು ಗುರಿಯಾಗಿರಿಸಿಕೊಳ್ಳಲಾಗಿದೆ ಎಂದು ಇರಾನ್ ಭಾನುವಾರ ವರದಿ ಮಾಡಿದ ನಂತರ, ಯಾವುದೇ ಮಿಲಿಟರಿ ಕ್ರಮವು ಮಹತ್ವದ್ದಾಗಿ ಕಾಣುತ್ತಿಲ್ಲ ಎಂದು IAEA ಸೂಚಿಸಿತು.

## ಯುದ್ಧದ ನಡುವೆ ಇರಾನ್‌ನಲ್ಲಿ 4.3 ತೀವ್ರತೆಯ ಭೂಕಂಪ

**ಗೆರಾಶ್, ಮಾ.3:** ಇರಾನ್ ಮೇಲೆ ಇಸ್ರೇಲ್ ಹಾಗೂ ಅಮೆರಿಕ ಕಳೆದ ಮೂರು ದಿನಗಳಿಂದ ನಿರಂತರ ದಾಳಿ ನಡೆಸುತ್ತಿವೆ. ಇದರ ನಡುವೆ ಮಂಗಳವಾರ 4.3 ತೀವ್ರತೆಯ ಭೂಕಂಪ ಸಂಭವಿಸಿದೆ. ದಕ್ಷಿಣ ಇರಾನ್ನ ಗೆರಾಶ್ ನಗರದ ಬಳಿ ಭೂಮಿ ಕಂಪಿಸಿದ ಅನುಭವವಾಗಿದೆ. ಈ ಭೂಕಂಪವು ಸುಮಾರು 10 ಕಿ.ಮೀ ಆಳದಲ್ಲಿ ಸಂಭವಿಸಿದೆ. ಅಮೆರಿಕ ಮತ್ತು ಇಸ್ರೇಲ್ ಇರಾನ್ ಮೇಲೆ ನಡೆಸಿದ ಸಂಘಟಿತ ಮಿಲಿಟರಿ ದಾಳಿಗಳಿಂದಾಗಿ ಈ ಪ್ರದೇಶದಲ್ಲಿ ತೀವ್ರ ಸಂಘರ್ಷದ ಅವಧಿಯ ಮಧ್ಯೆ ಈ ಭೂಕಂಪ ಸಂಭವಿಸಿದೆ, ದಾಳಿ ಭಾನುವಾರ ಇರಾನಿನ ಸುಪ್ರೀಂ ನಾಯಕ ಅಯತೊಲ್ಲಾ ಅಲಿ ಖಮೇನಿ ಅವರ ಹತ್ಯೆಗೆ ಕಾರಣವಾಗಿತ್ತು.

ಗೆರಾಶ್ ದಕ್ಷಿಣ ಇರಾನ್ನಲ್ಲಿ ಪ್ರಮುಖ ಇಂಧನ, ಬಂದರು ಮತ್ತು ಮಿಲಿಟರಿ ಮೂಲಸೌಕರ್ಯವನ್ನು ಸಂಪರ್ಕಿಸುವ ಕಾರಿಡಾರ್ನಲ್ಲಿದೆ. ಗ್ಚೈನ್ ಯುರೇನಿಯಂ ಗಣಿ ಗೆರಾಶ್‌ನಿಂದ ಸುಮಾರು 150–180 ಕಿಮೀ ಆಗ್ನೇಯದಲ್ಲಿದೆ, ಗ್ಚೈನ್ ಇರಾನ್‌ನ ದೇಶೀಯ ಯುರೇನಿಯಂ ಅದಿರು ಮೂಲಗಳಲ್ಲಿ ಒಂದಾಗಿದೆ.



ಬುಶೆಹರ್ ಪರಮಾಣು ವಿದ್ಯುತ್ ಸ್ಥಾವರ–ಗೆರಾಶ್ನಿಂದ ವಾಯುವ್ಯಕ್ಕೆ ಸರಿಸುಮಾರು 250–300 ಕಿ.ಮೀ ದೂರದಲ್ಲಿರುವ ಬುಶೆಹರ್, ಪರ್ಷಿಯನ್ ಕೊಲ್ಲಿ ಕರಾವಳಿಯಲ್ಲಿ ಇರಾನ್ ಏಕೈಕ ಕಾರ್ಯಾಚರಣಾ ನಾಗರಿಕ ಪರಮಾಣು ವಿದ್ಯುತ್ ಸ್ಥಾವರವಾಗಿದೆ. ಕಳೆದ 15 ದಿನಗಳಲ್ಲಿ ಇರಾನ್ನಲ್ಲಿ ಸಂಭವಿಸಿದ ಎರಡನೇ ಭೂಕಂಪ ಇದಾಗಿದೆ. ಫೆಬ್ರವರಿ 19 ರಂದು ದಕ್ಷಿಣ ಇರಾನ್‌ನಲ್ಲಿ ಪ್ರಬಲ ಭೂಕಂಪ ಸಂಭವಿಸಿದ್ದು, ರಿಕ್ಟರ್ ಮಾಪಕದಲ್ಲಿ 5.5 ರಷ್ಟು ತೀವ್ರತೆ ದಾಖಲಾಗಿದೆ. ಜರ್ಮನ್ ಭೂವಿಜ್ಞಾನ ಸಂಶೋಧನಾ ಕೇಂದ್ರದ ಪ್ರಕಾರ ಕೇಂದ್ರಬಿಂದುವು 27.36 ಡಿಗ್ರಿ ಉತ್ತರ ಅಕ್ಷಾಂಶ ಮತ್ತು 52.60 ಡಿಗ್ರಿ ಪೂರ್ವ ರೇಖಾಂಶದಲ್ಲಿದ್ದು, ಫಾರ್ಸ್ ಪ್ರಾಂತ್ಯದ ಮೊಹರ್ ನಗರದ ನೈಋತ್ಯಕ್ಕೆ ಸುಮಾರು 36 ಕಿಲೋಮೀಟರ್ ದೂರದಲ್ಲಿದೆ. ಭೂಕಂಪದ ಆಳ ಕೇವಲ 10 ಕಿಲೋಮೀಟರ್ ಆಗಿದ್ದು, ಅದು ಸಾಕಷ್ಟು ಪ್ರಬಲವಾಗಿದೆ. ಇಂದಿನ ಭೂಕಂಪವೂ ಅದೇ ಆಳದಲ್ಲಿದೆ. ಇರಾನ್ನ ಗೆರಾಶ್ನಲ್ಲಿ ಸಂಭವಿಸಿದ ಭೂಕಂಪದಿಂದ ಇಲ್ಲಿಯವರೆಗೆ ಯಾವುದೇ ಜೀವ ಅಥವಾ ಆಸ್ತಿಪಾಸ್ತಿ ನಷ್ಟ ಸಂಭವಿಸಿಲ್ಲ ಎಂಬುದು ಸಮಾಧಾನಕರ ಸಂಗತಿ.

**ಇರಾನ್‌ನಲ್ಲಿ ಭೂಕಂಪದ ಸಮಯದ ಬಗ್ಗೆಯೂ ಪ್ರಶ್ನೆಗಳು ಎದ್ದಿವೆ. ಇರಾನ್ ಪರಮಾಣು ಪರೀಕ್ಷೆ ನಡೆಸಿದೆಯೇ ಮತ್ತು ಈ ಭೂಕಂಪವು ಅದರ ಪರಿಣಾಮವೇ ಎಂಬುದು ಒಂದು ಪ್ರಶ್ನೆ. ಇರಾನ್ ನಿರಂತರವಾಗಿ ಪರಮಾಣು ಪರೀಕ್ಷೆಗಳನ್ನು ನಡೆಸುತ್ತದೆ, ಇದು ಸಂಭವಿಸದಂತೆ ತಡೆಯಲು ಅಮೆರಿಕ ಬಯಸುತ್ತದೆ. ಅದಕ್ಕಾಗಿಯೇ ಅದು ಫೆ.28ರಂದು ಇರಾನ್ ಮೇಲೆ ದಾಳಿ ಮಾಡಿ ಖಮೇನಿಯನ್ನು ಕೊಂದಿತ್ತು.**

## ಚಿನ್ನಸ್ವಾಮಿ ಕ್ರೀಡಾಂಗಣದಲ್ಲೇ ಆರ್‌ಸಿಬಿ ಪಂದ್ಯಗಳು

**ಬೆಂಗಳೂರು, ಮಾ.3:** 2026ರ ಐಪಿಎಲ್ ಆವೃತ್ತಿಗಾಗಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ತನ್ನ ಪಂದ್ಯಗಳನ್ನು ಆಡಲಿದೆ. ಚಿನ್ನಸ್ವಾಮಿಯಲ್ಲೇ ಉದ್ಘಾಟನಾ ಪಂದ್ಯ ಆಡಲು ಆರ್‌ಸಿಬಿ ನಿರ್ಧರಿಸಿದೆ. ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಇದೀಗ 5 ಐಪಿಎಲ್ ಪಂದ್ಯ ಆಡಲು ಆರ್‌ಸಿಬಿ ಮ್ಯಾನೇಜ್ಮೆಂಟ್ ಇದೀಗ ಸಮ್ಮತಿ ಸೂಚಿಸಿದೆ ಈ ಮೂಲಕ ಆರ್ಸಿಬಿ ಅಭಿಮಾನಿಗಳಿಗೆ ಸಿಹಿ ಸುದ್ದಿ ಸಿಕ್ಕಂತಾಗಿದೆ.

ಕಳೆದ ವರ್ಷ ಜೂನ್‌ನಲ್ಲಿ ನಡೆದ ಭೀಕರ ಕಾಲ್ತುಳಿತದ ಬಳಿಕ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಪ್ರಮುಖ ಪಂದ್ಯ, ಟೂರ್ನಿಗಳನ್ನು ಸ್ಥಗಿತಗೊಳಿಸಲಾಗಿತ್ತು. ಇತ್ತೀಚೆಗೆ ರಾಜ್ಯ ಸರ್ಕಾರವು ಚಿನ್ನಸ್ವಾಮಿಯಲ್ಲಿ ಅಂತಾರಾಷ್ಟ್ರೀಯ ಹಾಗೂ ಐಪಿಎಲ್ ಪಂದ್ಯಗಳನ್ನು ನಡೆಸಲು ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ(ಕೆಎಸ್‌ಸಿಎ)ಗೆ ಷರತ್ತುಬದ್ಧ ಅನುಮತಿ ನೀಡಿತ್ತು. ಆದರೆ ಆರ್‌ಸಿಬಿಯು ಕೆಲ ಕಾರಣಗಳಿಂದಾಗಿ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಪಂದ್ಯಗಳನ್ನು ಆಡಲು ನಿರಾಕರಿಸುತ್ತಿತ್ತು. ಕೆಎಸ್‌ಸಿಎ ಪದಾಧಿಕಾರಿಗಳು ಕೂಡಾ ಚಿನ್ನಸ್ವಾಮಿಯಲ್ಲಿ ಆಡುವಂತೆ ಆರ್‌ಸಿಬಿಗೆ ಮನವಿ ಮಾಡಿದ್ದರೂ ಅದಕ್ಕೆ ಫ್ರಾಂಚೈಸಿಯು ಒಪ್ಪಿರಲಿಲ್ಲ. ಅದರೆ ಈಗ ಒಪ್ಪಿಕೊಂಡಿದೆ. 5 ಪಂದ್ಯಗಳನ್ನು ಆಡಲು ಆರ್‌ಸಿಬಿ ಆಡಳಿತ ಮಂಡಳಿ ಇದೀಗ ಒಪ್ಪಿಗೆ ಸೂಚಿಸಿದೆ. ಆರ್‌ಸಿಬಿ ಮೂಲಗಳಿಂದ ಇದೀಗ ಈ ಒಂದು ಮಾಹಿತಿ ಲಭ್ಯವಾಗಿದ್ದು, ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ 5 ಪಂದ್ಯ ಹಾಡಲು ಆರ್‌ಸಿಬಿ ಆಡಳಿತ ಮಂಡಳಿ ಸಮ್ಮತಿ ಸೂಚಿಸಿದೆ.

